ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallmmanudi@gmail.com  E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME - 13 ಸಂಪುಟ–13 | ISSUE - 35 ಸಂಚಿಕೆ– 35 | PAGE- 8 ಪುಟ–8 | ಬುಧವಾರ 12.03.2025 | RS.2/- ಬೆಲೆ 2/–

## ಗ್ಯಾರಂಟಿ ಅನುಷ್ಟಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರ

# ನೇಮಕ ವಿರೋಧಿಸಿ ಸದನದಲ್ಲಿ ಗದ್ದಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.11: ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗಾಗಿ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾಂಗ್ರೆಸ್ ನಾಯಕರು, ಕಾರ್ಯಕರ್ತರನ್ನು ನೇಮಕ ಮಾಡಿರುವುದನ್ನು ವಿರೋಧಿಸಿ ಪ್ರತಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಸದಸ್ಯರು ಧರಣಿ ನಡೆಸಿ, ಪದೇ ಪದೇ ಕಲಾಪಕ್ಕೆ ಅಡ್ಡಿಪಡಿಸಿದ್ದರಿಂದ ವಿಧಾನಸಭೆಯಲ್ಲಿಂದು ಅಕ್ಷರಶ: ಕೋಲಾಹಲ ಉಂಟಾಯಿತು

**ಶಾಸಕರ ಅಧಿಕಾರ ಮೊಟಕು ಆರೋಪ:**

ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆಗೆ ಕಾಂಗ್ರೆಸ್ ಕಾರ್ಯಕರ್ತರನ್ನು ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನಾಗಿ ನೇಮಿಸುವ ಮೂಲಕ ಸರ್ಕಾರ ಶಾಸಕರ ಅಧಿಕಾರವನ್ನು ಮೊಟಕುಗೊಳಿಸಿದೆ ಎಂದು ಆರೋಪಿಸಿದ ಪ್ರತಿಪಕ್ಷಗಳು, ಈ ಪಕ್ಷದ ಕಾರ್ಯಕರ್ತರಿಗೆ ಗೌರವಧನ ನೀಡಲು ರಾಜ್ಯದ ಬೊಕ್ಕಸದಿಂದ ಹಣವನ್ನು ಬಳಸಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದವು. ಈ ಎಲ್ಲ ಸಮಿತಿಗಳನ್ನು ರದ್ದುಪಡಿಸುವಂತೆ ಒತ್ತಾಯಿಸಿ ಪ್ರತಿಪಕ್ಷಗಳು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದವು. ಪ್ರತಿಪಕ್ಷಗಳ ಬೇಡಿಕೆಯನ್ನು ಸಚಿವ ಸಂಪುಟದಲ್ಲಿ ಪರಿಶೀಲಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಭರವಸೆ ನೀಡಿದರು.



**ದೊಡ್ಡ ಮಟ್ಟದ ವೇತನ:** ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷರು ಮತ್ತು ಐವರು ಉಪಾಧ್ಯಕ್ಷರಿಗೆ ರಾಜ್ಯ ಸಚಿವರ ಸೌಲಭ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿಗಳ ಅಧ್ಯಕ್ಷರಿಗೆ ಕ್ರಮವಾಗಿ ರೂ.40,000 ಮತ್ತು ರೂ.25,000 ಮಾಸಿಕ ಗೌರವಧನ ನೀಡಿರುವುದು ಪ್ರತಿಪಕ್ಷಗಳ ತೀವ್ರಟೀಕೆಗೆ ಗುರಿಯಾಯಿತು. ಜಿಲ್ಲಾ ಸಮಿತಿಯ ಉಪಾಧ್ಯಕ್ಷರಿಗೆ ಮಾಸಿಕ 10 ಸಾವಿರ ಗೌರವಧನ ನೀಡಿದರೆ, ಜಿಲ್ಲಾ ಮತ್ತು ತಾಲೂಕು ಮಟ್ಟದ ಸಮಿತಿ ಸದಸ್ಯರಿಗೆ ಕ್ರಮವಾಗಿ 1,100 ಮತ್ತು 1,000 ರೂ. ಗೌರವ ಧನ ನೀಡಲಾಗುತ್ತಿದೆ. ರಾಜ್ಯಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಹಾಗೂ 31 ಮಂದಿ ಸದಸ್ಯರಿದ್ದಾರೆ. ಜಿಲ್ಲಾ ಮಟ್ಟದ ಸಮಿತಿಯಲ್ಲಿ ಅಧ್ಯಕ್ಷರು, ಐವರು ಉಪಾಧ್ಯಕ್ಷರು ಮತ್ತು 15 ಸದಸ್ಯರನ್ನು ಹೊಂದಿದ್ದರೆ, ತಾಲೂಕು ಮಟ್ಟದ ಸಮಿತಿಗೆ ಅಧ್ಯಕ್ಷರು, 14 ಮಂದಿ ಸದಸ್ಯರಿದ್ದಾರೆ.

**ರಾಜ್ಯದ ಬೊಕ್ಕಸದಿಂದ ಕಾಂಗ್ರೆಸ್ ಕಾರ್ಯಕರ್ತರಿಗೆ ಹಣ:**

ಪ್ರಶ್ನೋತ್ತರ ಕಲಾಪದಲ್ಲಿ ವಿಷಯ ಪ್ರಸ್ತಾಪಿಸಿದ ಜೆಡಿಎಸ್ ಶಾಸಕ ಎಂ. ಪಿ. ಕೃಷ್ಣಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಸಮಿತಿಗೆ ಸರ್ಕಾರ ಏಕೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಕ ಮಾಡಿದೆ ಎಂದು ಎಂದು ಪ್ರಶ್ನಿಸಿದರು. ಶಾಸಕರು ಮತ್ತು ಅಧಿಕಾರಿಗಳು ಇಲ್ಲವೇ? ರಾಜ್ಯದ ಬೊಕ್ಕಸವನ್ನು ಕಾಂಗ್ರೆಸ್ ಕಾರ್ಯಕರ್ತರಿಗೆ ಈ ರೀತಿ ನೀಡಬಹುದೇ? ಈ ದೇಶದಲ್ಲಿ ವಿವಿಧ ಪಕ್ಷಗಳು ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿವೆ, ಆದರೆ ಅದರ ಅನುಷ್ಠಾನಕ್ಕೆ ಎಂದಿಗೂ ಪಕ್ಷದ ಕಾರ್ಯಕರ್ತರನ್ನು ನೇಮಿಸಿಲ್ಲ. ಇದು ತಪ್ಪು. ಇದು ಕಾನೂನುಬಾಹಿರ ಎಂದರು. ಅನೇಕ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಕೃಷ್ಣಪ್ಪ ಅವರೊಂದಿಗೆ ಸೇರಿಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಬಿಜೆಪಿ ಶಾಸಕ ಸುನೀಲ್ ಕುಮಾರ್ ಮಾತನಾಡಿ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರ ಸಂಬಳ ಹೆಚ್ಚಿಸಲು ಹಿಂಜರಿಯುವ ಸರ್ಕಾರ, ಗ್ಯಾರಂಟಿ ಅನುಷ್ಟಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಿಸಿ ದೊಡ್ಡ ಸಂಬಳ ನೀಡಲಾಗುತ್ತಿದೆ. ಏನಿದರ ಅರ್ಥ? ಎಲ್ಲಾ ಯೋಜನೆಗಳು ಡಿಬಿಟಿ ಮೂಲಕ ಆನ್

(2ನೇ ಪುಟ ನೋಡಿ)

## ನೀರು, ಆಸ್ತಿ ಕರ ಉಳಿಸಿಕೊಂಡ ಬ್ರಿಮ್ಸ್ ; ನೀರು ಸರಬರಾಜು ನಿಲ್ಲಿಸಲು ಮುಂದಾದ ನಗರ ಸಭೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 11 : ಜಿಲ್ಲಾ ಆಸ್ಪತ್ರೆ ಬ್ರಿಮ್ಸ್? ಕೊಟ್ಯಾಂತರ ರೂಪಾಯಿ ಬಿಲ್ ಮತ್ತು ತೆರಿಗೆ? ಬಾಕಿ ಉಳಿಸಿಕೊಂಡಿದೆ. ಬ್ರಿಮ್ಸ್ ಆಸ್ಪತ್ರೆ ಕಳೆದ ಸುಮಾರು ವರ್ಷಗಳಿಂದ ನೀರಿನ, ಆಸ್ತಿ ಬಿಲ್? ಪಾವತಿಸಿಲ್ಲ. 10 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಇದರಲ್ಲಿ ನೀರಿನ ಕರ 1.5 ಕೋಟಿ ರೂ. ಮತ್ತು ಆಸ್ತಿ ಕರ 8.5 ಕೋಟಿ ರೂ. ಬಾಕಿ ಇದೆ. ಈ ಹಿನ್ನೆಲೆಯಲ್ಲಿ ಬೀದರ್ ನಗರ ಸಭೆ ನೀರಿನ ಕರ, ಆಸ್ತಿ ಕರ ಪಾವತಿಸುವಂತೆ ಹತ್ತಾರು ನೋಟೀಸ್ ನೀಡಿದ್ದರೂ ಸಹಿತ ಬ್ರಿಮ್ಸ್? ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಈ ಹಿನ್ನೆಲೆಯಲ್ಲಿ ನೀರು ಸರಬರಾಜು ನಿಲ್ಲಿಸುತ್ತೇವೆ ಎಂದು ನಗರ ಸಭೆಯ ಆಯುಕ್ತರು ಎಚ್ಚರಿಸಿದ್ದಾರೆ.

ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಹಣ ವಸೂಲಾತಿಯಾಗುತ್ತಿಲ್ಲ. ನಗರ ಸಭೆಗೆ ತನ್ನ ಆದಾಯ ಮೂಲವೇ ತೆರಿಗೆ ಹಣ, ಆದರೆ ಅದನ್ನೇ ವಸೂಲಿ ಮಾಡದೆ ಹಾಗೇ ಬಿಟ್ಟರೆ ನಗರದ ಅಭಿವೃದ್ಧಿಯಾದರೂ ಹೇಗೆ ಆಗುತ್ತದೆ ಎಂದು ಸಾರ್ವಜನಿಕರು ಪ್ರಶ್ನಿಸಿದ್ದಾರೆ. ಪ್ರತಿ ತಿಂಗಳು ಸ್ವಲ್ಪ ಸ್ವಲ್ಪ ತೆರಿಗೆ ವಸೂಲಿ ಮಾಡಿದ್ದರೇ ಇಷ್ಟೊತ್ತಿಗಾಗಲೇ ತೆರಿಗೆ ಹಣ ನಗರಸಭೆಗೆ ಬರುತ್ತಿತ್ತು ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಕೋಟ್ಯಾಂತರ ರೂಪಾಯಿ ತೆರಿಗೆ ಹಣ ವಸೂಲಾಗದೆ ಹಾಗೆ ಉಳಿದಿದೆ. ಇದು ಸಹಜವಾಗಿಯೇ ಸಾರ್ವಜನಿಕರ ಆಕ್ರೋಶಕ್ಕೂ ಕೂಡಾ ಕಾರಣವಾಗಿದೆ. ಬೇಸಿಗೆ ಆರಂಭದಲ್ಲಿ ಬ್ರಿಮ್ಸ್‌ಗೆ ನೋಟಿಸ್ ಮೂಲಕ ಎಚ್ಚರಿಕೆ ನೀಡಿದ ನಗರಸಭೆ ಅಧಿಕಾರಿಗಳು ಹತ್ತು ಹಲವು ಬಾರಿ ನೋಟಿಸ್ ಮೂಲಕ ಸೂಚಿಸಿದ್ರು ಯಾರೊಬ್ಬ ಬ್ರೀಮ್ಸ ಅಧಿಕಾರಿ ಹಣ ಪಾವತಿ ಮಾಡುವ ಗೋಜಿಗೆ ಬಂದಿಲ್ಲ. ಪಾವತಿ ಮಾಡದ್ದಿದಲ್ಲಿ ನೀರು ಸರಬರಾಜು ನೀಲಿಸಲಾಗುವುದು ಎಂದು ನಗರ ಸಭೆ ಆಯುಕ್ತ ಶೀವರಾಜ ರಾಠೋಡ ಮಾಹಿತಿ ನೀಡಿದ್ದಾರೆ.

## ಗ್ಯಾರಂಟಿಗೆ ಮುಕ್ಕಾಲು ಭಾಗ ಖರ್ಚು ಮಾಡಿದ್ರೆ ಆಡಳಿತ ಕಷ್ಟ: ರಂಭಾಪುರಿ ಶ್ರೀ




ಮಲ್ಲಮ್ಮ ನುಡಿ ವಾರ್ತೆ

ಚಿಕ್ಕಮಗಳೂರು:ಮಾ.11: ಗ್ಯಾರಂಟಿಗೆ ಮುಕ್ಕಾಲು ಭಾಗ ಹಣ ಖರ್ಚು ಮಾಡಿದ್ರೆ ಆಡಳಿತ ನಡೆಸುವುದು ಕಷ್ಟ ಎಂದು ರಂಭಾಪುರಿ ಶ್ರೀಗಳು ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ. ಬಾಳೆಹೊನ್ನೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈವೇಳೆ, ರಾಜ್ಯ ಸರ್ಕಾರ ಹಿಂದಿನ ಸರ್ಕಾರದ ಹಲವು ಯೋಜನೆಗಳನ್ನು ತಡೆಹಿಡಿದಿದೆ. ಬಜೆಟ್‌ನಲ್ಲೂ ಮಠ ಮಂದಿರಗಳಿಗೆ ವಿಶೇಷವಾದ ಅನುದಾನ ಕೊಟ್ಟಿಲ್ಲ. ಆಡಳಿತ ಪಕ್ಷದ ಶಾಸಕರು ಕೂಡ ಅಭಿವೃದ್ಧಿಗೆ ಹಣ ಇಲ್ಲದೆ ಕೊರಗುತ್ತಿದ್ದಾರೆ. ಜನರ ಬಳಿ ಹೋಗುವುದು ಕಷ್ಟವಾಗಿದೆ ಎಂದು ಕಾಂಗ್ರೆಸ್ ಶಾಸಕರೇ ಹೇಳುತ್ತಾರೆ ಎಂದಿದ್ದಾರೆ.

ಸೋಮವಾರ ನಡೆದ ಕಾಂಗ್ರೆಸ್ ಸಭೆಯಲ್ಲಿ ಅನುದಾನದ ಬಗ್ಗೆ ಚರ್ಚೆ ಆಗಿರಬಹುದು. ಜಾಸ್ತಿ ಅಲ್ಲದಿದ್ದರೂ. ಆಯಾ ಕ್ಷೇತ್ರದ ಶಾಸಕರಿಗೆ ವಿಶೇಷ ಅನುದಾನ ಕೊಡಬಹುದು ಎನ್ನುವ ನಂಬಿಕೆ

(2ನೇ ಪುಟ ನೋಡಿ)

## ಬೀದರನಲ್ಲಿ ರಾಜ್ಯಮಟ್ಟದ ಜಾನಪದ ಜಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.11: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿಶೇಷಘಟಕಯೋಜನೆಯಡಿ ಬೀದರ ನಗರದಲ್ಲಿ ರಾಜ್ಯ ಮಟ್ಟದ ಜಾನಪದ ಜಾತ್ರೆಯನ್ನು ಮಾರ್ಚ ಕೊನೆಯ ವಾರದಲ್ಲಿ ಅಥವಾ ಏಪ್ರಿಲ್ ಮೊದಲ ವಾರದಲ್ಲಿ ನಡೆಸಲು ತೀರ್ಮಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ರಾಜ್ಯದ ಗ್ರಾಮೀಣ ಜಾನಪದ ಕಲೆ, ಸಂಸ್ಕೃತಿ, ಪರಂಪರೆ ಪ್ರತಿಬಿಂಭಿಸುವ ಜಾನಪದ ಜಾತ್ರೆಯನ್ನು ಬೀದರ ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಲಾಗುವುದೆಂದರು. ಸ್ಥಳೀಯ ಹಾಗೂ ಹೊರ ಜಿಲ್ಲೆಯ ಕಲಾವಿದರು ಈ ಜಾನಪದ ಜಾತ್ರೆಯಲ್ಲಿ ಪಾಲ್ಗೊಂಡು ವಿವಿಧ ಸಾಂಸ್ಕೃತಿಕ ರಸದೌತಣವನ್ನು ಉಣಬಡಿಸಲಿದ್ದಾರೆ.

ಜಾತ್ರೆಯ ಒಂದು ದಿನ ಮುಂಚೆ ಕಾರ್ಯಕ್ರಮದ ಜಾಗೃತಿಗಾಗಿ ಸಾವಿರಾರು ವಿದ್ಯಾರ್ಥಿಗಳಿಂದ, ಸಂಘ–ಸಂಸ್ಥೆಗಳಿಂದ ವಾಕಾಥಾನ್ ಹಮ್ಮಿಕೊಳ್ಳಲಾಗುವುದು. ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳಲ್ಲಿ ನಗರದ ಮುಖ್ಯ ವೃತ್ತಗಳಲ್ಲಿ ಪ್ರಚಾರ ಹಮ್ಮಿಕೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ವಿವಿಧ ಸಮಿತಿ ಹಾಗೂ ಉಪ ಸಮಿತಿಗಳನ್ನು ರಚಿಸುವುದು. ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಇನ್ನೊಂದು ಸಭೆ ನಡೆಸಲಾಗುವುದೆಂದರು.

ಬೇರೆ ಜಿಲ್ಲೆಗಳಿಂದ ಬರುವ ಕಲಾವಿದರಿಗೆ ಸೂಕ್ತ ವಾಸ್ತವ್ಯ ಹಾಗೂ ಊಟದ ವ್ಯವಸ್ಥೆ ಮಾಡಲಾಗುವುದು. ನಿಯಮಾನುಸಾರ ಸಂಭಾವನೆ ಹಾಗೂ ಪ್ರಯಾಣ ವೆಚ್ಚ ನೀಡಲಾಗುವುದೆಂದು ಕನ್ನಡ ಹಾಗೂ ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ ಸಭೆಯಲ್ಲಿ ತಿಳಿಸಿದರು.

ಜಾನಪದ ಜಾತ್ರೆಯಲ್ಲಿ ಬೆಳಿಗ್ಗೆ ನಗರದಾದ್ಯಂತ ಸಾವಿರಾರು ಕಲಾವಿದರಿಂದ ಮೆರವಣಿಗೆ ಜರುಗಲಿದ್ದು, ಕವಿಗೋಷ್ಠಿ, ಸಂಗೀತ ಕಾರ್ಯಕ್ರಮಗಳು, ನಾಟಕ ಹಾಗೂ ವಿವಿಧ ರೀತಿಯ ಕಲಾ ಪ್ರಕಾರಗಳು, ನೃತ್ಯ

(2ನೇ ಪುಟ ನೋಡಿ)

## ಬಾಬು ಪೊಚಂಪಳ್ಳಿಯವರಿಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿಯ ಶುಭಾಶಯಗಳು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಮಾ.11 : ನಾಡಿನ ಸಮಸ್ತ ಜನತೆಗೆ ಅಖಿಲ ಭಾರತ ವೀರಶೈವ ಮಹಾಸಭಾದ ಹುಮನಾಬಾದ್ ತಾಲ್ಲೂಕು ಅಧ್ಯಕ್ಷ ಬಾಬು ಪೊಚಂಪಳ್ಳಿ ರವರು ಶ್ರೀ



ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತಿಯ ಶುಭಾಶಯಗಳನ್ನು ಕೊರಿದ್ದಾರೆ.

## ಹುಮನಾಬಾದ್ ಸರ್ಕಾರಿ ಜಾಗ ಖಾಸಗಿಯವರ ಪರವಾಗಿ ಮಾರ್ಪಾಡು?

ಮಲ್ಲಮ್ಮನುಡಿ ವಾರ್ತೆ ವಿಶೇಷ ವರದಿ ಹುಮನಾಬಾದ:ಮಾ.11: ಬಹು ಬೆಲೆಬಾಳುವ ನಗರದ ಕೆಲ ಸರಕಾರಿ ಜಾಗಗಳು ಖಾಸಗಿಯವರ ಪರವಾಗಿ ಮಾರ್ಪಾಡು ಆಗುತ್ತಿವೆ ಎಂಬ ಅನುಮಾನ ಜನರಲ್ಲಿ ಆತಂಕವನ್ನುಂಟು ಮಾಡುತ್ತಿದೆ.

ಕೋಟಿಗಟ್ಟಲೇ ಬೆಲೆಬಾಳುವ ಜಾಗಗಳು ಅನಧಿಕೃತ ವಾಗಿ ಖಾಸಗಿ ವ್ಯಕ್ತಿಗಳು ಅವರ ಪ್ರಭಾವವನ್ನು ಬಳಸಿಕೊಂಡು ತಮ್ಮ ಹೆಸರಿಗೆ ಮಾಡಿಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ. ಹಾಗಾಗಿ ಸಂಬಂಧ ಪಟ್ಟ ಅಧಿಕಾರಿಗಳು ನಗರದಲ್ಲಿರುವ ಸರಕಾರಿ ಜಾಗಗಳಿಗೆ ಬೇಲಿ ಹಾಕಿಸಿ ರಕ್ಷಣೆ ಮಾಡುವುದು ಅವಶ್ಯಕ ವಾಗಿದೆ ಎಂಬುದು ಜನಾಭಿಪ್ರಾಯವಾಗಿದೆ

## ಜಿಲ್ಲೆಯಾದ್ಯಾಂತ 52,812 ಪ್ರಕರಣಗಳಿಂದ 28.03 ಕೋಟಿ ರೂ. ಇತ್ಯರ್ಥ:ನ್ಯಾ.ಪ್ರಕಾಶ ಬನಸೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.11: ಬೀದರ ಜಿಲ್ಲೆಯಲ್ಲಿ ಮಾರ್ಚ.8 ರಂದು ನಡೆದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲೆಯಾದ್ಯಾಂತ ಒಟ್ಟು 52,812 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿ 28,03,91,766 ರೂ. ಪರಿಹಾರವನ್ನು ಕಕ್ಷಿದಾರರಿಗೆ ಒದಗಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಹೇಳಿದರು.

ಅವರು ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಾದ್ಯಂತ 10,044



(ಪೆಂಡಿಂಗನಲ್ಲಿನ) ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು 12,83,46,917 ರೂ ವಸೂಲಾತಿ ಮತ್ತು ಪರಿಹಾರ ಒದಗಿಸಲಾಗಿದೆ. ಜಿಲ್ಲೆಯಾದ್ಯಾಂತ ಒಟ್ಟು 42,768 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು 15,20,44,849 ರೂ ವಸೂಲಾತಿ ಮತ್ತು ಪರಿಹಾರ ಒದಗಿಸಲಾಗಿದೆ ಎಂದು ಹೇಳಿದರು.

ಈ ಬಾರಿಯ ಲೋಕ ಆದಾಲತನಲ್ಲಿ ವೈವಾಹಿಕ ವ್ಯಾಜ್ಯವನ್ನು ಇತ್ಯರ್ಥಪಡಿಸಿ ಸಂದಾನದ ಮೂಲಕ 07 ಜೋಡಿ ದಂಪತಿಯನ್ನು ರಾಜಿ ಸಂಧಾನದ ಮೂಲಕ ಒಂದು ಮಾಡಲಾಗಿದೆ ಹಾಗೂ ನ್ಯಾಯಲಯಗಳಲ್ಲಿ ಬಾಕಿ ಇರುವ ಒಟ್ಟು 8 ಹಳೆಯ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆಂದರು.

ಲೋಕ ಆದಲಾತನಲ್ಲಿ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸಹಕರಿಸಿದ ಎಲ್ಲಾ ಇಲಾಖೆಯವರಿಗೂ ಹಾಗೂ ಜಿಲ್ಲೆಯಾದ್ಯಾಂತ ಹೆಚ್ಚಿನ ಪ್ರಚಾರ ಕೈಗೊಂಡ ಪತ್ರಿಕಾ ಮಾದ್ಯಮದವರಿಗೂ ಪ್ರಾಧಿಕಾರದ ಮುಲಕ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಜಗದೀಶ್ವರ ದೊರೆ, ಆಕಾಶ ಸಜ್ಜನಶೆಟ್ಟಿ, ನಾಗರಾಜ, ಪ್ರೀತಿ, ಜೀವನ, ಈರಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಬಾರ್ಡ್‌ನಿಂದ ರಾಜ್ಯಕ್ಕೆ ಕಡಿಮೆ ಅನುದಾನ ಸಚಿವ ರಾಜಣ್ಣ ಅಸಮಾಧಾನ

ಮಲ್ಲಮ್ಮನುಡಿ ವಾರ್ತೆ



ಬೆಂಗಳೂರು:ಮಾ.11: ನಬಾರ್ಡ್‌ನಿಂದ ಈ ಬಾರಿ ರಾಜ್ಯಕ್ಕೆ ಕಡಿಮೆ ಹಣಕಾಸು ನೆರವು ಸಿಕ್ಕಿದೆ ಅಂತ ಸಹಕಾರ ಸಚಿವ ರಾಜಣ್ಣ ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ದಿನೇಶ್ ಗೂಳಿಗೌಡ ಪ್ರಶ್ನೆಗೆ ಸಚಿವರು ಉತ್ತರ ನೀಡಿದರು.

ನಬಾರ್ಡ್ ಸಂಸ್ಥೆ ಈ ವರ್ಷ ರಾಜ್ಯಕ್ಕೆ ಕಡಿಮೆ ಹಣಕಾಸು ನೆರವು ನೀಡಿದೆ. 2023–24 ರಲ್ಲಿ 5,600 ಕೋಟಿ ಹಣಕಾಸು ನೆರವು ಕೊಟ್ಟಿತ್ತು. 2024–25 ರಲ್ಲಿ 2,340 ಕೋಟಿ ಮಾತ್ರ ನಬಾರ್ಡ್ ಹಣಕಾಸು ನೆರವು ಕೊಟ್ಟಿದೆ. 2023–24 ನೇ ಸಾಲಿಗೆ ಹೋಲಿಕೆ ಮಾಡಿದ್ರೆ 58% ಕಡಿಮೆ ಹಣಕಾಸು ನೆರವು ನಬಾರ್ಡ್ ಕೊಟ್ಟಿದೆ ಅಂತ ಮಾಹಿತಿ ನೀಡಿದರು. ಕಡಿಮೆ ಹಣ ಕೊಟ್ಟ ಹಿನ್ನೆಲೆಯಲ್ಲಿ ಸಿಎಂ ಅವರು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದರು. ನಾನು ಕೂಡಾ ಬಿಜೆಪಿ ಎಂಪಿಗಳಿಗೆ ಪತ್ರ ಬರೆದು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಲಾಗಿತ್ತು. ಬಳಿಕ ನಬಾರ್ಡ್ 896 ಕೋಟಿ ಬಿಡುಗಡೆ ಮಾಡಿದೆ. ಇದೂ ಕೂಡಾ ಸಾಕಾಗಿಲ್ಲ. ಹೀಗಾಗಿ ಮತ್ತೆ ಬೇಡಿಕೆ

(2ನೇ ಪುಟ ನೋಡಿ)

## ಕೆಪಿಸಿಎಲ್ ನೇಮಕಾತಿ ಆದೇಶ ಶೀಘ್ರ ಪ್ರಕಟ: ಸಚಿವ ಕೆ.ಜೆ ಜಾರ್ಜ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರ:ಮಾ.11: ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ (ಕೆಪಿಸಿಎಲ್) ಗೆ ನೇಮಕಗೊಂಡ 622 ಸಿಬ್ಬಂದಿಗೆ ಶೀಘ್ರದಲ್ಲೇ ನೇಮಕಾತಿ ಆದೇಶಗಳನ್ನು ಹೊರಡಿಸಲಾಗುವುದು ಎಂದು ಇಂಧನ ಸಚಿವ ಕೆ ಜೆ ಜಾರ್ಜ್ ಸೋಮವಾರ ಹೇಳಿದರು.

ಬಿಜೆಪಿಯ ಶರಣು ಸಲಗಾರ್ ಅವರು ಗಮನ ಸೆಳೆಯುವ ನಿರ್ಣಯದ ಸಮಯದಲ್ಲಿ, ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ 394 ಮತ್ತು ಹೈ–ಕೇತರ ಪ್ರದೇಶಕ್ಕೆ 228 ಮೀಸಲಾದ ಸಹಾಯಕ



ಎಂಜಿನಿಯರ್‌ಗಳು, ಕಿರಿಯ ಎಂಜಿನಿಯರ್‌ಗಳು, ರಸಾಯನಶಾಸ್ತ್ರಜ್ಞರು ಮತ್ತು ರಾಸಾಯನಿಕ ಮೇಲ್ವಿಚಾರಕರ 622 ಹುದ್ದೆಗಳನ್ನು ಭರ್ತಿ ಮಾಡಲು 2017 ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. 8 ವರ್ಷಗಳು ಕಳೆದರೂ ನೇಮಕಾತಿ ಆದೇಶ ಸಿಕ್ಕಿಲ್ಲ. ಮನುಷ್ಯನ ಆಯುಷ್ಯ 80 ವರ್ಷ ಎಂದುಕೊಂಡಿದ್ದೀರೋ? 800 ವರ್ಷ ಎಂದುಕೊಂಡಿದ್ದೀರೋ? ಎಂದು ಸರಕಾರವನ್ನು ಪ್ರಶ್ನಿಸಿದರು.

ಇದಕ್ಕೆ ಉತ್ತರಿಸಿದ ಸಚಿವರು, 2017ರಲ್ಲಿ ಅಧಿಸೂಚನೆ ಆಗಿದ್ದು ನಿಜ. ಆದರೆ, ಪ್ರಕರಣ ಹೈಕೋರ್ಟ್ ಅಂಗಳದಲ್ಲಿದೆ. ನ್ಯಾಯಾಲಯದ ಆದೇಶದ ಮೇರೆಗೆ 2024ರ ಸೆ.17 ರಂದು ಸಂಭಾವ್ಯ ಆಯ್ಕೆ ಪಟ್ಟಿ ಬಿಡುಗಡೆ ಮಾಡಲಾಗಿತ್ತು. ಈಗಲೂ ಹೈಕೋರ್ಟ್ ಆದೇಶಕ್ಕೆ ಒಳಪಟ್ಟು 1 ವಾರದಲ್ಲಿ ನೇಮಕಾತಿ ಆದೇಶ ನೀಡುತ್ತೇವೆ ಎಂದು ಹೇಳಿದರು.

ಒಂದನೇ ಪುಟದಿಂದ

# ರಾಜ್ಯಮಟ್ಟದ ಜಾನಪದ ಜಾತ್ರೆ

ಪ್ರದರ್ಶನಗೊಳ್ಳಲಿವೆಯೆಂದರು.ವಿವಿಧ ಇಲಾಖೆಗಳಿಂದ ಮಳಿಗೆಗಳನ್ನು ಹಾಕುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಸ್ಥಳೀಯವಾಗಿ ಲಭ್ಯವಿರುವ ಕಲಾ ಪರಿಕರಗಳನ್ನು ಕಾಸ್ಟ ಕಲಾಕೃತಿ, ಬಿದರಿ ಕಲೆ, ಲಂಬಾಣಿ ಉಡುಪು, ಚಿತ್ರಸಂತೆ, ಪುಸ್ತಕ ಮಳಿಗೆ ಮುಂತಾದವುಗಳನ್ನು ಸಹ ಹಮ್ಮಿಕೊಳ್ಳಲಾಗುವುದೆಂದರು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಸಕರಾದ ಸಿದ್ರಾಮ ಶಿಂಧೆ, ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಪ್ರೊ.ಜಗನ್ನಾಥ ಹೆಬ್ಬಾಳೆ, ಎಂ.ಎಸ್.ಮನೋಹರ ಭಾರತಿ ವಸ್ತ್ರದ, ಪಾರ್ವತಿ ಸೋನಾರೆ, ದಿಲೀಪ ಕಾಡಲಾದ, ದೇವಿದಾಸ ಚಿಮಕೋಡ, ವಿವಿಧ ಇಲಾಖೆ ಅಧಿಕಾರಿಗಳು ಸೇರಿದಂತೆ ಇನ್ನಿತರರು ಸಭೆಗೆ ಜಾನಪದ ಜಾತ್ರೆ ಯಶಸ್ವಿ ಆಗುವ ನಿಟ್ಟಿನಲ್ಲಿ ಸಲಹೆ ಸೂಚನೆ ನೀಡಿದರು.

# ನೇಮಕ ವಿರೋಧಿಸಿ ಸದನದಲ್ಲಿ ಗದ್ದಲ

ಲೈನ್ ನಲ್ಲಿ ಅನುಷ್ಠಾನಗೊಳ್ಳುತ್ತಿರುವಾಗ ಇಂತಹ ಸಮಿತಿ ಏನು ಮಾಡುತ್ತವೆ ಎಂದು ಪ್ರಶ್ನಿಸಿದರು. ಡಿಕೆ ಶಿವಕುಮಾರ್ ಕಾಂಗ್ರೆಸ್ ಅಧ್ಯಕ್ಷರಾದ ನಂತರ ಸರ್ಕಾರ ಮತ್ತು ಕಾಂಗ್ರೆಸ್ ಪಕ್ಷದ ನಡುವೆ ಯಾವುದೇ ವ್ಯತ್ಯಾಸ ಇಲ್ಲದಂತಾಗಿದೆ. ಸರ್ಕಾರದ ಹಣವನ್ನು ಕಾಂಗ್ರೆಸ್ ತೆಗೆದುಕೊಳ್ಳುತ್ತಿದೆ ಎಂದು ಆರೋಪಿಸಿದರು.ಕಲಾಪ ಕೆಲಕಾಲ ಮುಂದೂಡಿಕೆ: ಈ ವೇಳೆ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಈ ವಿಚಾರದಲ್ಲಿ ವಿಪಕ್ಷಗಳು ರಾಜಕೀಯ ಮಾಡುತ್ತಿವೆ ಎಂದು ಆರೋಪಿಸಿದರು. ಇದರಿಂದ ವಿಪಕ್ಷಗಳ ಸದಸ್ಯರು ಕೆರಳಿದ್ದರಿಂದ ಆಡಳಿತ ಹಾಗೂ ವಿಪಕ್ಷ ಸದಸ್ಯರ ನಡುವೆ ವಾಗ್ವಾಳಿ ನಡೆಯಿತು. ಮಧ್ಯ ಪ್ರವೇಶಿಸಿದ ಶಿವಕುಮಾರ್, ಇದು ಸರ್ಕಾರದ ಇಚ್ಛಾಶಕ್ತಿ. ಈ ಸರ್ಕಾರವನ್ನು ಅಧಿಕಾರಕ್ಕೆ ತಂದ ಪಕ್ಷದ ಕಾರ್ಯಕರ್ತರಿಗೆ ಈ ಸರ್ಕಾರದ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಹಕ್ಕಿದೆ ಎಂದು ಸಮರ್ಥಿಸಿಕೊಂಡರು. ಗದ್ದಲ ಮುಂದುವರಿದ ಕಾರಣ ಸ್ಪೀಕರ್ ಯುಟಿ ಖಾದರ್ ಸದನವನ್ನು ಕೆಲಕಾಲ ಮುಂದೂಡಿದರು.ಕಲಾಪ ಮತ್ತೆ ಸಮಾವೇಶಗೊಂಡಾಗ ಶಾಸಕರು ತಮ್ಮ ತಮ್ಮ ಭಾಗದಲ್ಲಿ ಸರ್ಕಾರದ ಯೋಜನೆಗಳ ಅನುಷ್ಠಾನವನ್ನು ನೋಡಿಕೊಳ್ಳುತ್ತಾರೆ ಮತ್ತು ಶಾಸಕರನ್ನು ಕಡೆಗಣಿಸಿ ಈ ಸಮಿತಿಗಳನ್ನು ರಚಿಸುವುದು ಕಾನೂನುಬಾಹಿರ ಎಂದು ಕೃಷ್ಣಪ್ಪ ಹೇಳಿದರು.

**ಶಾಸಕರ ಯಾವುದೇ ಅಧಿಕಾರ ಮೊಟಕುಗೊಳಿಸುತ್ತಿಲ್ಲ:**ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿವೆ ಎಂದು ಆರೋಪಿಸಿದ ಶಿವಕುಮಾರ್, ಈ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವವರೆಗೆ ಈ ಯೋಜನೆಗಳನ್ನು ನಿಲ್ಲಿಸುವುದು ಅಸಾಧ್ಯ. 52,000 ಕೋಟಿ ರೂ.ಗಳ ಯೋಜನೆಗಳ ಅನುಷ್ಠಾನದ ಮೇಲುಸ್ತುವಾರಿ ಮಾಡಲು ಕಾಂಗ್ರೆಸ್ ಕಾರ್ಯಕರ್ತರಿಗೆ ಅವಕಾಶ ನೀಡಿರುವುದನ್ನು ಪ್ರತಿಪಕ್ಷಗಳು ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಶಾಸಕರ ಯಾವುದೇ ಅಧಿಕಾರವನ್ನು ಮೊಟಕುಗೊಳಿಸುತ್ತಿಲ್ಲ. ಒಂದು ವೇಳೆ ಆ ಸಮಿತಿಗೆ ಶಾಸಕರೇ ಮೇಲ್ವಿಚಾರಣೆ ಮಾಡಬೇಕೇ ಎಂಬುದರ ಕುರಿತು ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ತಿಳಿಸುತ್ತೇವೆ ಎಂದು ಹೇಳಿದರು.**ಹಣಕಾಸು ಬಿಲ್ ಮಸೂದೆಗೆ ಬಿಡಲ್ಲ:**ಸರ್ಕಾರವನ್ನು ತೀವ್ರವಾಗಿ ಖಂಡಿಸಿದ ಅಶೋಕ, ಹಣಕಾಸು ಮಸೂದೆ ಅಂಗೀಕಾರಕ್ಕೆ ಪ್ರತಿಪಕ್ಷಗಳು ಅಡ್ಡಿಪಡಿಸುವುದಾಗಿ ಎಚ್ಚರಿಸಿದರು. ಕಾಂಗ್ರೆಸ್ ಕಾರ್ಯಕರ್ತರ ಸಂತೋಷಕ್ಕಾಗಿ ರಾಜ್ಯದ ಬೊಕ್ಕಸದಿಂದ ಹಣ ಪಾವತಿಸುವುದನ್ನು ನಾವು ಏಕೆ ಅನುಮೋದಿಸಬೇಕು?" ಶಾಸಕರು ಚುನಾಯಿತರಾಗಿದ್ದಾರೆ ಮತ್ತು ಅವರ ಅಧಿಕಾರವನ್ನು ಮೊಟಕುಗೊಳಿಸಬಾರದು, ಅವರು "ಈ ಸಮಿತಿಗಳನ್ನು ರದ್ದುಗೊಳಿಸಬೇಕು. ಸಮಿತಿಯಲ್ಲಿ ಐದರಿಂದ ಹತ್ತು ಸದಸ್ಯರಿರಬಹುದು, ಆದರೆ ಶಾಸಕರ ನೇತೃತ್ವದಲ್ಲಿರಬೇಕು" ಎಂದು ಸರ್ಕಾರವನ್ನು ಒತ್ತಾಯಿಸಿದರು.ಸದನದ ಬಾವಿಗಿಳಿದು ವಿಪಕ್ಷಗಳ ಪ್ರತಿಭಟನೆ: ಮಹಾರಾಷ್ಟ್ರದಲ್ಲಿ ಬಿಜೆಪಿ ಸಚಿವರಿಗೆ ಆರೆಸ್ಸೆಸ್ ಕಾರ್ಯಕರ್ತರನ್ನು ಆಪ್ತ ಸಹಾಯಕರನ್ನಾಗಿ ನೇಮಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಸ್ತಾಪಿಸಿದಂತೆ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ವಾಗ್ವಾದ ನಡೆಯಿತು. ಇದರ ಬೆನ್ನಲ್ಲೇ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದ ಬಾವಿಗೆ ನುಗ್ಗಿ ಪ್ರತಿಭಟನೆ ಆರಂಭಿಸಿದರು.ಕಾಂಗ್ರೆಸ್ ಕಾರ್ಯಕರ್ತರ ನೇಮಕ: ವಿಧಾನಸಭೆಯಲ್ಲಿ ವಿಪಕ್ಷಗಳ ಗದ್ದಲ, ಕೋಲಾಹಲ!

## ಮಾಡಿದ್ರೆ ಆಡಳಿತ ಕಷ್ಟ: ರಂಭಾಪುರಿ ಶ್ರೀ

ಇದೆ ಎಂದಿದ್ದಾರೆ.ರಾಜ್ಯದಲ್ಲಿ ವೀರಶೈವ – ಲಿಂಗಾಯುತರ ಸಭೆ ವಿಜಯೇಂದ್ರ ಅಭಿಮಾನಿಗಳು ಮಾಡುತ್ತಿರಬಹುದು. ವಿಜಯೇಂದ್ರ ಅವರೇ ಮಾಡಿಸುತ್ತಿದ್ದಾರೆ ಎನ್ನುವ ಭಾವನೆ ಇಲ್ಲ. ಅಭಿಮಾನಿಗಳು ಅಭಿಮಾನದಿಂದ ಮಾಡಿರಬಹುದು. ಒಳ್ಳೆಯ ನಾಯಕತ್ವ, ರಾಜ್ಯದ ಹಿತ ಚಿಂತನೆ ಕಾಪಾಡಲು ಜನರ ಸಹಕಾರ ಅವಶ್ಯಕ. ವಿಜಯೇಂದ್ರ ವಿಚಾರದಲ್ಲೂ ಒಳ್ಳೆಯದು ಮಾಡಿದಾಗ ಹೆಮ್ಮೆಯಿಂದ ಹೇಳುತ್ತೇವೆ. ಅಲ್ಲದ ಮಾರ್ಗ ತುಳಿದಾಗ ತಿದ್ದಿಕೊಳ್ಳಲು ಸೂಚನೆ ನೀಡುವುದಕ್ಕೂ ಹಿಂದೇಟು ಹಾಕಲ್ಲ ಎಂದಿದ್ದಾರೆ.

ವಿಜಯೇಂದ್ರ ಅವರ ರಾಜ್ಯಾಧ್ಯಕ್ಷ ಸ್ಥಾನದ ಅಪಸ್ವರಕ್ಕೆ ರಾಷ್ಟ್ರ–ರಾಜ್ಯ ನಾಯಕರು ಕೂತು ಮಾತಾಡೋದು ಒಳ್ಳೆಯದು ಎಂದು ಸಲಹೆ ನೀಡಿದ್ದಾರೆ.

## ಅನುದಾನ ಸಚಿವ ರಾಜಣ್ಣ ಅಸಮಾಧಾನ

ಸಲ್ಲಿಸಲಾಗಿದೆ. ನಮ್ಮ ಬೇಡಿಕೆ 9119 ಕೋಟಿ ಇದೆ. ಆದರೆ ನಬಾರ್ಡ್ ಈ ಬಾರಿ 2,340 ಕೋಟಿ ಮಾತ್ರ ಬಿಡುಗಡೆ ಮಾಡಿದ್ದಾರೆ. ಇದರಿಂದ ರೈತರಿಗೆ ಸಾಲ ಕೊಡಲು ಆಗ್ತಿಲ್ಲ. ಕೇಂದ್ರ ಅನುದಾನದ ಲಭ್ಯತೆ ನೋಡಿಕೊಂಡು ಸಾಲ ನೀಡುವ ಕೆಲಸ ಮಾಡುತ್ತೇವೆ ಅಂತ ತಿಳಿಸಿದರು.

## "ಶುಲ್ಕ ಮರುಪಾವತಿ" ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ,ಮಾ.11:ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ–ಅಲೆಮಾರಿ ವಿದ್ಯಾರ್ಥಿಗಳಿಂದ "ಶುಲ್ಕ ಮರುಪಾವತಿ"ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು2025ರಮಾರ್ಚ್ 30 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

2023–24ನೇ ಸಾಲಿನಲ್ಲಿ ಮೆಟ್ರಿಕ್‌ನಂತರದಕೋರ್ಸುಗಳಾದ ಸ್ನಾತಕೋತ್ತರ ಪದವಿ,ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿ ಕೆಲ ಕೋರ್ಸ್‌ಗಳಿಗೆ ಕೌನ್ಸಲಿಂಗ್ ತಡವಾಗಿ ಪ್ರಾರಂಭವಾಗಿರುವ ಮತ್ತು ಹಿಂದಿನ ಶೈಕ್ಷಣಿಕ ವರ್ಷದ ಫಲಿತಾಂಶ ತಡವಾಗಿ ನೀಡಿದ ಕಾರಣ ಇಲಾಖೆಯಿಂದ ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲ.

# ಶ್ರೀಶೈಲಂ ಮಹಾಕ್ಷೇತ್ರದಲ್ಲಿ ಮಾ.27 ರಿಂದ 31ರವರೆಗೆ ಯುಗಾದಿ ಮಹೋತ್ಸವ





ಮಲ್ಲಮ್ಮ ನುಡಿ ವಾರ್ತೆ
ಆಂದ್ರಪ್ರದೇಶ (ಶ್ರೀಶೈಲಂ): ಮಾ.11: ಮಾರ್ಚ್ 27 ರಿಂದ 31ರವರೆಗೆ ಶ್ರೀಶೈಲ ಮಹಾಕ್ಷೇತ್ರದಲ್ಲಿ ಯುಗಾದಿ ಮಹೋತ್ಸವಗಳು ಜರುಗಲಿವೆ ಎಂದು ನಂದ್ಯಾಲ ಜಿಲ್ಲೆಯ ಧಾರ್ಮಿಕ ದತ್ತಿ ಇಲಾಖೆ, ಶ್ರೀಶೈಲಂ ದೇವಸ್ಥಾನದ ಸ್ಪೆಷಲ್ ಗ್ರೇಡ್ ಡಿಪ್ಯೂಟಿ ಕಲೆಕ್ಟರ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿ ಎಂ.ಶ್ರೀನಿವಾಸರಾವು ಅವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.ಭಕ್ತರ ಸೌಕರ್ಯವಾಗಿ ವಿವಿಧ ವಿಸ್ತಾರವಾದ ವ್ಯವಸ್ಥೆಗಳನ್ನು ಮಾಡುತ್ತಿರುವ ಶ್ರೀಶೈ ದೇವಸ್ಥಾನವು ಉತ್ಸವ ದಿನಗಳಲ್ಲಿ ಸ್ವಾಮಿಯವರ ಸ್ಪರ್ಶ ದರ್ಶನೆಯ ನಿಲ್ಲುವಿಕೆ, ಈ ಉತ್ಸವಗಳಲ್ಲಿ ಸ್ವಾಮಿಯವರ ಅಲಂಕಾರ ದರ್ಶನ ( ಲಘು ದರ್ಶನ)ಕ್ಕೆ ಮಾತ್ರ ಭಕ್ತರಿಗೆ ಅವಕಾಶವಿದೆ. ಉತ್ಸವದ 10 ದಿನಗಳ ಹಿಂದಿನಿಂದ ಅಂದರೆ ಮಾರ್ಚ್ 17 ರಿಂದ 26ರವರೆಗೆ ಭಕ್ತರಿಗೆ ಪ್ರತಿದಿನ ನಿರ್ದಿಷ್ಟ ಸಮಯಗಳಲ್ಲಿ 4 ಹಂತಗಳಾಗಿ ಶ್ರೀ ಸ್ವಾಮಿಯನ್ನು ಸ್ಪರ್ಶಿಸುವ ಸ್ಪರ್ಶ ದರ್ಶನಕ್ಕೆ ಅವಕಾಶವಿದೆ. ಕರೆಂಟ್ ಬುಕಿಂಗ್ ಮೂಲಕ ಮತ್ತು ಆನ್‌ಲೈನ್‌ನಲ್ಲಿ ರೂ 500 ರೂಪಾಯಿ ಶುಲ್ಕದಿಂದ ಸ್ಪರ್ಶ ದರ್ಶನ ಟಿಕೆಟ್‌ಗಳನ್ನು ಪಡೆಯುವ ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

ಈ ಯುಗಾದಿ ಉತ್ಸವಗಳಲ್ಲಿ ಸುಮಾರು 8 ಲಕ್ಷ ಮಂದಿ ಭಕ್ತರು ಶ್ರೀ ಶೈಲಂ ಕ್ಷೇತ್ರವನ್ನು ಸಂದರ್ಶಿಸಬಹುದೆಂದು ಭಾವಿಸಲಾಗಿದೆ. ಯುಗಾದಿ ಉತ್ಸವಗಳು ಪ್ರಾರಂಭವಾಗುವ 10 ದಿನಗಳ ಮೊದಲು ಅಂ–ದರೆ ಮಾರ್ಚ್ 17 ರಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಈ ಕ್ಷೇತ್ರಕ್ಕೆ ಅಗಮಿಸುತ್ತಾರೆ.

ಈ ಉತ್ಸವಗಳಿಗೆ ಕರ್ನಾಟಕ ರಾಜ್ಯದಿಂದ ವಿಶೇಷವಾಗಿ ಉತ್ತರ ಕರ್ನಾಟಕದ ಭಕ್ತರು ಹಾಗೂ ಮಹಾರಾಷ್ಟ್ರದ ಸೊಲ್ಲಾಪುರ, ಸಾಂಗ್ಲಿ ಹಾಗೂ ಇತರ ಭಾಗಗಳಿಂದ ಕೂಡ ಭಕ್ತರು ಸೇರುತ್ತಾರೆ. ಹಲವು ಪ್ರದೇಶಗಳಿಂದ ಭಕ್ತರು ವಿಶೇಷ ಪಾದಯಾತ್ರೆಯೊಂದಿಗೆ ಶ್ರೀಶೈಲಕ್ಕೆ ಆಗಮಿಸುತ್ತಿರುವುದು ವಿಶೇಷವಾಗಿದೆ. ಸುಮಾರು 2 ಲಕ್ಷ ಭಕ್ತರು ಪಾದಯಾತ್ರೆಯೊಂದಿಗೆ ಈ ಉತ್ಸವಗಳಿಗೆ ಬರುತ್ತಾರೆ.

ಯುಗಾಗಿ ಮಹೋತ್ಸವಗಳಲ್ಲಿ ಸರ್ವಭಕ್ತರಿಗೆ ಅನುಕೂಲವಾದ ದರ್ಶನಕ್ಕಾಗಿ ಮಾರ್ಚ್ 27 ರಿಂದ 31ರವರೆಗೆ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ಅಲಂಕಾರಿಕ ದರ್ಶನ (ಲಘುದರ್ಶನ)ವನ್ನು ಒದಗಿಸಲಾಗುವುದು. ಯುಗಾದಿ ಉತ್ಸವ ದಿನಗಳಲ್ಲಿ ಸ್ವಾಮಿಯ ಸ್ಪರ್ಶ ದರ್ಶನಕ್ಕೆ ಅವಕಾಶ ಇಲ್ಲ. ಆದಾಗ್ಯೂ ಉತ್ಸವಗಳ 10 ದಿನಗಳ ಹಿಂದಿನಿಂದ ಅಂದರೆ ಮಾರ್ಚ್ 17 ರಿಂದ 26 ರವರೆಗೆ ಭಕ್ತರಿಗೆ ಪ್ರತಿ ದಿನ ನಿರ್ದಿಷ್ಟ ಸಮಯಗಳಲ್ಲಿ ನಾಲ್ಕು ಹಂತಗಳಾಗಿ ಶ್ರೀ ಸ್ವಾಮಿಯನ್ನು ಸ್ಪರ್ಶಿಸುವ ಸ್ಪರ್ಶ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ. ಈ ಸ್ಪರ್ಶ ದರ್ಶನದ ಟಿಕೆಟ್ ಶುಲ್ಕ 500 ರೂಪಾಯಿಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಹಂತದಲ್ಲಿ 1500 ಟಿಕೆಟ್‌ಗಳನ್ನು ಮಾತ್ರ ನೀಡಲಾಗುವುದು. ಭಕ್ತರು ನಿರ್ದಿಷ್ಟ ಸಮಯಗಳಲ್ಲಿ ಕರೆ–ಂಟ್ ಬುಕಿಂಗ್ ಮೂಲಕ ಈ ಟಿಕೆಟ್‌ಗಳನ್ನು ದೇವಸ್ಥಾನದಲ್ಲಿಯೇ ಪಡೆಯಬಹುದು ಮತ್ತು ಆನ್‌ಲೈನ್ ಮೂಲಕವೂ ಈ ಟಿಕೆಟ್‌ಗಳನ್ನು ಹೊಂದಬಹುದು.

ಈ ನಿಟ್ಟಿನಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರದ ಹಲವು ಭಕ್ತರ ಸಂಘಗಳು, ಪಾದಯಾತ್ರೆ ತಂಡಗಳು ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಮಾರ್ಚ್ 8 ರಂದು ಕರ್ನಾಟಕದ ವಿಜಯಪುರ ನಗರದಲ್ಲಿ ಸಮನ್ವಯ ಸಭೆಯನ್ನು ಸಹ ಆಯೋಜಿಸಲಾಗಿತ್ತು.

ಸಮಸ್ತ ಭಕ್ತರಿಗೆ ದರ್ಶನದ ಬಗ್ಗೆ ಬೇಕಾದ ಸಮಾಚಾರವನ್ನು ತಿಳಿಸಲು ಭಕ್ತ ಸಮೂಹಗಳ ಪ್ರತಿನಿಧಿಗಳಿಗೆ ಹಬ್ಬದ ದಿನಗಳಲ್ಲಿ ದರ್ಶನ ವ್ಯವಸ್ಥೆ ಹಾಗೂ ದೇವಸ್ಥಾನದ ಭಕ್ತರಿಗೆ ಒದಗಿಸುವ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಗಿದೆ.

ಯುಗಾದಿ ಹಬ್ಬದ ಪ್ರಯುಕ್ತ ದೇವಾಲಯವು ಭಕ್ತರ ಅನುಕೂಲಕ್ಕಾಗಿ ವಿವಿಧ ವ್ಯವಸ್ಥೆಗಳನ್ನು ಮಾಡುತ್ತಿದೆ. ಮುಖ್ಯವಾಗಿ ಪಾದಚಾರಿ ಮಾರ್ಗ, ಭಕ್ತರಿಗೆ ವಿಶ್ರಾಂತಿ, ತಂಪಾದ ಹೊರಾಂಗಣ ಚಪ್ಪರಗಳು, ಕುಡಿಯುವ ನೀರು, ಅನ್ನ ಸಂತರ್ಪಣೆ, ಅನುಕೂಲವಾಗಿ ದರ್ಶನ ವ್ಯವಸ್ಥೆ, ವಾಹನ ನಿಲುಗಡೆ ವ್ಯವಸ್ಥೆ, ಭಕ್ತರು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹೋಗಲು ಉಚಿತ ಬಸ್‌ಗಳ ವ್ಯವಸ್ಥೆ, ಉಚಿತ ಬ್ಯಾಟರಿ ವಾಹನಗಳ ವ್ಯವಸ್ಥೆ, ನೈರ್ಮಲ್ಯ ನಿರ್ವಹಣೆ, ಸ್ವಚ್ಛತಾ ವ್ಯವಸ್ಥೆ ಇತ್ಯಾದಿಗಳನ್ನು ವ್ಯವಸ್ಥೆ ಮಾಡಲಾಗುತ್ತಿದೆ.

ಅದ್ದರಿಂದ ಸರ್ವಭಕ್ತಾದಿಗಳು ಈ ವಿಷಯಗಳನ್ನು ಗಮನಿಸಿ ದೇವಸ್ಥಾನದ ಈ ಕ್ರಮಕ್ಕೆ ಸಹಕರಿಸಬೇಕೆಂದು ವಿನಂತಿಸಲಾಗಿದೆ.

ಈ ಸಂದರ್ಭದಲ್ಲಿ ಸಮಸ್ತ ಭಕ್ತಾದಿಗಳು ಶ್ರೀ ಭ್ರಮರಾಂಭ ಮಲ್ಲಿಕಾರ್ಜುನ ಸ್ವಾಮಿಯವರ ಅನುಗ್ರಹವನ್ನು

ಸದಾ ಪಡೆಯಲಿ ಎಂದು ಹಾರೈಸಿದ್ದಾರೆ.

# 6ನೇ ತರಗತಿಗೆ ಪ್ರವೇಶ: ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಕಲಬುರಗಿ,ಮಾ.11:ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆಗಳಿಗೆ ಹಾಗೂ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ (ಸಿ.ಬಿ.ಎಸ್.ಸಿ) ಶಾಲೆಗಳಲ್ಲಿ 6ನೇ ತರಗತಿಗೆ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪ್ರವೇಶ ಪಡೆಯಲು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಮಾರ್ಚ್ 25ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರವೇಶ ಪಡೆಯಲಿಚ್ಛಿಸುವ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ

ಶೇ. 75 ಹಾಗೂ ಇತರೆ ವರ್ಗಗಳ ವಿದ್ಯಾರ್ಥಿಗಳಿಗೆ ಶೇ. 25 ರಷ್ಟು ಸ್ಥಾನಗಳು ಮೀಸಲಿದ್ದು, ಇದರಲ್ಲಿ ಬಾಲಕಿಯರಿಗೆ ಶೇ. 50 ರಷ್ಟು ಸ್ಥಾನಗಳನ್ನು ಮೀಸಲಿರಿಸಲಾಗಿದೆ. ಇಚ್ಛೆಯುಳ್ಳ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲಿè https://sevasindhuservices.karnataka.gov.in ಅನ್‌ಲೈನ್ ಮೂಲಕ ಅರ್ಜಿಗಳನ್ನು ಇಲಾಖೆಯ ವಸತಿ ಶಾಲೆಗಳಲ್ಲಿ ಅಥವಾ ತಾಲ್ಲೂಕ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ 2025ರ ಮಾರ್ಚ್ 25 ರೊಳಗಾಗಿ ಅರ್ಜಿ ಸಲ್ಲಿಸಬೇಕು.

# ನಿರುದ್ಯೋಗಕ್ಕೆ ಉದ್ಯಮಶೀಲತೆ ಮದ್ದು : ಡಾ.ಪ್ರಕಾಶ




ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಮಾ.11– ವಿದ್ಯಾರ್ಥಿಗಳು ಪದವಿ ವ್ಯಾಸಂಗದ ಜೊತೆ ಜೊತೆಗೆ ಉದ್ಯಮಶೀಲತೆ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು.ನಿರುದ್ಯೋಗ ನಿವಾರಣೆಗೆ ಉದ್ಯಮಶೀಲತೆ ಮದ್ದು ಎಂದು ಡಾ.ಪ್ರಕಾಶ ವಡವಡಗಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಮತ್ತು ವಾಣಿಜ್ಯ ವಿಭಾಗದ ಆಶ್ರಯದಲ್ಲಿ ನಡೆದ ಉದ್ಯಮಶೀಲತೆ ಮತ್ತು ಅಭಿವೃದ್ಧಿ ಕುರಿತ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿದ ಅವರು, ಇದು ಸ್ಪರ್ಧಾತ್ಮಕ ಯುಗವಾಗಿದ್ದರಿಂದ ವಿಜ್ಞಾನ, ತಂತ್ರಜ್ಞಾನದಲ್ಲಿ ಹೊಸ ಆವಿಷ್ಕಾರಗಳಿಂದ ಯಂತ್ರಗಳು ಸೃಷ್ಠಿಯಾಗುತ್ತಿವೆ. ಇವುಗಳ ಸದುಪಯೋಗ ಮಾಡಿಕೊಂಡು ಉದ್ಯಮಶೀಲ ಕೌಶಲ್ಯಗಳನ್ನು ಅಳವಡಿಸಿಕೊಂಡರೆ ನಿರುದ್ಯೋಗ ನಿವಾರಣೆ ಆಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ ಮಾತನಾಡಿ, ವಿದ್ಯಾರ್ಥಿಗಳು ಉದ್ಯಮಶೀಲರಾಗಬೇಕಾದರೆ ಕೈಗಾರಿಕಾ ರಂಗದಲ್ಲಿರುವ ಅವಕಾಶಗಳನ್ನು ಬಳಸಿಕೊಳ್ಳುವದರ ಮೂಲಕ ಸರ್ಕಾರದ ಪ್ರೇರಣಾ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಪ್ರಾಂಶುಪಾಲಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಡಿಜಿಟಲ್ ಭಾರತದಲ್ಲಿಂದು ತಾಂತ್ರಿಕ ಕ್ಷೇತ್ರಗಳ ಬದಲಾವಣೆಗಳಿಗೆ ತಕ್ಕಂತೆ ವಿದ್ಯಾರ್ಥಿಗಳು ತಮ್ಮ ಮುಂದಿನ ಭವಿಷ್ಯದ ಉತ್ತಮ ಬದುಕನ್ನು ಉದ್ಯಮಶೀಲರಾಗುವ ಮೂಲಕ ಕಟ್ಟಿಕೊಳ್ಳಬೇಕು ಎಂದು ಹೇಳಿದರು. ಐಕ್ಯೂಎಸಿ ಸಂಚಾಲಕ ಡಾ.ಪ್ರಭುದೇವ ಮಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹಸಂಚಾಲಕ ಡಾ.ಮೂಬೀನ್ ಬೆಳಗಾಮ್, ನಾಗರಾಜ ವಡ್ಡರ ವೇದಿಕೆ ಮೇಲೆ ಉಪಸ್ಥಿತರಿದ್ದರು. ಎಚ್.ಬಿ.ಬೋವಿ ಸ್ವಾಗತಿಸಿದರು. ಸುನೀಲ ಮಠಪತಿ ನಿರೂಪಿಸಿದರು. ಸುಮಂಗಲಾ ಇಳಗೇರ ವಂದಿಸಿದರು.

# ಸೌಹಾರ್ದತೆ, ಸಂಭ್ರಮದಿಂದ ಹೋಳಿ ಆಚರಿಸಿ:ಅಮರನಾಥ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಮಾ.11– ಹೋಳಿ ಪ್ರೀತಿ, ಸಾಮರಸ್ಯದ ಹಬ್ಬವಾಗಿದ್ದು, ನಮ್ಮಲ್ಲಿರುವ ಕಾಮ, ಕ್ರೋಧ, ಮದ, ಮತ್ಸರಗಳನ್ನು ಕಾಮದಹನದಲ್ಲಿ ಸುಟ್ಟು ಬಣ್ಣದೋಕುಳಿ ಆಡುವ ಮೂಲಕ ಹೊಸತನ್ನು ಆರಂಭಿಸುವುದು ಹೋಳಿಯ ವೈಶಿಷ್ಟ್ಯತೆಯಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಹೇಳಿದರು. ನಗರದ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಪತ್ರಿಕಾ ಭವನದ ಆವರಣದಲ್ಲಿ ಸೋಮವಾರ ಸಂಜೆ ಏರ್ಪಡಿಸಿದ್ದ ಪತ್ರಕರ್ತರ ಹಲಗೆ ಮೇಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಪ್ರತಿಯೊಂದಕ್ಕೂ ಹಬ್ಬಕ್ಕೂ ಒಂದೊಂದು ವಿಶೇಷತೆ ಇದೆ. ಹಾಗೆಯೇ ಹೋಳಿ ಹಬ್ಬವೂ ವಿಶೇಶತೆ ಹೊಂದಿದೆ. ಆದ್ದರಿಂದ ಜಿಲ್ಲೆಯ ಜನತೆ ಹೋಳಿ ಹಬ್ಬವನ್ನು ಶಾಂತಿ, ಸೌಹಾರ್ಧತೆಯಿಂದ ಆಚರಿಸಬೇಕು. ಬಣ್ಣದಾಟದಲ್ಲಿ ನೈಸರ್ಗಿಕ ಬಣ್ಣವನ್ನು ಬಳಸಬೇಕು ಎಂದು ಹೇಳಿದರು. ಜಿಲ್ಲಾ ಪಂಚಾಯತಿ ಸಿಇಒ ಶಶಿಧರ ಕುರೇರ ಮಾತನಾಡಿ, ಹೋಳಿ ಹಬ್ಬದಲ್ಲಿ ಜಾತಿ–ಮತ, ಪಂಥ, ಹೆಣ್ಣು–ಗಂಡು ಎನ್ನದೇ ಎಲ್ಲರೂ ಪಾಲ್ಗೊಂಡು ಆಚರಿಸುತ್ತಾರೆ. ವರ್ಷದ ಕೊನೆಯ ಹಬ್ಬವಾದ ಹೋಳಿ ಹೊಸ ಸಂಪ್ರದಾಯ, ಹೊಸ ಬೆಸುಗೆ, ಹೊಸ ಸಂತೋಷವನ್ನು ಆರಂಭಿಸುವ ಹಬ್ಬವಾಗಿದೆ. ಹೀಗಾಗಿ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಸ್.ಜಿ.ನಂಜಯ್ಯನಮಠ ಮಾತನಾಡಿ, ದೇಶದಲ್ಲಿ ಕೊಲ್ಕತ್ತಾ ಬಿಟ್ಟರೆ ಬಾಗಲಕೋಟೆ ಹೋಳಿ ಹಬ್ಬ ದೊಡ್ಡ ಹಬ್ಬವಾಗಿದೆ. ಇದೊಂದೇ ಗಂಡು ಮಕ್ಕಳ ಹಬ್ಬವಾಗಿದೆ. ಸೋಲು–ಗೆಲುವುಗಳ ಮಧ್ಯೆ ಬದುಕುತ್ತಿರುವ ನಾವು ದ್ವೇಷ ರಹಿತವಾಗಿ ಹೋಳಿಯನ್ನು ವಿಜೃಂಭನೆಯಿಂದ ಆಚರಿಸೋಣ ಎಂದರು. ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆನಂದ ಧಲಬಂಜನ ಮಾತನಾಡಿದರು. ಹೋಳಿ ಆಚರಣಾ ಸಮಿತಿಯ ಅಧ್ಯಕ್ಷ ಕಳಕಪ್ಪ ಬಾದೋಡಗಿ, ಸದಾನಂದ ನಾರಾ, ಸಂಜು ವಾಡ್ಕರ, ಹಿರಿಯ ಪತ್ರಕರ್ತ ಮಹೇಶ ಅಂಗಡಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಪ್ರಕಾಶ ಗುಳೇದಗುಡ್ಡ ನಿರೂಪಿಸಿದರು. ಮಂಜುನಾಥ ತಳವಾರ ವಂದಿಸಿದರು.

# ನವ ಭಾರತ ನಿರ್ಮಾಣದಲ್ಲಿ ಮಹಿಳೆ ಪಾತ್ರ ಅಗಾಧ




ಮಲ್ಲಮ್ಮ ನುಡಿ ವಾರ್ತೆ
ಬೀದರ.ಮಾ.11:ನವ ಭಾರತ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಮುಖ್ಯವಾಗಿದೆ ಎಂದು ಡಾ.ರೇಣುಕಾಸ್ವಾಮಿ ಹೇಳಿದರು. ಬೀದರ್ ನಗರದ ಅಲ್ಲಮಪ್ರಭು ನಗರದಲ್ಲಿ ಭಾನುವಾರ ಅಕ್ಕ ಮಹಾದೇವಿ ಮಹಿಳಾ ಸಂಘ ಆಯೋಜಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ನಡೆದ ಧಾರ್ಮಿಕ ಚಳುವಳಿ ಮಹಿಳಾ ವಿನೋಚನಾ ದೃಷ್ಟಿಯಿಂದ ಮಾದರಿಯಾಗಿದೆ. ಹೆಣ್ಣುಮಾಯೆ ಎಂಬುರು "ಹೆಣ್ಣು ಮಾಯೆ ಅಲ್ಲ, ಮನದ ಮುಂದಣ ಆಸೆಯೇ ಮಾಯೆ" ಎಂದು ಅಲ್ಲಮ ಪ್ರಭುಗಳು ತಿಳಿಸಿದರು. "ಸತಿಪತಿಗಳೊಂದಾದ ಭಕ್ತಿ ಹಿತವಾಗಿಪ್ಪುದು ಶಿವಂಗೆ" ಎಂದು ಜೇಡರ ದಾಸಿಮಯ್ಯ, "ಹೆಣ್ಣು ಸಾಕ್ಷಾತ್ ಮಹಾದೇವಿ" ಎಂದು ಬಸವಣ್ಣ ಹೇಳಿದರು ಎಂದು ತಿಳಿಸಿದರು.

ಡಾ.ಶೈಲಜಾ ಮಾತನಾಡಿ ಹೆಣ್ಣು ಮಕ್ಕಳು ಮಾನಸಿಕವಾಗಿ, ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಎಂದರು. ಈಶ್ವರಮ್ಮ ಮಾತನಾಡಿ ಮಹಿಳೆ ಕಷ್ಟಗಳನ್ನು ಎದುರಿಸಿ ಸಹನಶೀಲಳಾಗಿ ಒಳ್ಳೆ ಸಂಸ್ಕಾರ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಾಧಕ ಮಹಿಳೆ ಸುನಿತಾ ಹಾಗೂ ಸಂಗೀತಾ ಅವರನ್ನು ಸನ್ಮಾನಿಸಲಾಯಿತು.

ಮಹಿಳಾ ಎಎಸ್‌ಐ ಸಂಗೀತಾ, ರತ್ನಮ್ಮ ಅಣ್ಣೆಪ್ಪ ಶೇರಿಕಾರ, ಈಶ್ವರಮ್ಮ ಮತ್ತಿತರರು ಇದ್ದರು. ಕುಮಾರಿ ಸಂಗೀತಾ ಸ್ವಾಗತಿಸಿದರು. ಸುಧಾರಾಣಿ ಬಿರಾದಾರ ನಿರೂಪಿಸಿದರು. ಅಶ್ವಿನಿ ಪಾಟೀಲ ವಂದಿಸಿದರು.



ಕರ್ನಾಟಕ ಸರಕಾರ
ತಾಲೂಕ ಪಂಚಾಯತ ಕಾರ್ಯಾಲಯ ಬಸವಕಲ್ಯಾಣ

ಸಂಖ್ಯೆ:ತಾ.ಪಂ/ಬ.ಕ/ವಾಹನಬಾ/ಸಿಆರ್-/2024-25 ದಿನಾಂಕ: 11-03-2025

-:ಪ್ರಕಟಣೆ:-

ವಿಷಯ:- ತಾಲ್ಲೂಕು ಪಂಚಾಯತ ಕಾರ್ಯಾಲಯಕ್ಕೆ ನಾಲ್ಕು ಚಕ್ರದ ವಾಹನವನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಒದಗಿಸುವ ಬಗ್ಗೆ ಟೆಂಡರ್ ಅರ್ಜಿ ಆಹ್ವಾನಿಸಿದ ಕುರಿತು.

| | | |
|---|---|---|
| 01 | ಬಾಡಿಗೆ ಪಡೆಯಬೇಕಾದ ವಾಹನಗಳ ಸಂಖ್ಯೆ | 01 (ವಾಹನ) |
| 02 | ಬಾಡಿಗೆ ಪಡೆಯಬೇಕಾದ ವಾಹನಗಳ ಮಾದರಿ | ನಾಲ್ಕು ಚಕ್ರದ ಸುಸಜ್ಜಿತ ಸ್ವಿಫ್ಟ/ಟಾಟಾ ಇಂಡಿಕಾ/ಟಾಟಾ ಇಂಡಿಗೋ/ಅಥವಾ ಇನ್ನಾವುದೇ ವಾಹನಗಳು |
| 03 | ಬಾಡಿಗೆ ಬೇಕಾದ ಅವಧಿ | ವಾಹನ ತಿಂಗಳು ಪೂರ್ತಿ(01-04-2025 ರಿಂದ 31-03-2026 ) ರವರೆಗೆ, 2025-2026 ರ ಸಾಲೀಗೆ |
| 04 | ಖಾಲಿ ಟೆಂಡರ್ ಅರ್ಜಿ ನೀಡುವ ಬಗ್ಗೆ | 12-03-2025 ರಿಂದ 18-03-2025 |
| 05 | ಭರ್ತಿ ಮಾಡಿ ಅರ್ಜಿ ಸಲ್ಲಿಸುವ ದಿನಾಂಕ | 18-03-2025 ಬೆಳಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ |
| 06 | ಟೆಂಡರ್ ತೆರೆಯುವ ದಿನಾಂಕ ಮತ್ತು ಸಮಯ | 18-03-2025 ಮಧ್ಯಾಹ್ನ 3.00 ಗಂಟೆಗೆ |
| 07 | ಅರ್ಜಿ ಶುಲ್ಕ | ರೂ.500/- ಪ್ರತ್ಯೇಕವಾಗಿ ಸಲ್ಲಿಸುವುದು |

ಆಸಕ್ತ ಟ್ರಾವೆಲ್ಸ ಎಜೇನ್ಸಿಯವರು ಈ ಷರತ್ತುಗೊಳಪಟ್ಟು ಮಾಸಿಕ ಬಾಡಿಗೆಗೆ ವಾಹನ ಒದಗಿಸಬಹುದಾಗಿದೆ.

ಷರತ್ತುಗಳು:-

1) ವಾಹನವು 2015 ಮತ್ತು ನಂತರದ ಮಾದರಿಯ 04 ಚಕ್ರದ ಸುಸಜ್ಜಿತ ಸ್ವಿಫ್ಟ/ಟಾಟಾ ಇಂಡಿಕಾ/ಟಾಟಾ ಇಂಡಿಗೋ/ಅಥವಾ ಇನ್ನಾವುದೇ ವಾಹನವಾಗಿರಬೇಕು.
2) ಒದಗಿಸಬೇಕಾದ ವಾಹನದ ವಿಮೆ, ಟ್ಯಾಕ್ಸಿ ಪರ್ಮಿಟ್, ಚಾಲಕನ ಲೈಸೆನ್ಸ್ ಚಾಲ್ತಿಯಲ್ಲಿರಬೇಕು.
3) ವಾಹನದ ಇಂಧನ,ಚಾಲಕರ ಊಟ, ವಾಹನದ ನಿರ್ವಹಣೆ ಇತ್ಯಾದಿ ಖರ್ಚುಗಳನ್ನು ವಾಹನದ ಮಾಲಿಕರೆ ವಹಿಸತಕ್ಕದು.
4) ವಾಹನದ ನೋಂದಣಿ ಟ್ಯಾಕ್ಸಿ ವಾಣಿಜ್ಯ ಬಳಕೆಯಾಗಿರಬೇಕು.
5) ವಾಹನ ಬಾಡಿಗೆ ಪಡೆಯಲು ಮತ್ತು ಟೆಂಡರನ್ ಬಗ್ಗೆ ಏನೇ ಸಮಸ್ಯೆ ಉದ್ಭವಿಸಿದರು ನಿರ್ಧಾರ ತೆಗೆದುಕೊಳ್ಳುವ ಅಂತಿಮ ಅಧಿಕಾರವು ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕಾ ಪಂಚಾಯತ ಬಸವಕಲ್ಯಾಣ ಇವರಿಗೆ ಇರುತ್ತದೆ.
6) ವಾಹನ ಬಾಡಿಗೆಯನ್ನು 1 ವರ್ಷದ ವರೆಗೆ ಮಾತ್ರ ತೆಗೆದುಕೊಳ್ಳಲಾಗುವುದು ಹಾಗೂ ಅನುದಾನ ಲಭ್ಯತೆ ಮೇರೆಗೆ ಪಾವತಿಸಲಾಗುವುದು.
7) ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯವನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.
8) ವಾಹನಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ/ ತಾಲೂಕಾ ಪಂಚಾಯತನಲ್ಲಿ ತೆಗೆದುಕೊಳ್ಳುವ ನಿರ್ಧಾರ ಅಂತಿಮವಾಗಿದ್ದು, ಕೇವಲ 10 ದಿನಗಳ ಕಾಲವಕಾಶ ನೀಡಿ ಸದರಿ ಆದೇಶ ಜಾರಿಗೋಳಿಸಲಾಗುತ್ತದೆ.

ಕಾರ್ಯನಿರ್ವಾಹಕ ಅಧಿಕಾರಿಗಳು
ತಾಲೂಕಾ ಪಂಚಾಯತ ಬಸವಕಲ್ಯಾಣ

ಶಹಾಪುರದಲ್ಲಿ ರಾಜ್ಯ ಮಟ್ಟದ ರೈತ ಸಮಾವೇಶ.

# ರೈತ ಮುನಿಸಿದಲ್ಲಿ ಜಗವೇಲ್ಲಾ ಉಪವಾಸ -ಮುಗಳಖೋಡ ಶ್ರೀ,




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ರೈತನವರ್ಣನೆಕೇವಲ ವೇದಿಕೆಗೆಸೀಮಿತವಾಗಬಾರದು, ಅದು ಕಾಯಕವಾಗಬೇಕು,ರೈತ ಸಾಕ್ಷಾತಃ ಭಗವಂತನ ಸ್ವರೂಪ, ಕಷ್ಟಪಟ್ಟು ಬೇವರು ಸುರಿಸಿ ಬೆಳೆದ ಬೆಳೆಗೆ ಬೆಂಬಲ ನೀಡಿ, ರೈತರ ರಕ್ಷಣೆಗೆ ಮುಂದಾಗಬೇಕು .ರೈತ ಮುನಿಸಿದಲ್ಲಿ ಜಗವೇಲ್ಲಾ ಉಪವಾಸವಾಗೇಕಾದೀತು? ಎಂದು ಸುಕ್ಷೇತ್ರಮುಗಳಖೋಡ, ಜಡಗಮಠದ ಪಿಠಾಧಿಪತಿಗಳಾದ ಪ.ಪೂ, ಡಾ,ಮುರಘರಾಜೇಂದ್ರಮಾಹಾಸ್ವಾಮೀಗಳು ಅಭಿಪ್ರಾಯ ವ್ಯಕ್ತಪಡಿಸಿದರು, ಅವರು ನಗರದ ಆರಬೊಳ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ರಾಜ್ಯ ಸಮಿತಿ ನೇತೃತ್ವದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ರೈತ ಜಾಗ್ರತಿ ಸಮಾವೇಶ, ರೈತ ದಿನಾಚರಣೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು, ಮುಂದುವರೆದು ಮಾತನಾಡಿದ ಅವರು. ರೈತರು ಬೇಳೆಗೆ ಫಸಲು ಬಾರದೆ ಇದ್ದಾಗ ಮಾನಸಿಕವಾಗಿ ನೊಂದು ಆತ್ಮಹತ್ಯೆಮಾಡಿಕೊಳ್ಳಬಾರದು, ಮುಂದೆ ಪ್ರಯತ್ನದ ಹಾದಿಯಲ್ಲಿ ಯಶಸ್ವಿಸಾಧಿಸಬೇಕು,ಸಾಲ ಬಾದೆಎಂದು ದೃತಿಗೆಡಬಾರದು ಎಂದು ಅವರು ರೈತ ಸಮೂಹಕ್ಕೆ ಆತ್ಮಸ್ಥೈರ್ಯ ತುಂಬಿದರು, ಕೂಡಸಂಗಮದ ಪಂಚಮ ಸಾಲಿಪೀಠದ ಪೂಜ್ಯ ಮೃತುಂಜಯಸ್ವಾಮೀಗಳು ಮಾತನಾಡಿ,ರೈತರು ಸಂಘಟಿತಗೊಂಡು ಬೇಳೆದ ಬೆಳೆಗೆ ಬೆಂಬಲ ಬೆಲೆಗೆ ಹೋರಾಟಕ್ಕೆ ಮುಂದಾಗುವ ಶಕ್ತಿ ಬೆಳೆಯಬೇಕು, ಯಾವುದಕ್ಕೂ ದೈರ್ಯ ಕಳೆದುಕೊಳ್ಳದೆ ಮುಂದೆ ಸಾಗಬೇಕು, ಎಂದರು, ಸುಕ್ಷೇತ್ರ ಹುಲಿಜಂತಿ ಮಾಳಿಂಗರಾಯ ಕ್ಷೇತ್ರದ ಪೂಜ್ಯಶ್ರೀ ಮಾಳಿಂಗರಾಯ ಮಾಹಾರಾಜರು ಮಾತನಾಡಿ, ಕೇವಲ ಐಟಿಬಿಟಿಗಳಿಂದ ದೇಶದ ಸಮೃದ್ಧಿಯಾಗುವದಿಲ್ಲ, ರೈತರ ರಕ್ಷಣೆಗೆ ಸರ್ಕಾರಗಳು ಮುಂದಾದಲ್ಲಿ ರೈತರ ಪರಶ್ರಮಕ್ಕೆ ಸೂಕ್ತ ಫಲ ನೀಡಬೇಕು ಎಂದರು, ಸುಕ್ಷೇತ್ರ ಸೊಂತ ಕಲ್ಕಡ ಕ್ಷೇತ್ರದ ಪ.ಪೂ, ಬಾಲಯೋಗಿ ದಿಗಂಬರ ಶರಣ ಶಂಕರಲಿಂಗ ಮಾಹಾರಾಜರು, ಮಖನಾಪುರದ ಪೂಜ್ಯ ಸೋಮೇಶ್ವರ ಮಾಹಾಸ್ವಾಮಿಗಳು, ಕೊಡಗಾಂವ್,ಪೂಜ್ಯ ಸದಾಶಿವ ಮಾಹಾರಾಜರು ದಿವ್ಯಸಾನಿದ್ಯ ವಹಿಸಿದ್ದರು,ಕಾರ್ಯಕ್ರಮವನ್ನು ರಾಜ್ಯ ವರಿಷ್ಟರಾದ ಪಚೆ ನಂಜುಂಡ ಸ್ವಾಮಿಗಳು ಉಧ್ಘಾಟಿಸಿದರು. ಅಧ್ಯಕ್ಷತೆಯನ್ನು ರಾಜ್ಯ ಅಧ್ಯಕ್ಷರಾದ ಚೋನಪ್ಪ ಪೋಜೇರಿ ವಹಿಸಿದ್ದರು,ರಾಜ್ಯ ಕಾರ್ಯಾಧ್ಯಕ್ಷರಾದ ಮಹೇಶಗೌಡ ಸುಬೇದಾರವರು ಪ್ರಾಸ್ತಾವಿಕವಾಗಿ ಮಾತನಾಡಿದರು,ಶಾಂತವೀರಪ್ಪಗೌಡ ಪಾಟೀಲ್, ದೇವಿಂದ್ರಪ್ಪಗೌಡ ಮಾಲಗತ್ತಿ, ಮಹೇಶ ಆನೆಗುಂದಿ, ಚಂದನಗೌಡ ಪಾಟೀಲ್, ಪ್ರಕಾಶಗೌಡ ಬಾಬಾಗೌಡ ಪಾಟೀಲ್, ಸುರೇಶ ಮರಗಣ್ಣವರ್, ಶಿವಾನಂದ ಮುಗಿಹಾಳ ಧರ್ಮಣ ತಹಿಸಲ್ದಾರ, ರಮೇಶ ಗಾಂಜೀ, ಸಂತೋಷ ಸಾಹುಕಾರ, ಸೇರಿದಂತೆ ಅನೇಕ ಜಿಲ್ಲೆಗಳಿಂದ ರೈತರ ನಾಯಕರು ಮುಖಂಡರು ಆಗಮಿಸಿದ್ದರು.

ನಾನಾ ಗ್ರಾಮಗಳಿಂದ ಆಗಮಿಸಿದ್ದ ಎತ್ತನ ಬಂಡಿಗಳೊಂದಿಗೆ ನಗರದ ಹೊಸ ಬಸ್ ನಿಲ್ದಾಣದಿಂದ ನಗರದ ಹೊರಹೊಲಯದ ಆರಬೊಳ ಕಲ್ಯಾಣ ಮಂಟಪದವರೆಗೂ ಭವ್ಯ ಮೇರವಣಿಗೆ ನೆಡೆಯಿತು, ಅಲ್ಲದೆ ಸಮಾರಂಭದಲ್ಲಿ ಯಲ್ಲಪ್ಪ ದುಬಲಗುಂಡಿ, ಗುರು, ಶ್ರೀಮತ ರೂಪಾ. ರಾಘವೆಂದ್ರ ಶರ್ಮಾ, ಘವರಚಂದ್ ಜೈನ್, ತುಳಿಜರಾಮ ಚೌಹಾಣ್, ಪಿಡ್ಡಪ್ಪನಂದಿಕೊಲ್, ಸಿದ್ದಯ, ಶಿವರಾಯ ಎಲ್ಲೇರಿ, ಹುಲಗಪ್ಪ ತಳಗೇರಿ, ಲಕ್ಷ್ಮಣರವರಿಗೆ ಸಮಾಜಸೇವಾ ರತ್ನ ನೀಡಿ ಗೌರವಿಸಲಾಯಿತು, ರಾಜು ಪತ್ತಾರ, ಡಾ, ಸುರೇಶಗೌಡ ಪಾಟೀಲ, ದಿನೇಶ ಶಿರವಾಳ. ಸಿದ್ದಲಿಂಗಪ್ಪಗೌಡ ಅಬ್ಬಳ್ಳಿ, ಮಲ್ಲಣಗೌಡ ಪರಿವಾಣ, ಹಣಮಂತ್ರಾಯ ಯಕ್ಷಂತಿರವರಿಗೆ ರೈತ ಸೇವಾ ಪ್ರಸಸ್ತಿ, ಹಾಗೂ ಪುನಿತ, ಪತ್ರಿಕೆ ಸಂಪಾದಕರಾದ ವೈಜಿನಾಥ ಹೀರೆಮಠ,ಜಾವೇದ ಪಾಷಾ, ಇನಾಮದಾರ, ಬಸವರಾಜ ಶಿನ್ನೂರ, ವಿಠಲ್ ನಿಂಗಪ್ಪ ಪೂಜಾರಿ ಸಾಹೇಬಣ್ಣ ಪುರ್ಲೆ. ಡಾ,ಸುರೇಖಾ ಕುಂಬಾರವರಿಗೆ ಕನ್ನಡ ಸೇವಾ ರತ್ನ ನೀಡ ಸನ್ಮಾನಿಸಲಾಯಿತು.

## ಆರ್‌ಸೇಟಿ; ವೃತ್ತಿ, ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.11-ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ,ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ವತಿಯಿಂದ ಗ್ರಾಮೀಣ ನಿರುದ್ಯೋಗಿ ಯುವಕರಿಗಾಗಿ ವೃತ್ತಿ, ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲು ಬಿಪಿಎಲ್ ಕಾರ್ಡ್ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿಬೇಕು. 18ರಿಂದ 45ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ 30ದಿನಗಳ ಸೆಲ್ ಫೋನ್ ರಿಪೇರಿ ಹಾಗೂ 10ದಿನಗಳ ಕುರಿ ಸಾಕಣಿಕೆ ಕುರಿತು ತರಬೇತಿ ನೀಡಲಾಗುವುದು.

ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ನೀಡಲಾಗುವುದು. ಆಸಕ್ತರು ಆಧಾರ್ ಕಾರ್ಡ್, ರೇಷನ್ ಕಾರ್ಡ್, 4 ಪೋಟೋ, ಬ್ಯಾಂಕ್ ಪಾಸ್ ಪ್ರತಿಯೊಂದಿಗೆ ಮಾ.17ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

# ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ವೈಷ್ಣವಿ ಆರ್. ಪಾಟೀಲಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಮುಸ್ತರಿ ಗ್ರಾಮದ ನಿವಾಸಿಗಳಾದ ಶೋಭಾ ರಾಜಶೇಖರ ಪಾಟೀಲ ಅವರ ಸುಪುತ್ರಿ ವೈಷ್ಣವಿ ಆರ್. ಪಾಟೀಲ ಅವರು ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆಯಾಗಿ ನೇಮಕವಾದ ಅಂಗವಾಗಿ ಪಟ್ಟಣದ ಹೋಟೆಲ್ ಆಚಲ ಗ್ರೂಪ್ ವತಿಯಿಂದ ಶಾಲು ಹೊದಿಸಿ ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ದಿಲೀಪಕುಮಾರ್ ಬಗ್ದಲಕ್ಕರ್, ಅಣ್ಣೇಪ್ಪವರನಾಳ,ರಾಜಶೇಖರ್ ಪಾಟೀಲ್ ಮುಸ್ತರಿ, ಶೋಭಾ ಆರ್. ಪಾಟೀಲ್ ಮುಸ್ತರಿ, ಬಾಬಾ ಆರ್.ಸಿ.ಸಿ.,ಲಿಂಗರಾಜ ತುಪ್ಪದ್, ಗಂಗಾರಾಮ ಗೌಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವನೌಷಧಿ ಪಂಡಿತ ಪ್ರಶಸ್ತಿ ಪುರಸ್ಕೃತ ಶೈಲೇಂದ್ರ ಕಾವಡಿ ಅವರಿಗೆ ಗೆಳೆಯರ ಬಳಗದಿಂದ ಸನ್ಮಾನ

## ಚಿಟಗುಪ್ಪ ಪಟ್ಟಣ ಹಸಿರು ಸ್ವಚ್ಛ ಪಟ್ಟಣ ಮಾಡಲು ಶೈಲೇಂದ್ರ ಕಾವಡಿ ಅವರ ಕೊಡುಗೆ ಅಪಾರ:- ಅಸ್ಲಾಂಮಿಯಾ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣ ಹಸಿರು ಸ್ವಚ್ಛ ಪಟ್ಟಣ ಮಾಡಲು ಶೈಲೇಂದ್ರ ಕಾವಡಿ ಅವರ ಕೊಡುಗೆ ಅಪಾರವಾಗಿದೆ ಎಂದು ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಪರಿಸರವಾದಿ ಶೈಲೇಂದ್ರ ಕಾವಡಿ ಅವರಿಗೆ ವನೌಷಧಿ ಪಂಡಿತ ಪ್ರಶಸ್ತಿ ದೊರಕಿದ್ದಕ್ಕೆ ಸನ್ಮಾನಿಸಿ ಗೌರವಿಸಿ ಮಾತನಾಡುತ್ತಾ ತಿಳಿಸಿದರು. ಶೈಲೇಂದ್ರ ಕಾವಡಿ ಪಟ್ಟಣದ ಹಲವಾರು ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆ ಹಾಗೂ ಅರಣ್ಯ ಸಂರಕ್ಷಣೆ ಕುರಿತು ಹಗಲಿರಳು ಶ್ರಮಿಸುತ್ತಿದ್ದಾರೆ. ವಿಶೇಷವಾಗಿ ವಿದ್ಯಾರ್ಥಿಗಳಲ್ಲಿ ಔಷಧಿ ಸಸೆಗಳ ಬಗ್ಗೆ ವಿಶೇಷ ಜಾಗೃತಿ ಮಾಡುತ್ತಿರುವುದಕ್ಕೆ ಇವರಿಗೆ ಇತ್ತಿಚೆಗೆ ಬೀದರನಲ್ಲಿ ನಡೆದ ನಾಟಿ ವೈದ್ಯರ ಸಮ್ಮೇಳನದಲ್ಲಿ ಇವರ ಸೇವೆಯನ್ನು ಗುರುತಿಸಿ ವನೌಷಧಿ ಪಂಡಿತ ಪ್ರಶಸ್ತಿ ನೀಡಿದಕ್ಕೆ ಸ್ವಾಗತಿಸುತ್ತೇನೆ. ಸೂಕ್ತ ವ್ಯಕ್ತಿಯನ್ನು ಗುರುತಿಸಿದಕ್ಕೆ ಸರ್ಕಾರಕ್ಕೆ ಧನ್ಯವಾದಗಳು ಸಲ್ಲಿಸುತ್ತೇನೆ ಎಂದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಸರ್ಕಾರ ನಿಜವಾದ ಸಾಧಕರಿಗೆ ಗುರುತಿಸಿ ಪ್ರಶಸ್ತಿ ನೀಡಿದಕ್ಕೆ ನನಗೆ ತುಂಬಾ ಸಂತೋಷವಾಗಿದೆ, ಕಾವಡಿ ಅವರು ಇಡೀ ಕಲ್ಯಾಣ ಕರ್ನಾಟಕದ ಬಿಸಿಲಿನ ಜಿಲ್ಲೆಯಾದ ಕಲ್ಬುರ್ಗಿ ಜಿಲ್ಲೆಯಲ್ಲಿ ಹಸಿರು ಕರಣಕ್ಕಾಗಿ ಹಗಲಿರಳು ಶ್ರಮಿಸುತ್ತಿದ್ದಾರೆ ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಅವರು ಇವರ ಸೇವೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಮಡಬೇಕೆಂದು ಹಡಪದ ಆಗ್ರಹಿಸಿದರು. ಪ್ರಶಸ್ತಿ ಪುರಸ್ಕೃತ ಶೈಲೇಂದ್ರ ಕಾವಡಿ ಮಾತನಾಡಿ, ಈ ನನ್ನ ಸಾಧನೆಯಲ್ಲಿ ಚಿಟಗುಪ್ಪ ಪಟ್ಟಣದ ಸಾರ್ವಜನಿಕರ, ಸಂಘ ಸಂಸ್ಥೆಗಳ, ಶಾಲಾ ಕಾಲೇಜುಗಳ ಸಹಕಾರ ಮರೆವುವಂತಿಲ್ಲಾ ಎಂದರು. ಪಟ್ಟಣದ ಬಸ್ ನಿಲ್ದಾಣದಲ್ಲಿ ಸಮೃಧವಾಗಿ ಬೆಳೆದಿರುವ ವೃಕ್ಷಗಳ ಸಂರಕ್ಷಣೆಗೆ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಅವರ ಹಾಗೂ ಶಾಲಾ ಕಾಲೇಜುಗಳ ಎನ್‌ಎಸ್‌ಎಸ್ ಘಟಕಗಳ ಸೇವೆ ಅಮೋಘವಾಗಿದೆ ಎಂದು ಸ್ಮರಿಸಿದರು. ಈ ಸಂದರ್ಭದಲ್ಲಿ ಐನಾಪುರ್ ಸರ್ಕಾರಿ ಪ್ರೌಢ ಶಾಲೆ ಮುಖ್ಯ ಗುರುಗಳಾದ ಬಸವರಾಜ ದೊಡ್ಡಮನಿ ಉಪಸ್ಥಿತರಿದ್ದರು.

## ಹದಗೆಟ್ಟ ಮುಖ್ಯ ರಸ್ತೆ ರಿಪೇರಿ ಯಾವಾಗ?



(ವರದಿ.ಡಿ.ಕೆ. ಪ್ರಹ್ಲಾದ.)

ಬಸವಕಲ್ಯಾಣ :- ಇಲ್ಲಿನ ಗುರುಭವನದ ಎದುರುಗಡೆ ಇರುವ ಮುಖ್ಯ ರಸ್ತೆಯಲ್ಲಿ ಬಹಳಷ್ಟು ತಗು ಗುಂಡಿಗಳು ಬಿದ್ದಿರುವುದರಿಂದ ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ಬಹುಜನ ಸಮಾಜ ಪಕ್ಷದ ತಾಲ್ಲೂಕು ಅಧ್ಯಕ್ಷರಾದ ಶಂಕರ್ ಫುಲೆ ಒತ್ತಾಯಿಸಿದ್ದಾರೆ. ಕೋಟೆಯಿಂದ ತಿಪುರಾಂತಿನವರೆ ಹೋಗುವ ಮುಖ್ಯ ರಸ್ತೆಯಲ್ಲಿ ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಇವುಗಳ ರಿಪೇರಿ ಮಾಡುವುದು ಬಹಳ ಅವಶ್ಯಕತೆ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ನಗರದಲ್ಲಿ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಬಸು. ಲಾರಿ ಸೇರಿದಂತೆ ಅನೇಕ ವಾಹನಗಳು ಇಲ್ಲಿಂದಲೆ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.



ಹುಮನಾಬಾದ:ಬಿಜೆಪಿ ಓಬಿಸಿ ಮೋರ್ಚಾದ ಜಿಲ್ಲಾ ಉಪಾದ್ಯಕ್ಷ ದಯಾನಂದ ಮೇತ್ರಿ ರವರು ಕೋಲಿ ಸಮಾಜ ಮುಖಂಡರಾದ ಶರಣು ಬಿ ಭಂಕಲ ಕಾಳಗಿ ರವರಿಗೆ ಸನ್ಮಾನಿಸಿದರು. ವೈಜುನಾಥ ಜಮಾದಾರ ಕಟ್ಟೊಳ್ಳಿ, ಆನಂದ ಜಮಾದಾರ್ ಇದ್ದರು. (ಮಲ್ಲಮ್ಮ ನುಡಿ ಚಿತ್ರ)

## ನಿರ್ಣಾ: ಸರ್ಕಾರಿ ಒತ್ತುವರಿ ಜಮೀನನ್ನು ಕಂದಾಯ ಇಲಾಖೆ ಸ್ವಾಧೀನಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ :- ತಾಲೂಕಿನ ನಿರ್ಣಾ ಗ್ರಾಮದ ಸರ್ವೇ ನಂಬರ್ 584ರ ಸರ್ಕಾರಿ ಜಮೀನನ್ನು ಮುಸ್ಲಿಂ ಸಮುದಾಯದವರು ಕಳೆದ ಹಲವಾರು ವರ್ಷಗಳಿಂದ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದರು. ನಿರ್ಣಾ ಗ್ರಾಮದಲ್ಲಿ ನಾಡಕಚೇರಿ ನಿರ್ಮಾಣಕ್ಕಾಗಿ ಈ ಒತ್ತುವರಿ ಜಮೀನನ್ನು ಕಂದಾಯ ಇಲಾಖೆಯವರು ಬಿಗಿ ಪೊಲೀಸ್ ಬಂದೋಬಸ್ ಮಧ್ಯೆ ಒತ್ತುವರಿ ಜಮೀನು ತೆರವುಗೊಳಿಸುವ ಸಂದರ್ಭದಲ್ಲಿ ಕಂದಾಯ ಇಲಾಖೆ ಅಧಿಕಾರಿಗಳ ಮತ್ತು ಮುಸ್ಲಿಂ ಸಮುದಾಯದವರ ಮಧ್ಯ ಮಾತಿನ ಚಕಮಕಿ ನಡೆದವು. ಕೊನೆಗೂ ಕಂದಾಯ ಇಲಾಖೆಯವರು ಸರ್ಕಾರಿ ಜಮೀನನ್ನು ತಮ್ಮ ಸ್ವಾಧೀನಕ್ಕೆ ತೆಗೆದುಕೊಂಡರು. ಪಿಎಸ್‌ಐಗಳಾದ ಮಹೇಂದ್ರಕುಮಾರ, ಬಾಷುಮಿಯಾ ಕೊಂಚೂರ್, ಕಂದಾಯ ನಿರೀಕ್ಷಕರಾದ ಸಂಜೂಕುಮಾರ್, ಮಹಾರುದ್ರ ಉಡಬಾಳ, ಮಹೇಶ್ ಹಾಗೂ ಪೊಲೀಸ್ ಮತ್ತು ಕಂದಾಯ ಇಲಾಖೆಯ ಸಿಬ್ಬಂದಿ ವರ್ಗದವರು ಇದ್ದರು.

## ಉಭಯರಿಗೆ ಅಭಿನವ ರೇಣುಕ ಶ್ರೀ ಪ್ರಶಸ್ತಿ ಗವಿಮಠದಲ್ಲಿ ಇಂದು





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ಮಾ 11 ಇಲ್ಲಿನ ಶ್ರೀ ಜಗದ್ಗುರು ಘನಲಿಂಗ ರುದ್ರಮನಿ ಶಿವಾಚಾರ್ಯ ಗವಿಮಠದಿಂದ ಕೊಡಮಾಡುವ 2025 ರ " ಅಭಿನವ ರೇಣುಕ ಶ್ರೀ " ಪ್ರಶಸ್ತಿ ಗೆ ನಿವೃತ್ತ ಪ್ರೌಢಶಾಲೆ ಮುಖ್ಯ ಉಪಾಧ್ಯಾಯರು ಆಗಿರುವ ಪಂಚಾಕ್ಷರಿ ಜಿ ಹಿರೇಮಠ ಹಾಗೂ ನಿವೃತ್ತ ಪ್ರಥಮ ದರ್ಜೆ ಸಹಾಯಕರು ಸರಕಾರಿ ಪ್ರೌಢ ಶಾಲೆಯ ರೇವಣಸಿದ್ದಯ್ಯ ಮಠಪತಿ. ಉಭಯರಿಗೆ ಆಯ್ಕೆ ಮಾಡಲಾಗಿದೆ ಎಂದು ನಗರದ ಸಂಸ್ಥಾನ ಗವಿಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಷ.ಬ್ರ.ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ತಿಳಿಸಿದ್ದಾರೆ. ಸಂಸ್ಥಾನ ಗವಿಮಠದಲ್ಲಿ ಮಾರ್ಚ್ 12ರಂದು ಸಾಯಂಕಾಲ 4:00ಗೆ ಜರಗುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದಲ್ಲಿ " ಅಭಿನವ ರೇಣುಕ ಶ್ರೀ " ಪ್ರಶಸ್ತಿ ಪ್ರದಾನ ಮಾಡಲಾಗುವುದು. ಸಾನಿಧ್ಯ ಪೂಜ್ಯಶ್ರೀ ಷ.ಬ್ರ. ಚಿದಾನಂದ ಶಿವಾಚಾರ್ಯರು ವಿರಕ್ತ ಮಠ ಬಿಲಗುಂದಿ, ನೇತೃತ್ವ ಶ್ರೀ ಷ.ಬ್ರ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಗವಿಮಠ , ಸಮ್ಮುಖ ಶ್ರೀ ಮ.ನಿ.ಪ್ರ ಅಭಿನವ ಚನ್ನಬಸವ ಮಹಾಸ್ವಾಮಿಗಳು ಚೌಕಿಮಠ ಮಂಠಾಳ, ಅಧ್ಯಕ್ಷತೆ ಶರಣಪ್ಪಾ ಬಿರಾದಾರ ಕಾರ್ಯಾಧ್ಯಕ್ಷರು ಗವಿಮಠ ಟ್ರಸ್ಟ್ ತ್ರಿಪೂರಾಂತ. ಗೌರವ ಉಪಸ್ಥಿತಿ ಮಹೇಶ್ ಪಾಟೀಲ ಸಹಾಯಕ ಆಯುಕ್ತರು ವಾಣಿಜ್ಯ ತೆರಿಗೆ ಇಲಾಖೆ ಬೀದರ, ಮುಖ್ಯ ಅತಿಥಿಗಳು- ಮಲ್ಲಯ್ಯಾ ಹಿರೇಮಠ ನಿರ್ದೇಶಕರು ಶ್ರೀ ಬಸವೇಶ್ವರ ದೇವಸ್ಥಾನ ಪಂಚಕಮಿಟಿ. ಡಾ. ಬಸವರಾಜ್ ಸ್ವಾಮಿ ಅಧ್ಯಕ್ಷರು ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆ ತಾಲೂಕಾ ಘಟಕ ಪ್ರಾಸ್ತಾವಿಕ ನುಡಿ ಪ್ರೋ. ಸೂರ್ಯಕಾಂತ ಶೀಲವಂತ ಪ್ರಾಚಾರ್ಯರಾದ ಪುಣ್ಯಕೋಟಿ ಪದವಿ ಪೂರ್ವ ಕಾಲೇಜ್ , ಸ್ವಾಗತ ಪ್ರೋ. ರುದ್ರೇಶ್ವರ ವಿರೂಪಾಕ್ಷಸ್ವಾಮಿ, ಸಂಚಾಲನೆ ಮುಖ್ಯಗುರುಗಳು ರಮೇಶ್ ರಾಜೋಳೆ ಶಿವಪೂರ. ಆದ್ದರಿಂದ ಸಕಲ ಸದ್ಭಕ್ತರು ಆಗಮಿಸಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಹಾಗೂ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಯೋಗಿಗಳ ದರ್ಶನ ಆಶೀರ್ವಾದ ಪಡೆದು ಮಹಾಪ್ರಸಾದ ಸ್ವೀಕರಿಸಿ ಪುನೀತರಾಗಬೇಕೆಂದು ಕೋರಲಾಗಿದೆ.




ಬಸವಕಲ್ಯಾಣ :- ಇಲ್ಲಿನ ಶ್ರೀ ಗಾನಯೋಗಿ ಶಿವಯೋಗಿ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 111ನೇ ಜಯಂತಿ ಉತ್ಸವ ನಿಮಿತ್ಯ ಸಂಗೀತ ಸಮ್ಮೇಳನ. ಕಾರ್ಯಕ್ರಮವನ್ನು ಮೌನೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಂಡ ಸಮಾರಂಭದಲ್ಲಿ ಹಿರಿಯ ಸಂಗೀತ ಕಲಾವಿದರಾದ ಜಗದೀಶ ಎಸ್ ನಗನೂರ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಯುವ ನಾಯಕರಾದ ಗಿರೀಶ್ ತಾಂಬೋಳೆ .ಮಹಿಳಾ ಮಕ್ಕಳ ಕಲ್ಯಾಣ ಇಲಾಖೆಯ ನಿವೃತ್ತ ಉಪನಿರ್ದೇಶಕರಾದ ಬಸವರಾಜ್ ವಿ. ವರವಟ್ಟೆ.ವಿಶ್ವಕರ್ಮದ ಹಿರಿಯ ಮುಖಂಡರಾದ ಹರಿಶ್ಚಂದ್ರ ಪಂಚಾಳ. ಹಿರಿಯ ಕಲಾವಿದ ಧೂಳಪ್ಪಾ ಮುಡಬಿ. ರಾಜಕುಮಾರ ಹೂಗಾರ. ರಾಮಚಂದ್ರ ಕಲಹಿಪರಗಿ. ಶಾಂತಯ್ಯ ಪಠಪತಿ. ದೊಡ್ಡಪ್ಪ ಅಪ್ಪಾ ಬಿ. ಎಡ್. ಮಹಾವಿದ್ಯಾಲಯದ ಪ್ರಾಚಾರ್ಯರಾದ ರಾಚಯ್ಯ ಸ್ವಾಮಿ ಮಠಪತಿ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾ ಅಧ್ಯಕ್ಷರಾದ ಮಾರ್ಥಂಡ್ ಜೋಶಿ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಈಶ್ವರ ಖಂಡ್ರೆಗೆ ಸಿಎಂ ಮಾಡಿ : ಜಾನಸನ್ ಘೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 11 : ಅರಣ್ಯ, ಪರಿಸರ ಹಾಗೂ ಜೈವಿಕ ಖಾತೆ ಸಚಿವ ಈಶ್ವರ ಖಂಡ್ರೆ ಅವರನ್ನು ರಾಜ್ಯದ ಮುಖ್ಯಮಂತ್ರಿಯನ್ನಾಗಿಮಾಡಬೇಕು ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಮಿಕ ವಿಭಾಗದ ಕಾರ್ಯದರ್ಶಿ ಜಾನ ಸ ನ್ ಘೋಡೆ . ಮನವಿ ಮಾಡಿದ್ದಾರೆ



ನವದೆಹಲಿಯಲ್ಲಿ ಮಂಗಳವಾರ ಅವರು ಈ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಈಶ್ವರ ಖಂಡ್ರೆ ಅವರು ಭಾಲ್ಕಿ ವಿಧಾನಸಭಾ ಕ್ಷೇತ್ರದಿಂದ ಸತತ ನಾಲ್ಕನೇ ಬಾರಿಗೆ ಆಯ್ಕೆಯಾಗಿದ್ದಾರೆ. ರಾಜ್ಯದಲ್ಲಿ ಪಕ್ಷದ ಸಂಘಟನೆಯಲ್ಲಿ ಸಕ್ರಿಯರಾಗಿದ್ದಾರೆ. ಬಿಜೆಪಿಯ ಭದ್ರಕೋಟೆಯಾಗಿದ್ದ ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗೆ ಕಾರಣರಾಗಿದ್ದಾರೆ ಎಂದು ಹೇಳಿದ್ದಾರೆ.

ಹಿರಿಯ ರಾಜಕಾರಣಿಯಾಗಿರುವ ಖಂಡ್ರೆ ಅವರಿಗೆ ಮುಖ್ಯಮಂತ್ರಿ ಹೊಣೆ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ವಿಶೇಷಚೇತನ ಕಲಾವಿದರ ಪ್ರತಿಭೆ ಅನಾವರಣ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 11 : ಕಾಡವಾದದ ಜೀವನ ಪ್ರಕಾಶ ಕಲ್ಚರಲ್ ಆಯಿಂಡ್ ವೆಲ್‌ಫೇರ್ ಸೊಸೈಟಿ ವತಿಯಿಂದ ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಈಚೆಗೆ ಆಯೋಜಿಸಿದ್ದ ವಿಶೇಷಚೇತನ ಕಲಾವಿದರ ರಾಜ್ಯಮಟ್ಟದ ಕಲಾ ಪ್ರತಿಭೋತ್ಸವವು ವಿಶೇಷಚೇತನರ ಕಲಾ ಪ್ರತಿಭೆ ಅನಾವರಣಕ್ಕೆ ವೇದಿಕೆಯಾಯಿತು.

ವಿಶೇಷಚೇತನರು, ಸುಗಮ ಸಂಗೀತ, ತಬಲಾ, ಡ್ರಮ್ ವಾದನ, ಜನಪದ ಗಾಯನ, ಮಿಮಿಕ್ರಿ ಮೊದಲಾದ ಕಲೆಗಳ ಪ್ರದರ್ಶನದ ಮೂಲಕ ನೆರೆದವರ ಮನಸೂರೆಗೊಂಡರು.


ಉತ್ತರಕನ್ನಡ ಜಿಲ್ಲೆಯ ಆಕಾಶವಾಣಿ ಕಲಾವಿದೆ ಸ್ವಪ್ನಾ ನಾಯಕ್ ಸುಗಮ ಸಂಗೀತ ನಡೆಸಿಕೊಟ್ಟರೆ, ಬೆಳಗಾವಿಯ ಬಸಮ್ಮ ಮಠದ ಜಾನಪದ ಗೀತೆಗಳನ್ನು ಸುಮಧುರವಾಗಿ ಹಾಡಿದರು. ಬಳ್ಳಾರಿಯ ಬಲ್ಲೂರಪ್ಪ ಬಾಯಿಯಿಂದಲೇ ತಬಲಾ, ಡ್ರಮ್ ವಾದಿಸಿ ಗಮನ ಸೆಳೆದರು. ಕೊಪ್ಪಳ ಜಿಲ್ಲೆಯ ಚಂಪಕಮಾಲ ಅವರ ಮಿಮಿಕ್ರಿ ಸಭಿಕರನ್ನು ನಕ್ಕು ನಲಿಸಿತು. ಇನ್ನೂ ಅನೇಕ ಕಲಾವಿದರು ತಮ್ಮ ಕಲೆ ಪ್ರದರ್ಶಿಸಿ ಮೆಚ್ಚುಗೆ ಗಳಿಸಿದರು. ಕವಿಗೋಷ್ಠಿಯಲ್ಲಿ ವಿಶೇಷಚೇತನರು ಸ್ವರಚಿತ ಕವನ ವಾಚಿಸಿದರು. ಸಂಸ್ಥೆಯ ಅಧ್ಯಕ್ಷ ದಿಲೀಪ್ ಕಾಡವಾದ ಸಂಪಾದಕತ್ವದ 'ಪ್ರತಿಭಾ ಕಾವ್ಯಾಂಜಲಿ' ಕೃತಿ, ವಿಶೇಷಚೇತನ ಕಲಾವಿದರ ಗಾಯನದ 'ಭಾವ ಸುನಾದ' ಧ್ವನಿ ಸುರಳಿ ಬಿಡುಗಡೆ ಮಾಡಲಾಯಿತು. ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಡಾ. ಪೂರ್ಣಿಮಾ ಜಾರ್ಜ್ ಉದ್ಘಾಟಿಸಿದರು. ಕಲಾವಿದ ಶಂಭುಲಿಂಗ ವಾಲ್ದೊಡ್ಡಿ, ಉಪನ್ಯಾಸಕ ರಾಮಚಂದ್ರ ಗಣಾಪುರ, ಸಂಸ್ಥೆಯ ಕಾರ್ಯದರ್ಶಿ ಎಸ್ತೇರ್ ಡಿ. ಕಾಡವಾದ್ ಮಾತನಾಡಿದರು. ಹುಲಸೂರಿನ ಶಿವಾನಂದ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಂಸ್ಥೆಯ ಅಧ್ಯಕ್ಷ ದಿಲೀಪ್ ಕಾಡವಾದ ಅಧ್ಯಕ್ಷತೆ ವಹಿಸಿದ್ದರು.

ಖ್ಯಾತ ಗಾಯಕಿ ರೇಖಾ ಸೌದಿ, ಪ್ರಮುಖರಾದ ಸಂಜೀವಕುಮಾರ ಅತಿವಾಳೆ, ಮಹಾದೇವ ಮೊಂಗಳೆ, ಡಾ. ವಿವೇಕ್ ನಿಂಬೂರೆ, ಪ್ರೊ. ಸಿದ್ರಾಮಪ್ಪ ಮಾಸಿಮಾಡೆ, ಎಂ.ಎಸ್. ಮನೋಹರ, ಪಾರ್ವತಿ ಸೋನಾರೆ, ಡಾ. ಪೌರ್ಣಿಮ ಶೇಳ್ಕೆ, ಡಾ. ರಾಜಕುಮಾರ ಹೆಬ್ಬಾಳೆ, ಪುಂಡಲೀಕರಾವ್ ಪಾಟೀಲ್, ರಾಜೇಂದ್ರಸಿಂಗ್ ಪವಾರ್, ತಾಜೊದ್ದಿನ್ ಮರ್ಜಾಪುರ, ಮಹೇಶಕುಮಾರ ಕುಂಬಾರ, ಸ್ವಾಮಿದಾಸ ನಾಗೂರೆ, ರಮೇಶ ಭುಸ್ನಾ, ರಾಜೇಂದ್ರ ಮಣಗಿರೆ, ಸಂಗ್ರಾಮ ಎಂಗಳೆ, ಸುನೀಲ್ ಚಾಂಬೋಳ್, ಮಂಗಲಾ ಮರಕಲೆ ಇದ್ದರು.

ಜೆಸ್ಸಿ ಸೋನವಾನೆ ಸ್ವಾಗತಿಸಿದರು. ದೇವಿದಾಸ ಜೋಶಿ, ದಿಲೀಪ್ ಮೋಘಾ ನಿರೂಪಿಸಿದರು. ಸೈಮನ್ ಸೂರ್ಯವಂಶಿ ವಂದಿಸಿದರು.

# ವಿಮಾನಯಾನ ಏ. 15ಕ್ಕೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 11 : ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಬೀದರ ವಿಮಾನ ವಾಯು ಸೇವೆ ಬರುವ 15ನೇ ಏಪ್ರಿಲ್ 2025 ತಾರೀಖಿನಿಂದ ಹಾರಾಟದ ದಿನ ನಿಗದಿಯಾಗಿ, ಪ್ರಯಾಣಿಕರ ಪ್ರಯಾಣದ ಟಿಕೆಟ್ ಬುಕಿಂಗ್ ಪ್ರಾರಂಭವಾದುದು ಬೀದರ್ ವ್ಯಾಪಾರೋದ್ಯಮಿಗಳಿಗೂ, ಸರಕಾರಿ ಅಧಿಕಾರಿಗಳಿಗೂ, ಹಾಗೂ ಸಾರ್ವಜನಿಕರಿಗೂ ಅನುಕೂಲಮಾಡಿಕೊಟ್ಟುದ್ದುಕ್ಕಾಗಿ ಕೇಂದ್ರ ಸರಕಾರದ ಕೇಂದ್ರ ವಾಯುಯಾನ ಮಾನ್ಯ ಶ್ರೀ ಕಿಂಜಾರಪೂ ರಾಮಮೋಹನ ನಾಯ್ಡು ಕರ್ನಾಟಕ ರಾಜ್ಯ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ರಾಮಯ್ಯನವರಿಗೂ, ಕರ್ನಾಟಕ ರಾಜ್ಯದ ಮಾನ್ಯ ಮೂಲಸೌಕರ್ಯ ಮಂತ್ರಿಗಳಾದ ಶ್ರೀ ಎಂ.ಬಿ. ಪಾಟೀಲರಿಗೆ, ಬೀದರ್ ಮಾನ್ಯ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ. ಖಂಡ್ರೆಜಿಯವರಿಗೆ, ಬೀದರನ ಮಾನ್ಯ ಯುವ ಸಂಸದರಾದ ಶ್ರೀ ಸಾಗರ ಈ.ಖಂಡ್ರೆಜಿ. ಯವರಿಗೆ, ಜಿಲ್ಲಾಡಳಿತಕ್ಕೆ ಸಂಬಂಧ ಪಟ್ಟ ಅಧಿಕಾರಿಗಳಿಗೂ ಸ್ಟಾರ ಏರ್ ಹಾಗೂ ಮಾಧ್ಯಮ ಮಿತ್ರರಿಗೂ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹರ್ಷಗೊಂಡು ತುಂಬು ಹೃದಯದ ಅಭಿನಂದನೆಗಳು ಹಾಗೂ ಧನ್ಯವಾದಗಳು ಸಲ್ಲಿಸುತ್ತದೆ.

ಬೀದರ್ ವಿಮಾನ ವಾಯು ಸೇವೆ ಸ್ಥಗಿತಗೊಂಡಾಗಿನಿಂದ ಸತತ ಜಿಲ್ಲಾಡಳಿತ, ರಾಜ್ಯ ಸರಕಾರ ಹಾಗೂ ಕೇಂದ್ರ ಸರಕಾರಕ್ಕೆ ಒತ್ತಾಯಿಸುತ ವಿನಂತಿ ಮಾಡುತ್ತಾ ಬಂದಿರುವದಲ್ಲದೆ ದಿನಾಂಕ 13-08-2024 ರಂದು ಬೀದರ ಪತ್ರಿಕಾ ಭವನದಲ್ಲಿ. ಪತ್ರಿಕಾ ಗೋಷ್ಠಿ ಅಯೋಜಿಸಿ ಎಲ್ಲರ ಗಮನ ಸೆಳೆದಿದು, ಅಲ್ಲದೆ ಸುಮಾರು ದಿನಗಳಿಂದ ನಮ್ಮ ಸಂಸ್ಥೆ ಜಿಲ್ಲಾಡಳಿತ, ರಾಜ್ಯ ಸರಕಾರ ಹಾಗೂ ಕೇಂದ್ರ ಸರಕಾರಕ್ಕೆ ಸತತ ಮನವಿ ಹಾಗೂ ಪತ್ರ ವ್ಯವಹಾರ ಮಾಡಿದ ಫಲವಾಗಿ ಬೀದರ ಜನರ ಕನಸು ಇಂದು ನನಸಾಗಿರುವದಲ್ಲದೆ ಬೀದರ ವಿಮಾನ ಸೇವೆ ಪುನಾರಂಭದ ಜೊತೆಗೆ ಬೀದರ ಜನರ ಅನುಕೂಲವಾಗುವಂತೆ ಪ್ರತಿದಿನ ಬೆಳಿಗ್ಗೆ 7.45ಕ್ಕೆ ಬೆಂಗಳೂರಿನಿಂದ ಹೊರಟು ಬೆಳಿಗ್ಗೆ 9ಕ್ಕೆ ಬೀದರ ತಲುಪಲಿದೆ. ಬೀದರನಿಂದ ಬೆಳಿಗ್ಗೆ 9.30 ಹೊರಟು 10.45 ಬೆಂಗಳೂರಿಗೆ ಸೇರಲಿದೆ. ವಿಮಾನ ಹಾರಾಟದ ಸಮಯ ಬದಲಾವಣೆ ಮಾಡಿದಿದು, ಸಾರ್ವಜನಿಕರಿಗೆ ಬೀದರದಿಂದ ಬೆಂಗಳೂರಿಗೆ ಹೋಗಿ ಬರುವ ವ್ಯವಸ್ಥೆಮಾಡಿ ಆದೇಶಿಸಿ ಸೇವೆ ಪುನಾರಂಭಿಸಿದುದು ಅತೀವ ಅನುಕೂಲ ಹಾಗೂ ಆರಾಮ ದಾಯಕ ಹಾಗೂ ಮಿತವ್ಯದಾಯಕವಾದುದುದಾಗಿದೆ. ಆದ್ದರಿಂದ ಈ ಬೀದರ ವಿಮಾನ ಹಾರಾಟದ ಸೇವೆಯಿಂದ ವ್ಯಾಪಾರೋದ್ಯಮಿಗಳು, ಅಧಿಕಾರಿವರ್ಗದವರು ಹಾಗೂ ಸಾರ್ವಜನಿಕರು ವಾಯು ಸೇವೆಯ ಸದುಪಯೋಗ ಪಡೆದುಕೊಳ್ಳಬೇಕಾಗಿ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಬೀದರ ವಿನಂತಿಸುತ್ತದೆ.

# ಪುಸ್ತಕ ಓದುವುದರಿಂದ ವ್ಯಕ್ತಿತ್ವ ವಿಕಸನ : ಸತೀಶ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 11: ತಲೆಬಾಗಿ ಪುಸ್ತಕ ಓದುವುದರಿಂದ ವ್ಯಕ್ತಿಯು ತಲೆಯೆತ್ತಿ ಸಮಾಜದಲ್ಲಿ ಓಡಾಡುವಂತೆ ಮಾಡುತ್ತದೆ. ಇದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ ಎಂದು ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ನುಡಿದರು.

ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು, ಕರ್ನಾಟಕ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗದ ಜಾಣ ಜಾಣೆ-ಯರ ಕನ್ನಡ ಬಳಗ-2025 ಸಹಯೋಗದೊಂದಿಗೆ ಪ್ರೊ. ವಿಕ್ರಮ ವಿಸಾಜಿ ರಚಿತ ರಕ್ತ ವಿಲಾಪ ನಾಟಕ ಕುರಿತು ನನ್ನ ನೆಚ್ಚಿನ ಪುಸ್ತಕ ಓದು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಗಳು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪುಸ್ತಕ ಓದುವುದರಿಂದ ಜ್ಞಾನ ವೃದ್ಧಿಯಾಗಿ ಪರಿಪಕ್ವ ಚರ್ಚೆಗೆ ನಾಂದಿ ಹಾಡುತ್ತದೆ ಎಂದು ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಸಂಚಾಲಕ ಬಿ.ಎಚ್.ನಿರಗುಡಿ ಮಾತನಾಡಿ 1993ರಲ್ಲಿ ಸ್ಥಾಪನೆಯಾದ ಪ್ರಾಧಿಕಾರವು ಕಡಿಮೆ ದರದಲ್ಲಿ ಪುಸ್ತಕ ಮಾರಾಟ ಮಾಡಿ ಓದುಗರ ಮನತಣಿಸುತ್ತಿದೆ. ಜೊತೆಗೆ ಸಾಹಿತಿಗಳ ಪುಸ್ತಕಗಳನ್ನು ಖರೀದಿಸಿ ಸಹಕಾರ ನೀಡುತ್ತಿದೆ. ಕರ್ನಾಟಕ ಕಾಲೇಜಿಗೂ ಉಚಿತವಾಗಿ ಪುಸ್ತಕಗಳನ್ನು ನೀಡಲಾಗುವುದು. ಸಿರಿಗನ್ನಡ ಪುಸ್ತಕ ಮಳಿಗೆ ಮೂಲಕ ಪುಸ್ತಕ ಸಂಸ್ಕೃತಿ ಹೆಚ್ಚಿಸುವ ಕಾರ್ಯ ಮಾಡುತ್ತಿದೆ. ಸಾಹಿತ್ಯ, ಓದು ಮತ್ತು ಮುದ್ರಣ ವಿಭಾಗದಲ್ಲಿ 3 ವರ್ಷದಿಂದ ಪ್ರಶಸ್ತಿ ನೀಡಿಲ್ಲ. ಇದೀಗ 31 ಜಿಲ್ಲೆಗಳಲ್ಲಿ ಅರ್ಹ ಫಲಾನುಭವಿಗಳಿಗೆ ಗುರುತಿಸಿ ಪ್ರಶಸ್ತಿ ನೀಡುವ ಕಾರ್ಯ ಚಾಲನೆಯಲ್ಲಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಬಸವಕಲ್ಯಾಣ ಬಸವೇಶ್ವರ ಪದವಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ ಪ್ರೊ. ವಿಕ್ರಮ ವಿಸಾಜಿಯವರ 'ರಕ್ತ ವಿಲಾಪ' ನಾಟಕ ಚಿಂತಕ ಮತ್ತು ಹಂತಕರ ನಡುವಿನ ಚರ್ಚೆ ಕುರಿತು ಬರೆಯಲಾಗಿದೆ. ಬಿಸಿ ರಕ್ತದ ಯುವಕರು ಪ್ರಜ್ಞಾವಂತರಾಗದಿದ್ದರೆ ಕೆಲವರು ಎಲ್ಲೆಲ್ಲಿಗೋ ಎಳೆದುಕೊಂಡು ಹೋಗುತ್ತಾರೆ. ಆದ್ದರಿಂದ ಯುವಕರು ಎಲ್ಲಾ ವಿಷಯವನ್ನು ವ್ಯವಧಾನದಿಂದ ನೋಡಬೇಕು. ದಾಳಿ ವ್ಯಕ್ತಿ ಮೇಲೆ ಆದರೂ ಅದು ವಿಚಾರದ ಮೇಲೆ ಎಂಬುದು ಮನಗಾಣಬೇಕು. ಎಂ.ಎಚಿ. ಕಲಬುರಗಿ ಮೇಲೆ ದಾಳಿ, ಘೇರಾವ್ ಮತ್ತು ಬೆದರಿಕೆ ಹಾಕುತ್ತಿದ್ದರು. ಆದರೂ ಅಳುಕದೆ ಸತ್ಯ ಪ್ರತಿಪಾದನೆ ಮಾಡಿದ್ದಾರೆ. ಯುವಕರು ಪೂರ್ವಾಗ್ರಹ ಬಿಡಬೇಕು. ಸತ್ಯ ಕಾಣಲು ಮನಸ್ಸು ಬಿಡುಗಡೆಯಾಗಬೇಕು. ಕುರುಹಿಗಿಂತ ಅರಿವಿಗೆ ಪ್ರಾಧಾನ್ಯತೆ ನೀಡಬೇಕು. ಇತಿಹಾಸದಲ್ಲಿ ಸತ್ಯ ಪ್ರತಿಪಾದನೆ ಮಾಡಿದವರೆಲ್ಲ ಸಾವು ಕಂಡಿದ್ದಾರೆ. ಸಾಮಾಜಿಕ ಪ್ರೀತಿ ತುಂಬಿದ ಪುಸ್ತಕ ಶತಮಾನಗಳವರೆಗೆ ಜೀವಂತವಾಗಿರುತ್ತದೆ ಎಂದರು.

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಐಕ್ಯೂಎಸಿ ವಿಭಾಗದ ಮುಖ್ಯಸ್ಥ ಡಾ. ರಾಜಮೋಹನ ಪರದೇಶಿ ಮಾತನಾಡಿದರು. ಹಾಗೂ ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಮಹಾನಂದ ಮಡಕಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕು.ಚಂದ್ರಕಲಾ ಪ್ರಾರ್ಥಿಸಿದರು. ಪವನ ಶಿವರಾಜ ನಿರೂಪಿಸಿದರು. ಸಂಗೀತಾ ಮಾನಾ ವಂದಿಸಿದರು.

ವೇದಿಕೆ ಮೇಲೆ ಕ.ರಾ.ಶಿ. ಸಂಸ್ಥೆಯ ಜಂಟಿ ಕಾರ್ಯದರ್ಶಿ ಶಿವಾನಂದ ಗಾದಗೆ, ಕಾಲೇಜಿನ ಉಪ ಪ್ರಾಚಾರ್ಯರಾದ ಸೋಮನಾಥ ಬಿರಾದಾರ, ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು, ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಬಿ.ಸಿ.ಎಮ್ ಜಿಲ್ಲಾಧಿಕಾರಿ ಸಂಗೀತಾರನ್ನು ಕೂಡಲೇ ಅಮಾನತು ಮಾಡಿ: ಫುಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 11 : ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಾದ ಸಂಗೀತಾ ಬಿರಾದಾರ್ ಅವರನ್ನು ಕೂಡಲೇ ಅಮಾನತ್ತು ಮಾಡಬೇಕೆಂದು ಪ್ರಜಾಪ್ರಭುತ್ವ ಸಂರಕ್ಷಣಾ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಗಗನ್ ಫುಲೆ ಆಗ್ರಹಿಸಿದರು

ಮಂಗಳವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರಾಜ್ಯ ಸರಕಾರ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿಗೆ ಬಯೋಮೆಟ್ರಿಕ ಕಡ್ಡಾಯಗೊಳಿಸಿದೆ. ಆದರೆ ಬಹುತೇಕ ಹಾಸ್ಟೆಲ್‌ಗಳಲ್ಲಿ ಮ್ಯಾನ್ಯುಯಲ್ ಹಾಜರಾತಿ ಮೂಲಕವೇ ವಿದ್ಯಾರ್ಥಿಗಳ ಲೆಕ್ಕ ಕೊಟ್ಟು ಹಣ ಲೂಟಿ ಹೊಡೆಯುತ್ತಿದ್ದಾರೆ ಎಂದು ಆರೋಪಿಸಿದರು.

ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿರುವ ಹಾಸ್ಟೆಲ್‌ಗಳಲ್ಲಿ ಬಯೋಮೆಟ್ರಿಕ್ ಅಳವಡಿಸಲಾಗಿದೆ. ಆದರೆ, ತಾಂತ್ರಿಕ ಸಮಸ್ಯೆಯ ನೆಪವೊಡ್ಡುತ್ತಿರುವ ಹಾಸ್ಟೆಲ್ ವಾರ್ಡನ್‌ಗಳು, ಮ್ಯಾನ್ಯುಯಲ್ ಮೂಲಕ ವಿದ್ಯಾರ್ಥಿಗಳ ಹಾಜರಾತಿ ಪಡೆಯುತ್ತಿದ್ದಾರೆ. ವಿದ್ಯಾರ್ಥಿಗಳು ಗೈರಾಗಿದ್ದರೂ, ಹಾಜರಾತಿ ಲೆಕ್ಕ ಕೊಡುತ್ತಿದ್ದಾರೆ. ಇದನ್ನು ಪರಿಶೀಲಿಸಿದ ಮೇಲಾಧಿಕಾರಿಗಳು, ಬಿಲ್ ಬಿಡುಗಡೆ ಮಾಡುತ್ತಿದ್ದಾರೆ. ಹೀಗಾಗಿ ಮ್ಯಾನ್ಯುಯಲ್ ಹಾಜರಾತಿ ಸಂ-ಖ್ಯೆ ದ್ವಿಗುಣಗೊಂಡು ಹಣ ಮ್ಯಾನ್ಯುಯಲ್ ದುರ್ಬಳಕೆಯಾಗುತ್ತಿದೆ. ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಅಕ್ರಮದ ಮಾಹಿತಿ ಇದ್ದರೂ ಜಾಣ ಕುರುಡರಾಗಿದ್ದಾರೆ ಎಂದು ಆರೋಪಿಸಿದರು.

"ಇಲಾಖೆಯ ಹಾಸ್ಟೆಲ್‌ಗಳಲ್ಲಿ ಅಳವಡಿಸಲಾಗಿರುವ ಬಯೋಮೆಟ್ರಿಕ್ ಯಂತ್ರಗಳ ಮೂಲಕ ಒಬ್ಬ ವಿದ್ಯಾರ್ಥಿ ಮೂಲಕವೇ ಐದು ಮಂದಿಯ ಹಾಜರಾತಿ ದಾಖಲು ಮಾಡಲಾಗುತ್ತಿರುವ ಆರೋಪವೂ ಇದೆ. ಹಾಗಾಗಿ ಆಧಾರ್ ಆಧಾರಿತ ಬಯೋಮೆಟ್ರಿಕ್ ವ್ಯವಸ್ಥೆ ಜಾರಿಗೆ ತರಬೇಕು. ಆಗ ಅನುದಾನ ದುರ್ಬಳಕೆ ತಡೆಯಬಹುದಾಗಿದೆ. ಎಂದರು.

ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳು ಪ್ರಾಥಮಿಕ, ಪ್ರೌಢ ಶಿಕ್ಷಣ ಹಾಗೂ ಮೆಟ್ರಿಕ್ ನಂತರದ ಪಿಯುಸಿ, ಪದವಿ ಶಿಕ್ಷಣ ಮುಂದುವರಿಸುವುದನ್ನು ಪ್ರೋತ್ಸಾಹಿಸಲು ರಾಜ್ಯ ಸರಕಾರ, ಮೆಟ್ರಿಕ್ ಪೂರ್ವ ಹಾಗೂ " ಮೆಟ್ರಿಕ್ ನಂತರದ ಹಾಸ್ಟೆಲ್‌ಗಳನ್ನು ಪ್ರಾರಂಭಿಸಿದೆ. ಮೆಟ್ರಿಕ್ ಪೂರ್ವ ಹಾಸ್ಟೆಲ್‌ಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ತಲಾ 1,750 ರೂ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ ತಲಾ, 1,850 ರೂ, ಊಟ, ತಿಂಡಿಯ ವೆಚ್ಚ ಭರಿಸಲಾಗುತ್ತಿದೆ. 10 ತಿಂಗಳ ಅವಧಿಗೆ ಉಚಿತ ವಸತಿ, ಆಹಾರ, ಸಮವಸ್ತ್ರ ಹಾಗೂ ಇತರೆ ಸೌಲಭ್ಯಗಳಿಗೂ ಹಣ ಒದಗಿಸುತ್ತಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು ರಾಜ್ಯದ ಎಲ್ಲಾ ಜಿಲ್ಲಾ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿರುತ್ತಾರೆ. ಆದರೆ ಬೀದರ ಜಿಲ್ಲೆಯ ಜಿಲ್ಲಾ ಕಲ್ಯಾಣಾಧಿಕಾರಿ ಸಂಗೀತಾ ಎಸ್. ಬಿರಾದಾರ ರವರು 26-07-2022 ರಿಂದ ಮಾರ್ಚ 2025ರ ವರೆಗೆ ಮಾನ್ಯ ಸಚಿವರ ಟಿಪ್ಪಣಿಯನ್ನು ಪಾಲಿಸದೇ ಹಿಂದಿನಂತೆಯೇ ಆಹಾರ ವೆಚ್ಚದ ಬಿಲ್ಲುಗಳನ್ನು ಮ್ಯಾನ್ಯುವಲ ಹಾಜರಾತಿ ಪ್ರಕಾರ ಪಾಸ ಮಾಡುತ್ತಿರುವುದು ಕಂಡು ಬಂದಿದೆ ಎಂದರು.

ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿನದಲ್ಲಿ ಬರುವ ಮೆಟ್ರಿಕ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ದಿನಾಲು 15 ರಿಂದ 20 ವಿದ್ಯಾರ್ಥಿಗಳು ಮಾತ್ರ ಬಯೋಮಟ್ರಿಕ ಹಾಜರಾತಿ ಹಾಕಿ ಊಟ ಮಾಡುತ್ತಾರೆ, ಆದರೆ ಎಲ್ಲಾ ಮೆಟ್ರಿಕ ಪೂರ್ವ ವಸತಿ ನಿಲಯಗಳ ಮೇಲ್ವಿಚಾರಕರು ಶೇಕಡಾ ನೂರಕ್ಕೆ ನೂರರಷ್ಟು ನಿಲಯಾರ್ಥಿಗಳ ಮ್ಯಾನುವಲ ಹಾಜರಾತಿ ಪುಸ್ತಕದಲ್ಲಿ ಹಾಜರಾತಿ ಹಾಕುತ್ತಾರೆ.

ಪ್ರತಿ ಮೆಟ್ರಿಕ ಪೂರ್ವ ವಸತಿ ನಿಲಯದಲ್ಲಿ ಪ್ರತಿ ತಿಂಗಳು 30-40 ವಿದ್ಯಾರ್ಥಿಗಳ ಆಹಾರ ವೆಚ್ಚದ ಬಿಲ್ಲುಗಳನ್ನು ಭೋಗಸ ಬಿಲ್ಲುಗಳನ್ನು ಮಾಡುತ್ತಿದ್ದಾರೆ. ಅದೇ ರೀತಿ ಮೆಟ್ರಿಕ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಕೂಡಾ ದಿನಾಲು 30-40 ವಿದ್ಯಾರ್ಥಿಗಳು ಮಾತ್ರ ಬಯೋಮೆಟ್ರಿಕ ಹಾಜರಾತಿ ಹಾಕಿ ಬೆಳಗಿನ ಉಪಹಾರ, ಮಧ್ಯಾಹ್ನದ ಊಟ ಮತ್ತು ರಾತ್ರಿಯ ಊಟ ಮಾಡುತ್ತಾರೆ ಆದರೆ ಎಲ್ಲಾ ಮೆಟ್ರಿಕ ನಂತರದ ವಸತಿ ನಿಲಯಗಳ ನಿಲಯ ಪಾಲಕರು ಶೇಕಡಾ ನೂರಕ್ಕೆ ನೂರರಷ್ಟು ನಿಲಯಾರ್ಥಿಗಳ ಮ್ಯಾನುವಲ ಹಾಜರಾತಿ ಪುಸ್ತಕದಲ್ಲಿ ಹಾಜರಾತಿ ಹಾಕುತ್ತಾರೆ. ಪ್ರತಿ ಮೆಟ್ರಿಕ ನಂತರ ವಸತಿ ನಿಲಯದಲ್ಲಿ ಪ್ರತಿ ತಿಂಗಳು ಗೈರು ಹಾಜರಾದ 50-60 ವಿದ್ಯಾರ್ಥಿಗಳ ಆಹಾರ ವೆಚ್ಚದ ಬಿಲ್ಲುಗಳನ್ನು ಬೋಗಸ ಮಾಡುತ್ತಿದ್ದಾರೆ. ಜಿಲ್ಲೆಯ ಕೆಲ ವಸತಿ ನಿಲಯಗಳಲ್ಲಿ ಖಾಯಂ ಅಡುಗೆವರಾಗಿ ನೇಮಕವಾಗಿ ಕೆಲಸ ಮಾಡದೇ ಮನೆಯಲ್ಲಿಯೆ ಕುಳಿತುಕೊಂಡು ಮೇಲಾಧಿಕಾರಿಗಳಿಗೆ ಲಂಚ ಕೊಟ್ಟು ವೇತನ ಪಡೆಯುತ್ತಿದ್ದಾರೆ ಎಂದು ದೂರಿದರು.

ಇವರ ಹಾಜರಾತಿ ಮೇಲಾಧಿಕಾರಿಗಳಿಗೆ ಕೊಡುತ್ತಿರುವ ನಿಲಯ ಮೇಲ್ವಿಚಾರಕರನ್ನು/ ನಿಲಯ ಪಾಲಕರನ್ನು ಕೂಡಲೆ ಅಮಾನತು ಮಾಡಬೇಕು ಹಾಗೂ ಸರ್ಕಾರದ ಬೊಕ್ಕಸಕ್ಕೆ ಹಾನಿ ಮಾಡಿರುವ ಹಣವನ್ನು ನಿಲಯ ಮೇಲ್ವಿಚಾರಕರಿಂದ/ನಿಲಯ ಪಾಲಕರಿಂದ ವಸೂಲಿ ಮಾಡಬೇಕೆಂದು ಒತ್ತಾಯಿಸಿದರು.

ವಿಶಾಲ ವಲ್ಯಾಪುರೆ ಅನ್ನುವ ಹೊರಸಂಪನ್ಮೂಲ ಸಿಬ್ಬಂದಿ ಬಸವಕಲ್ಯಾಣ ತಾಲೂಕಿನ ಮೆಟ್ರಿಕ ನಂತರ ಬಾಲಕರ ವಸತಿ ನಿಲಯ ಖಾನಾಪೂರ (ಕೆ) (ಃಅಫಅ-1697) ರಲ್ಲಿ ಕೆಲಸ ಮಾಡುತ್ತಿದ್ದಾಗ ಬಸವಕಲ್ಯಾಣ ತಾಲೂಕಿನ ಪ್ರಭಾರ ತಾಲ್ಲೂಕು ಕಲ್ಯಾಣಾಧಿಕಾರಿ ವಿ.ಬಿ ಹಿರೇಗೌಡರ ಹಾಗೂ ಇವಾಗ ಔರಾದ ತಾಲೂಕಿನ ಪ್ರಭಾರಿ ತಾಲ್ಲೂಕು ಕಲ್ಯಾಣಾಧಿಕಾರಿ ಮತ್ತು ಪ್ರಥಮ ದರ್ಜೆ ಸಹಾಯಕನಾದ ತೌಫಿಕ ಅಹ್ಮದ ಅನ್ನುವವರ ಭ್ರಷ್ಟಾಚಾರವನ್ನು ವಿರೋಧಿಸಿದಾಗ ಅಂದರೆ ಬಸವಕಲ್ಯಾಣ ತಾಲೂಕಿನ ಎಲ್ಲಾ ವಸತಿ ನಿಲಯಗಳ ಶೌಚಾಲಯದ ಬಿಲ್ಲುಗಳನ್ನು ವಿಶಾಲ ವಲ್ಯಾಪುರೆ ಅವರ ಹೆಸರಿಗೆ ವರ್ಗಾಯಿಸಿದ್ದನು ವಿರೋಧಿಸಿದಾಗ ಅವನನ್ನು ಹುದ್ದೆಯಿಂದ ತೆಗೆದಿರುತ್ತಾರೆ ಆದ್ದರಿಂದ ಆ ಸಿಬ್ಬಂದಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು, ಮತ್ತು ಆಯುಕ್ತರಿಗೂ, ಲೋಕಾಯುಕ್ತರಿಗೂ ದೂರನ್ನು ಕೊಟ್ಟಿರುತ್ತಾನೆ. ಈ ವಿಷಯ ಈಗಾಗಲೆ ನ್ಯಾಯಾಲಯದಲ್ಲಿ ಇರುತ್ತದೆ ಇಷ್ಟಾದರು ಕೂಡಾ ಜಿಲ್ಲಾಡಳಿತ ಕಣ್ಮುಚ್ಚಿ ಕುಳಿತಿರುವುದು ಕಂಡು ಬರುತ್ತದೆ ಆದರಿಂದ ಇಂತಹ ಭ್ರಷ್ಟ ಪ್ರಭಾರಿ ತಾಲೂಕಾ ಕಲ್ಯಾಣಾಧಿಕಾರಿಗಳಾದ ವಿಜಯ ಮಾಲಾ ಭಾಲ್ಕಿ, ವಿ.ಬಿ ಹಿರೇಗೌಡರ ಬಸವಕಲ್ಯಾಣ, ರವೀಂದ್ರ ಮೇತ್ರೆ ಔರಾದ ಇವರನ್ನು ಕೂಡಲೆ ಅಮಾನತು ಮಾಡಬೇಕು. ಹಾಗೂ ಇದಕ್ಕೆಲ್ಲಾ ಬೆನ್ನೆಲುಬು ಆಗಿ ನಿಂತತಹ ಬೀದರ ಜಿಲ್ಲೆಯ ಪ್ರಭಾರ ಜಿಲ್ಲಾ ಕಲ್ಯಾಣಾಧಿಕಾರಿ ಸಂಗೀತಾ ಎಸ್. ಬಿರಾದಾರ ರವರನ್ನು ಕೂಡಲೆ ಅಮಾನತು ಮಾಡಿ ಇವರ ಮೇಲೆ ಕ್ರಿಮಿನಲ್ ಮೊಕ್ಕದಮ್ಮೆ ಹೂಡಿ ಉನ್ನತ ಮಟ್ಟದ ತನಿಖೆ ಮಾಡಿಸಬೇಕೆಂದು ಗಗನ ಫುಲೆ ಹೇಳಿದರು.

ಸಂಘಟನೆಯ ಪ್ರಮುಖರಾದ ವೆಂಕಟರಾವ ಮೋರೆ, ವಿನೋದ ರತ್ನಾಕರ, ಜಯವರ್ಧನ ಫುಲೆ, ಕಲ್ಲಪ್ಪ ಹಾಲಿಪುರ್ಗೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

ಇಂದು ಸಾಮಾಜಿಕ ಭದ್ರತಾ ಯೋಜನೆ ಕುರಿತು

# ಜಾಗೃತಿ ಅಭಿಯಾನ : ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಿ ಡಿಸಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮಾ.11– ಇದೆ ಮಾರ್ಚ 12 ರಂದು ಮೆಗಾ ಲಾಗಿನ್‌ಆಯೋಜಿಸಿದ್ದುಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಸಾರ್ವಜನಿಕರಲ್ಲಿ ಅಧಿಕಾರಿಗಳು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ನೋಂದಣಿಗಾಗಿ ಮಾರ್ಚ 12, 2025 ರಂದು ಮೆಗಾ ಲಾಗಿನ್ ದಿನವನ್ನು ಆಯೋಜಿಸುವ ನಿಮಿತ್ತ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪ್ರತಿಯೊಂದು ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಕೇವಲ ರೂ. 20 ರ ವಾರ್ಷಿಕ ಪ್ರಿಮಿಯಮ್‌ನಲ್ಲಿ ರೂ. 2 ಲಕ್ಷ ರೂಗಳ ಅಪಘಾತ ವಿಮೆ ಇರುತ್ತದೆ. ಅಪಘಾತವಾದಸಮಯದಲ್ಲಿ 2 ಲಕ್ಷ ರೂಗಳ ಪರಿಹಾರ ಧನವನ್ನುನೀಡುತ್ತದೆ.ಸಂಪೂರ್ಣ ಅಂಗವೈಕಲ್ಯವಾದರೆ 1 ಲಕ್ಷ ರೂ.ಗಳ ಪರಿಹಾರ ಇರುತ್ತದೆ ವಯಸ್ಸಿನ ಅರ್ಹತೆ 18 ರಿಂದ 70 ವರ್ಷಗಳು ಇರುತ್ತದೆ, ಎಂದರು.

ಅದೇ ರೀತಿಯಾಗಿ ಪ್ರಧಾನಮಂತ್ರಿಜೀವನ್ ಜ್ಯೋತಿ ಭೀಮಾ ಯೋಜನೆ ಕೇವಲ ರೂ. 436 ರ ವಾರ್ಷಿಕ ಪ್ರೀಮಿಯಮ್‌ನಲ್ಲಿ ರೂ 2 ಲಕ್ಷದ ಜೀವ ವಿಮೆ ವಯಸ್ಸಿನ ಅರ್ಹತೆ 18 ರಿಂದ 50 ವರ್ಷಗಳು ಈ ಎರಡು ಯೋಜನೆಗಳಿಗೆಆಧಾರಕಾರ್ಡ್ ಬ್ಯಾಂಕ್ ಪಾಸ ಪುಸ್ತಕ್‌ದಲ್ಲಿ ಬ್ಯಾಂಕಿನವರ ಕಡೆಯಿಂದ ಲಾಗಿನ್ ಮಾಡಿಸಬೇಕು. ನೀವು ಅರ್ಜಿಯಲ್ಲಿ ನಾಮೀನಿ ಸೇರಿಸಿದರೆ, ಯಾವುದೇ ಅನಾಹುತ ಆದರೆ ಅವರಿಗೆ 2 ಲಕ್ಷ ರೂಪಾಯಿಗಳು ಸಿಗುತ್ತವೆ ಎಂದರು.

ಅಧಿಕಾರಿಗಳು ಕಡ್ಡಾಯ ದಾಖಲಾತಿ:ಎಲ್ಲಾ ಉದ್ಯೋಗಿಗಳು, ಪಿಎಂಜೆಜೆಬಿವೈ ಮತ್ತು ಪಿಎಂ.ಎಸ್‌ಬಿವೈ ಅಡಿಯಲ್ಲಿ ದಾಖಲಾಗಿದ್ದರೆ ಎಂದು ಖಚಿತಪಡಿಸಿಕೊಳ್ಳಿ, ಮೆಗಾ ಲಾಗಿನ್ ಡೇ ಶಿಬಿರಗಳು ಎಲ್ಲ ಜಿಲ್ಲಾ ಪಂಚಾಯತ್,ಶಾಖಾ ಮಟ್ಟಗಳು ಹಂತಗಳಲ್ಲಿ ಶಿಬಿರಗಳನ್ನು ನಡೆಸಲು ಸೂಚಿಸಿದರು.

ಪಾಲುದಾರರ ಒಳಗೊಳ್ಳುವಿಕೆ:ಮೆಗಾ ಲಾಗಿನ್ ಡೇ ಶಿಬಿರಗಳನ್ನು ನಡೆಸಲು ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯತ್ ಅಭಿವೃದ್ಧಿ, ಎನ್.ಜಿ.ಓ.ಗಳು ಸ್ವಸಹಾಯ ಗುಂಪುಗಳು ಮತ್ತು ಪಂಚಾಯತ್ ಸದಸ್ಯರನ್ನು ತೊಡಗಿಸಿಕೊಳ್ಳಿ ಎಂದರು.

ಈ ಎರಡು ದಿನಗಳಲ್ಲಿ ಹೆಚ್ಚಿನ ಪ್ರಚಾರ ಮಾಡಬೇಕು ಹಳ್ಳಿಗಳಲ್ಲಿ ಡಂಗೂರ ಸಾರಬೇಕು.,ಮೈಕ್ ತೆಗೆದುಕೊಂಡು ಹೇಳಬೇಕು ಹೆಚ್ಚಿನ ಜಾಗೃತಿ ಮೂಡಿಸುವ ಕೆಲಸವನ್ನುಆಗಬೇಕು ಎಂದರು ಈ ಯೋಜನೆಯ ಲಾಭವನ್ನು ಎಲ್ಲರೂ ಪಡೆಯಬೇಕೆಂದರು.

ಈಗಾಗಲೇ ಬಹಳಷ್ಟು ಜನರು ಇದರ ಲಾಭವನ್ನು ಪಡೆದುಕೊಂಡಿದ್ದಾರೆಆದ್ದರಿಂದ ತಾವು ತಪ್ಪದೇ ಬ್ಯಾಂಕ್‌ಗಳಿಗೆ ಹೋಗಿ ಕೇಂದ್ರ ಸರ್ಕಾರ ನೀಡಿರುವ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಹಾಗೂ ಪ್ರಧಾನಮಂತ್ರಿಜೀವನ ಜ್ಯೋತಿ ಭೀಮಾಯೋಜನೆ ಇದರಲಾಭವನ್ನುಪ್ರತಿಯೊಬ್ಬರು ಪಡೆಯಬೇಕು ಎಂದು ತಿಳಿಸಿದರು.

ಅನೇಕ ಸಂಘ– ಸಂಸ್ಥೆಗಳು,ಸಹಕಾರಸಂಘಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುತ್ತಾರೆ ಅಂಥವನ್ನುಹೆಚ್ಚಿನಸಂಖ್ಯೆಯಲ್ಲಿ ಅಧಿಕಾರಿಗಳು ನೋಂದಣಿ ಮಾಡಿಸಬೇಕು.

ತಾಲೂಕುಗಳಲ್ಲಿ ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್,ಲೀಡ್ ಬ್ಯಾಂಕ್ ಮಾನೇಜರ, ಜಿಲ್ಲೆಯ ಎಲ್ಲಾ ಬ್ಯಾಂಕ್ ವ್ಯವಸ್ಥಾಪಕರಿಗೆ ನಿರ್ದೇಶನ ನೀಡಿದರು.

ದಾಖಲಾತಿ ಗುರಿ: ಪಿ.ಎಂ.ಜೆ.ಜೆ.ಬಿ.ವೈ ಮತ್ತು ಪಿ.ಎಮ.ಎಸ್.ಬಿ.ವೈ ಗಾಗಿ ಪ್ರತಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಕ್ರಮವಾಗಿ 500 ದಾಖಲಾತಿಗಳ ಗುರಿಯನ್ನು ಸಾಧಿಸಿ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಬ್ಯಾಂಕರ್‌ಗಳು, ಸರ್ಕಾರಿ ಇಲಾಖೆಗಳು ಮತ್ತು ಸ್ಥಳೀಯ ಅಧಿಕಾರಿಗಳು ಸಾಮೂಕಿವಾಗಿ ಪ್ರಯತ್ನಗಳು ಆರ್ಥಿಕಸೇರ್ಪಡೆ ಮತ್ತು ಸಾಮಾಜಿಕ ಭದ್ರತಾ ಜಾಗೃತಿ ಮತ್ತು ದಾಖಲಾತಿ ಅಭಿಯಾನವನ್ನುಉತ್ತೇಜಿಸಲು ಒಟ್ಟಾಗಿ ಕೆಲಸ ಮಾಡುವುದರ ಮೇಲೆ ಅವಲಂಬಿತವಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ ಮಾತನಾಡಿ, ಗ್ರಾಮಪಂಚಾಯತ್ ಗ್ರಾಮ ಅಧ್ಯಕ್ಷತೆಯಲ್ಲಿ ಸಭೆನಡೆಸಿ ಹೆಚ್ಚಿನ ಪ್ರಚಾರ ನೀಡಬೇಕು ಮೈಕ್ ಮೂಲಕ, ಆಟೋಗಳ ಮೂಲಕ ಹೆಚ್ಚಿನ ಪ್ರಚಾರ ನೀಡಬೇಕು ಇದರಿಂದ ಸಾರ್ವನಿಕರಿಗೆ ಅನುಕೂಲವಾಗುತ್ತದೆ ಎಂದರು.

ಸಭೆಯಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ ಕುಮಾರ ಪಟೇಲ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನ್ವರ ದೌಲ, ಕೃಷಿ ಜಂಟಿ ನಿರ್ದೇಶಕ ಸಮ್ಮದ್ ಪಟೇಲ್, ಬ್ಯಾಂಕಿನ ವ್ಯವಸ್ಥಾಪಕರು, ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಜ್ಞಾನ ವಸ್ತು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಶಾಲೆಗಳಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸುವುದರಿಂದ ಮಕ್ಕಳಲ್ಲಿ ವೈಜ್ಞಾನಿಕ ಹಾಗೂ ಸಂಶೋಧನಾ ಮನೋಭಾವ ಬೆಳೆಯುತ್ತದೆ ಎಂದು ಅಕ್ಷರ ದಾಸೋಹ ಯೋಜನೆ ಸಹಾಯಕ ನಿರ್ದೇಶಕ ಧೂಳಪ್ಪ ಮಳೆನೋರ್ ಹೇಳಿದರು.

ತಾಲೂಕಿನ ಎಕಲಾರ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ನಿಮಿತ್ತ ಗುರುವಾರ, ಶುಕ್ರವಾರ ಆಯೋಜಿಸಿದ ಎರಡು ದಿನಗಳ ವಿಜ್ಞಾನ ವಸ್ತು ಪ್ರದರ್ಶನದ ಅಂಗವಾಗಿ ಭೇಟಿ ನೀಡಿ ಮಾತನಾಡಿದರು.

ಮಕ್ಕಳಲ್ಲಿ ಇಂತಹ ಚಟುವಟಿಕೆಗಳಿಂದ ವಿಜ್ಞಾನ ಜ್ಞಾನದ ವಿಸ್ತಾರ ಹೆಚ್ಚುತ್ತ ಹೋದಂತೆ ವೈಜ್ಞಾನಿಕ ತಳಹದಿಯ ಮೇಲೆ ಮಕ್ಕಳು ಬದುಕು ಕಟ್ಟಿಕೊಳ್ಳಲು ಪ್ರಯತ್ನಿಸುತ್ತಾರೆ. ನಿತ್ಯದ ಬದುಕಿಗೂ ಅನ್ವಯಿಸಿಕೊಂಡು ಬಾಳುತ್ತಾರೆ ಎಂದರು.

ಅಜೀಂಪ್ರೇಮ್‌ಜೀ ಫೌಂಡೇಶನ್ ತಾಲೂಕು ಸಂಯೋಜಕ ಶಿವಾಜಿ ಬಿರಾದಾರ ಮಾತನಾಡಿ, ಜ್ಞಾನದ ಪ್ರಾಯೋಗಿಕ ಬಳಕೆ, ಸೃಜನಶೀಲತೆ ಮತ್ತು ನಾವಿನ್ಯತೆಗೆ ಪ್ರೋತ್ಸಾಹ, ಆತ್ಮವಿಶ್ವಾಸ ಮತ್ತು ಸಂವಹನ ಕೌಶಲ್ಯ ವೃದ್ಧಿ, ಸಮುದಾಯದ ತೊಡಗಿಸಿಕೊಳ್ಳುವಿಕೆ ಇದೆಲ್ಲವೂ ವಿಜ್ಞಾನ ವಸ್ತು ಪ್ರದರ್ಶನದ ಮೂಲಕ ನಡೆಯುತ್ತದೆ. ಎಂದರು.

ಎಕಲಾರ ಸಿಆರ್‌ಪಿ ಮಹಾದೇವ ಘುಳೆ ಮಾತನಾಡಿ, ಎಕಲಾರ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಆಯೋಜಿಸಿ ಮಕ್ಕಳಲ್ಲಿ ವೈಚಾರಿಕತೆ, ಆತ್ಮವಿಶ್ವಾಸ ಅಭಿವೃದ್ಧಿಗೆ ಪ್ರೋತ್ಸಾಹಿಸುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದ್ದು, ಇದರಿಂದ ಸರ್ಕಾರಿ ಶಾಲೆಗಳ ಕುರಿತು ಜನಸಾಮಾನ್ಯರಲ್ಲಿ ಸದ್ಭಾವನೆ ಮೂಡುತ್ತದೆ ಎಂದರು.

ವಿಜ್ಞಾನ ಶಿಕ್ಷಕ ಗಂಗಾಧರ ಬೇಂದ್ರೆ, ಅಂಕುಶ ಪಾಟೀಲ್, ಸಬೀತಾ ಹಾಗೂ ರೂಪಾ ಅವರ ಮಾರ್ಗದರ್ಶನದಲ್ಲಿ ಸುಮಾರು 64 ಮಕ್ಕಳು 32 ಪ್ರದರ್ಶನ ಕೈಗೊಂಡಿದ್ದು, 1 ರಿಂದ 7ನೇ ತರಗತಿಯ ಎಲ್ಲ ಮಕ್ಕಳು ಭಾಗವಹಿಸಿದ್ದು ವಿಶೇಷ ಎನ್ನುತಾರೆ ಶಿಕ್ಷಕ ಬಾಲಾಜಿ ಅಮರವಾಡಿ. ಹನಿ ನೀರಾವರಿ ಪದ್ಧತಿ, ಎಟಿಎಮ್ ಯಂತ್ರ, ಜಲಚಕ್ರ, ಮಳೆ ನೀರಿನ ಕೊಯ್ಲು, ಭೂಮಿ ರಚನೆ, ಜೀವಸತ್ವಗಳ ಪರಿಚಯ, ಸೌರವ್ಯೂಹದ ಮಾದರಿ, ಗ್ರಹಣಗಳು, ಉಸಿರಾಟ ಪ್ರಕ್ರಿಯೆ, ಟ್ರಾಫಿಕ್ ಸಿಗ್ನಲ್‌ಗಳು, ಪೇರಿಸ್ಕೋಪ್, ನೀರಿನ ಶುದ್ಧೀಕರಣ, ಸಸ್ಯ ಜೀವಕೋಶ, ಬೆಳಕಿನ ವಕ್ರಿಭವನ, ಜ್ವಾಲಾಮುಖಿಗಳು, ಪರಿಸರ ಕಾಳಜಿ, ಆಮ್ಲ ಪ್ರತ್ಯಾಮ್ಲಗಳು ಸೇರಿದಂತೆ 32 ಪ್ರದರ್ಶನಗಳು ಮಾಡಿದರು. ಇದರಲ್ಲಿ ತಲಾ ಒಂದು ಪ್ರದರ್ಶನದಂತೆ ಬೋರಾಳ ಹಾಗೂ ಬರದಾಪೂರ್ ಶಾಲೆಯ ಮಕ್ಕಳು ಭಾಗವಹಿಸಿದ್ದರು.

ಶಾಲೆಯ ಮುಖ್ಯ ಶಿಕ್ಷಕ ಪ್ರಭು ಬಾಳೂರೆ, ಶರಣಪ್ಪ ಜಟಗೊಂಡ್, ಗಜಾನನ ಮಳ್ಳಾ, ಬಾಲಾಜಿ ಅಮರವಾಡಿ, ದಿಗಂಬರ ಶಾಂತಪೂರೆ, ಕಲ್ಲಪ್ಪ, ವೀರಶೆಟ್ಟಿ ಗಾದಗೆ, ಅಂಕುಶ ಪಾಟೀಲ್, ಗಂಗಾಧರ ಬೇಂದ್ರೆ, ಸಬೀತಾ, ರೂಪಾ ಸೇರಿದಂತೆ ಇನ್ನಿತರರಿದ್ದರು.

ಬಾಲ್ಯ ವಿವಾಹದ ಮೂಲಕ ಅಪ್ರಾಪ್ತ ಹೆಣ್ಣು ಮಕ್ಕಳ ಆತ್ಮಸ್ಥೈರ್ಯ ಕುಗ್ಗಿಸಬೇಡಿ

## ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶ ಬಿ.ಎಸ್.ರೇಖಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ:11–:ಅಪ್ರಾಪ್ತ ಬಾಲಕಿಯರ ಬಾಲ್ಯ ವಿವಾಹ ಮಾಡುವ ಮೂಲಕ ಅವರ ಮಾನಸಿಕ,ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸ ಸಮಾಜದಲ್ಲಿ ಆಗಬಾರದು ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ ಅವರು ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಸಭಾಂಗಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಏರ್ಪಡಿಸಲಾಗಿದ್ದ"ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರ ಮೇಲೆ ಅನೇಕ ರೀತಿಯಲ್ಲಿ ಶೋಷಣೆ ನಡೆಯುತ್ತಿವೆ. ಜನ್ಮ ಸಮಯದಲ್ಲಿ ಹೆಣ್ಣು ಮಗು ಬೇಡವೆಂಬ ತಾರತಮ್ಯ ಹುಟ್ಟಿದ ನಂತರ ಶಿಕ್ಷಣ ನೀಡಲು ನಿರಾಕರಣೆ, ವಿವಾಹಕ್ಕೆ ಖರ್ಚು ಮಾಡಿದ ಮೇಲೆ ಆಸ್ತಿ ಪಾಲು ನೀಡಲು ನಿರಾಕರಣೆ, ಕೆಲಸದ ಸಂದರ್ಭದಲ್ಲಿ ಶೋಷಣೆ ಹೀಗೆ ಹಲವು ರೀತಿಯಲ್ಲಿ ಶೋಷಣೆಗಳ ಜೊತೆಗೆ ಬಾಲ್ಯವಿವಾಹದಂತಹ ಸಾಮಾಜಿಕ ಪಿಡುಗು ಮೂಲಕ ಆತ್ಮಸ್ಥೈರ್ಯ ಕುಗ್ಗಿಸುವ ಕೆಲಸಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಸಮಾಜದಲ್ಲಿ ಇದು ನಿಲ್ಲಬೇಕು ಎಂದು ಹೇಳಿದರು.

ಇಂದಿನ ದಿನಗಳಲ್ಲಿ ಪೋಕ್ಸೊ ಪ್ರಕರಣಗಳು ಹೆಚ್ಚಾಗುತ್ತಿವೆ.ಈ ಹಿನ್ನೆಲೆಯಲ್ಲಿ ಕರ್ತವ್ಯದಲ್ಲಿರುವ ಮಹಿಳೆಯರು ತಮ್ಮ ಮಕ್ಕಳ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕು. ಮೋಬೈಲ್ ಗೀಳು ಮಕ್ಕಳ ದಾರಿತಪ್ಪಿಸುತ್ತಿದೆ. ಮದ್ಯವ್ಯಸನ ಮಾಡದಂತೆ ನಿಗಾವಹಿಸಬೇಕು. ಅದರಂತೆ ಹೆಣ್ಣು ಮಕ್ಕಳ ಬೆಳವಣಿಗೆ ಸಂದರ್ಭದಲ್ಲಿ ದೈಹಿಕ ಬದಲಾವಣೆ ಗಮನಿಸಬೇಕು, ಮಕ್ಕಳ ಸಮಸ್ಯೆಗಳ , ಭವಿಷ್ಯದ ಬಗ್ಗೆ ಕಾಳಜಿ ವಹಿಸುವಂತೆ ಅವರು ಸಲಹೆ ನೀಡಿದರು.

ಮಹಿಳೆಯರನ್ನು ಶಕ್ತಿಸ್ವರೂಪಿಯಾಗಿ ನೋಡುವ ಬದಲು ಹೆಣ್ಣುಗಂಡು ಸಮಾನದೃಷ್ಟಿಯಿಂದ ನೋಡುವುದು ಮುಖ್ಯ.ತಾಯಿಯಾಗಿ,ಪತ್ನಿಯಾಗಿ, ಸಹೋದರಿಯಾಗಿ,ಮಗಳಾಗಿ ಕುಟುಂಬ ನಡೆಸುವ ಮಹಿಳೆಯರೇ ಎಲ್ಲವನ್ನೂ ಸಹಿಸಿ ಮುನ್ನುಗ್ಗುವ ಸಾಮರ್ಥ್ಯ ಹೊಂದಿದ್ದಾರೆ. ಮಹಿಳೆಯರು ಹಾಗೂ ಪುರುಷರು ಕೂಡಿ ಕುಟುಂಬದ ರಥ ಎಳೆಯಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ನಗರಸಭೆ ಅಧ್ಯಕ್ಷ ಕು.ಲಲಿತಾ ಅನಪುರ ಅವರು ಮಹಿಳೆಯರಿಗೆ ಸಮಾಜದಲ್ಲಿ,ಸಮಾನತೆಗೌರವಾದರದಿಂದ ನೋಡಬೇಕೆಂದರು.

ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಮರೆಯಪ್ಪ ಅವರು ವಿಶ್ವಸಂಸ್ಥೆಯು 1975 ರಲ್ಲಿ ಸಾರ್ವತ್ರಿಕವಾಗಿ,ಈ ದಿನಾಚರಣೆ ಘೋಷಿಸಿ ಮಾರ್ಚ್ 8 ರಂದು ಮಹಿಳೆಯರ ವಿಶ್ವದಿನಾಚರಣೆ–ಯಾಗಿ ಆಚರಣೆಗೆ ಅವಕಾಶ ಮಾಡಿದೆ. ಗಂಡು ಹೆಣ್ಣು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಮಹಿಳೆಯರು ಇಂದು ಪ್ರತಿ ಕ್ಷೇತ್ರದಲ್ಲೂ ಸಾಧನೆ ಮಾಡುತ್ತಿದ್ದು, ಯಾದಗಿರಿ ಜಿಲ್ಲೆಯಲ್ಲಿಯೂ ಮಹಿಳಾ ಅಧಿಕಾರಿಗಳು ಸಾಧನೆಗೈಯ್ಯುತ್ತಿದ್ದಾರೆ ಎಂದರು.

ಅದರಂತೆ ಸಮಾಜದಿಂದ ಲಿಂಗ ಅಸಮಾನತೆ, ಲಿಂಗಾನುಪಾತದಲ್ಲಿ ವ್ಯತ್ಯಾಸ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ನಿಯಂತ್ರಣಗೊಳ್ಳಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಮಹಿಳೆ ಮತ್ತು ಪುರುಷರು ಎಂಬ ಭೇದಭಾವ ತೊಲಗಬೇಕು. ಮಹಿಳೆಯರಿಗೆ ಶಿಕ್ಷಣ, ಉದ್ಯೋಗ ಹಾಗೂ ಎಲ್ಲಾ ಕ್ಷೇತ್ರಗಳಲ್ಲೂ ಸಮಾನ ಅವಕಾಶ ಸಿಗಬೇಕು. ಹೆಣ್ಣು ಮಕ್ಕಳು ಪರಿಪೂರ್ಣ ವಿದ್ಯಾವಂತರಾಗುವವರೆಗೆ ಸಾಧನೆ ಮಾಡಲು ಅಸಾಧ್ಯ. ಕಾರಣ ಹೆಣ್ಣು ಮಗುವಿಗೆ ಕಡ್ಡಾಯವಾಗಿ ಶಿಕ್ಷಣದ ಹಕ್ಕು ದೊರಕಿಸಬೇಕು.ಸಮಾಜದಲ್ಲಿ ಪ್ರತಿ ಹೆಣ್ಣು ಮಗುವಿಗೆ ಗೌರವ ದೊರಕಿಸಬೇಕು. ಮಹಿಳಾ ಹಕ್ಕುಗಳ ರಕ್ಷಣೆ,ಈ ಕುರಿತು ಇರುವ ಕಾಯ್ದೆ, ಮಹಿಳಾ ರಕ್ಷಣೆ, ಮಹಿಳಾ ದೌರ್ಜನ್ಯ ತಡೆ ಕಾಯ್ದೆ, ಪೋಕ್ಸೋ ಕಾಯ್ದೆ ಕುರಿತು ಅರಿವು ಗೆ ಮಹಿಳಾ ದಿನಾಚರಣೆ ಹಾಗೂ

ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದುಹೇಳಿದರು. ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾಧಿಕಾರಿಗಳು, ನಗರಸಭೆ ಅಧ್ಯಕ್ಷರನ್ನು, ಮಹಿಳಾ ಅಧಿಕಾರಿಗಳನ್ನು, ಸಾಧನೆಗೈದ ಮಹಿಳಾ ಕ್ರೀಡಾಪಟುಗಳು, ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಾಧನೆಗೈದ ವರನ್ನು ಸನ್ಮಾನಿಸಲಾಯಿತು.ಕುಮಾರಿ ಯಾದಗಿರಿ, ಶ್ರೀಮತಿ ಯಾದಗಿರಿ ಸ್ಪರ್ಧೆಗಳನ್ನುನಡೆಸಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ವೀರ–ಣಗೌಡ ಅವರು ಸ್ವಾಗತಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ್, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಅಧಿಕಾರಿಗಳಾದ ರಾಜು ಬಾವಿ ಹಳ್ಳಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಜಮಾಅತೆ ಇಸ್ಲಾಮಿ ಹಿಂದ್ ಲಿಂಗಸೂಗೂರು

## ಇಪ್ತಿಯಾರ ಕೂಟ



ಜಮಾಅತೆ ಇಸ್ಲಾಮಿ ಹಿಂದ್ ಲಿಂಗಸೂಗೂರು

ಇಪ್ತಿಯಾರ ಕೂಟವನ್ನು ಜಾಮಿಯಾ ಮಸೀದಿಯಲ್ಲಿ

ಖುರಾನ ಪಟಿಸುವ ಮೂಲಕ ಚಾಲನೆ ನೀಡಿದರು.

ಮುಖ್ಯ ಅತಿಥಿ ಯಾದ. ಡಾ ಶಶಿಕಾಂತ ಕಡ್ಲಾರು ಮಾತನಾಡಿದ.ಅವರು.ಪ್ರತಿಯೊಬ್ಬ ಮುಸಲ್ಮಾನನಿಗೆ ವರ್ಷದಲ್ಲಿ ಒಂದು ಬಾರಿ ಬರುವ ಅತ್ಯಂತ ದೊಡ್ಡ ಹಬ್ಬ ಕೇವಲ ಭಾರತದಲ್ಲಿ ಮಾತ್ರವಲ್ಲದೆ ಇಡೀ ವಿಶ್ವದಾದ್ಯಂತ ಇರುವ ಎಲ್ಲಾ ಮುಸ್ಲಿಮರು ಒಂದು ತಿಂಗಳ ಕಾಲ ಕಟ್ಟುನಿಟ್ಟಾಗಿ ಉಪವಾಸವಿದ್ದು ಅತ್ಯಂತ ಭಯ ಭಕ್ತಿಯಿಂದ ರಂಜಾನ್ ಆಚರಿಸುತ್ತಾರೆ. ಎಂದು ಹೇಳಿದರು ಮುಖ್ಯ ಅತಿಥಿ ಯಾಗಿ ಲಾಲ ಹುಸೇನ್ ಅರಬ್ಬೀ ಶಿಕ್ಷಕರು ರಂಜಾನ್ ಹಬ್ಬದ ಉಪವಾಸ ಕುರಿತು ಮಾತನಾಡಿದ ರಂಜಾನ್ ತಿಂಗಳ ಕಟ್ಟುನಿಟ್ಟಾದ ಉಪವಾಸ ಮತ್ತು ಆಚರಣೆಯ ಸಮಾಪ್ತಿಯ ಇಂದಿನ ದಿನ ಮುಸಲ್ಮಾನರ ದೊಡ್ಡ ಹಬ್ಬವಾದ ರಂಜಾನ್ ಆಚರಣೆಗೊಳ್ಳುತ್ತಿದೆ. ಬಹಳಷ್ಟು ಸಂಪ್ರದಾಯಬದ್ಧವಾಗಿ ಆಚರಣೆ ಮಾಡುವ ರಂಜಾನ್ ಹಬ್ಬ ಇತರ ಎಲ್ಲಾ ಧರ್ಮದವರಿಗೂ ಮಾದರಿ ಎನಿಸುತ್ತದೆ. ನಮ್ಮೆಲ್ಲಾ ಹಿಂದೂ ಬಂದವರ ಜೊತೆ ಉಪವಾಸವನ್ನು ಬಿಡುವ ಮೂಲಕ ಜಗತ್ತಿನಲ್ಲಿ ಶಾಂತಿ ಸೌಹಾರ್ದತೆ ಸಹಬಾಳ್ವೆ ಸೋದರತೆ ಮುಖ್ಯವಾಗಿ ಮನುಷ್ಯನಲ್ಲಿ ಮಾನವಿಯತೆ ಸಂಕೇತವಾಗಿದೆ. ಎಂದು ಹೇಳಿದರು ಈ ಸಂದರ್ಭದಲ್ಲಿ ಶರಣಗೌಡ ಅಗಸಿಮನಿ ಷಡಕ್ಷರಿ ಅದಿಮನಿ ಗೌಸ ಜಮಾಅತೆ ಇಸ್ಲಾಮಿ ಇಸ್ಲಾಮಿ ಹಿಂದ್. ಲಿಂಗಸೂಗೂರು ಹಾಗೂ ಮಸೀದಿಯ ಇಪ್ತಿಯಾರ ಕೊಟದ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

## ವಾರಸುದಾರರ ಪತ್ತೆಗೆ ರೈಲ್ವೇ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.11– ಕರ್ನಾಟಕ ಇಲ್ಲಿನ ರೈಲ್ವೇ ಪೊಲೀಸ ಠಾಣೆ–ಯ ಲಿಂಗೇರಿ ಮತ್ತು ಯಾದಗಿರಿ ರೈಲ್ವೇ ನಿಲ್ದಾಣಗಳ ಮದ್ಯೆ ರೈಲ್ವೆ ಕೀ.ಮೀ ನಂ; 622/11–13 ಲೂಪ್‌ಲೈನ್‌ನಲ್ಲಿ ಸುಮಾರು 30ವರ್ಷದ ಒಬ್ಬರು ಅಪರಿಚಿತ ಗಂಡಸು ಯಾವುದೋ ಚಲಿಸುವ ರೈಲುಗಾಡಿಯಿಂದ ಆಯಾತಪ್ಪಿ ಕೆಳಗೆ ಬಿದ್ದು ಆಕಸ್ಮಿಕವಾಗಿ ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೆ ಪೊಲೀಸ್ ಠಾಣೆಯ ಯುಡಿಆರ್ ನಂ.14/2025 ಕಲಂ;194 ಬಿ.ಎನ್. ಎಸ್.ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ವಾರಸುದಾರರ ಪತ್ತೆಗೆ ಮನವಿ ಮಾಡಲಾಗಿದೆ. ಮೃತನ ಚಹರೆ ಪಟ್ಟಿಯ ವಿವರ; ವಯಸ್ಸು ಸುಮಾರು 30 ವರ್ಷ, ಎತ್ತರ ಸುಮಾರು 5.7 ಅಡಿ, ಕಪ್ಪು ಮೈಬಣ್ಣ ಸಾಧಾರಣ ಮೈಕಟ್ಟು, ತಲೆ ಬುರುಡೆ ಒಡೆದುಹೋಗಿ ಮುಖ ಚಹರೆಯು ಜಜ್ಜಿಹೋಗಿರುತ್ತದೆ. ಒಂದು ನೇರಳೆ ಬಣ್ಣದ ಜಾಕೆಟ್, ಒಂದು ಗುಲಾಬಿ ಬಣ್ಣದ ಶರ್ಟ, ಒಂದು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್, ಒಂದು ಕಂದು ಬಣ್ಣದ ಅಂಡರ್ ವೇರ್ ಧರಿಸಲಾಗಿದ್ದು, ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಸದರಿ ಮೃತನ ಹೋಲಿಕೆಯ ಗಂಡಸು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂ.ನಂ: 08532–231716 ಅಥವಾ 9480802111, ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ಲಾಕೋಮಾವನ್ನು ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆಯನ್ನು ನೇತ್ರಶಾಸ್ತ್ರಜ್ಞರಿಂದ

## ಪಡೆದುಕೊಂಡು ಕಣ್ಣುಗಳನ್ನು ರಕ್ಷಿಸಿಕೊಳ್ಳಲು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 11– ಪರಿಣಾಮವಾಗಿ,ನೀವು ದೀರ್ಘಕಾಲದ ದೃಷ್ಟಿನಷ್ಟವನ್ನು ಅನುಭವಿಸುವ ಮೊದಲು ಗ್ಲಾಕೋಮಾವನ್ನು ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆಯನ್ನು ನೇತ್ರಶಾಸ್ತ್ರಜ್ಞರಿಂದ ಪಡೆದುಕೊಂಡು ಕಣ್ಣುಗಳನ್ನು ರಕ್ಷಿಸಿಕೊಳ್ಳಬೇಕು, ಯಾದಗಿರಿ ಜಿಲ್ಲೆಯನ್ನು ಗ್ಲಾಕೋಮಾ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಸಲಹೆ ನೀಡಿದರು. ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಸಂಯೋಗದಲ್ಲಿ ವಿಶ್ವ ಗ್ಲಾಕೋಮಾ ಸಪ್ತಾಹ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ, ಜಾಗೃತಿ ಕರಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಯಾದಗಿರಿ ಜಿಲ್ಲೆಯಾದ್ಯಂತ ವಿಶ್ವ ಗ್ಲಾಕೋಮಾ ಸಪ್ತಾಹ ಕಾರ್ಯಕ್ರಮವನ್ನು 2025ರ ಮಾರ್ಚ್ 9 ರಿಂದ 2025ರ ಮಾರ್ಚ್ 15ರ ವರೆಗೆ ಹಮ್ಮಿಕೊಳ್ಳಲಾಗಿದ್ದು, ಈ ವರ್ಷದ ಘೋಷವಾಕ್ಯ ಗ್ಲಾಕೋಮಾ ಮುಕ್ತ ಪ್ರಪಂಚಕ್ಕಾಗಿ ಒಗ್ಗೂಡುಸುವಿಕೆ ಆಗಿರುತ್ತದೆ. ಗ್ಲಾಕೋಮಾ ಕಣ್ಣಿನ ಆಪ್ಟಿಕ್ ನರಕ್ಕೆ ತೀವ್ರ ಹಾನಿಯನ್ನುಂಟುಮಾಡುತ್ತದೆ, ಇದು ಕಾಲಾನಂತರದಲ್ಲಿ ಹದಗೆಡಬಹುದು. ಇದು ಆಗಾಗ್ಗೆ ಇಂಟ್ರಾಕ್ಯುಲರ್ ಒತ್ತಡದ ಹೆಚ್ಚಳದೊಂದಿಗೆ ಸಂಬಂಧಿಸಿದೆ ಗ್ಲಾಕೋಮಾ ಆನುವಂಶಿಕವಾಗಿದ್ದರೂ, ಗ್ಲಾಕೋಮಾ ಇರುವ ಹೆಚ್ಚಿನ ಜನರು ಯಾವುದೇ ಆರಂಭಿಕ ಲಕ್ಷಣಗಳು ಅಥವಾ ನೋವನ್ನು ಅನುಭವಿಸುವುದಿಲ್ಲ ಎಂದು ಹೇಳಿದರು. ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಅವರು ಮಾತನಾಡಿ, ಗ್ಲಾಕೋಮಾ ಕಾಯಿಲೆ ಯಾವುದೇ ರೋಗ ಲಕ್ಷಣಗಳಿಲ್ಲದ ದೃಷ್ಟಿ ಕದಿಯುವ ಕಾಯಿಲೆ ಆಗಿದೆ, 40 ವಯಸ್ಸಿನ ನಂತರ ಪ್ರತಿಯೊಬ್ಬರು ವರ್ಷಕ್ಕೊಮ್ಮೆ ಕಣ್ಣಿನ ಒತ್ತಡ ಪರೀಕ್ಷಿಸಿಕೊಳ್ಳಬೇಕು, ಮಧುಮೇಹ, ರಕ್ತದೊತ್ತಡ ಹಾಗೂ ದೃಷ್ಟಿದೋಷವಿರುವವರಲ್ಲಿ ಗ್ಲಾಕೋಮಾ ಆಗುವ ಸಂಭವ ಹೆಚ್ಚಾಗಿರುತ್ತದೆ. ಪದೇ ಪದೇ ಕನ್ನಡಕದ ಸಂಖ್ಯೆ ಬದಲಾಯಿಸಬೇಕಾದಲ್ಲಿ ಕಡ್ಡಾಯವಾಗಿ ಕಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು. ಗ್ಲಾಕೋಮಾದಲ್ಲಿ ನೇರ ದೃಷ್ಠಿಯು ಸರಿಯಾಗಿದ್ದರು ದೃಷ್ಠಿವಲಯವು ಕುಗ್ಗುತ್ತಾ ಬರುತ್ತದೆ. ಮನೆಯಲ್ಲಿ ಯಾರಾದರೂ ಗ್ಲಾಕೋಮಾ ದಿಂದ ಬಳಲುತ್ತಿದ್ದರೆ, ಆ ಮನೆಯ ಇತರೆ ಸದಸ್ಯರು ಕಡ್ಡಾಯವಾಗಿ ಕಣ್ಣಿನ ಒತ್ತಡ ಪರಿಕ್ಷೆ ಮಾಡಿಸಿಕೊಂಡು ಕಣ್ಣನ್ನು ರಕ್ಷಿಸಿಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಅಧಿಕಾರಿಗಳಾದ ಡಾ.ಪದ್ಮಾನಂದ ಗಾಯಕ್ವಾಡ ಅವರು ಮಾತನಾಡಿ, ಸಾರ್ವಜನಿಕರು ಗ್ಲಾಕೋಮಾ ಕಾಯಿಲೆ ಬಗ್ಗೆ ತಿಳಿದುಕೊಂಡು ಇತರರಿಗೂ ತಿಳಿಸಬೇಕು, ವೈದ್ಯರು ನೀಡಿದ ಸಲಹೆಗಳನ್ನು ತಪ್ಪದೇ ಪಾಲಿಸುವುದು, ಸೂಕ್ತ ಚಿಕಿತ್ಸೆ ಪಡೆಯದಿದ್ದಲ್ಲಿ ಶಾಶ್ವತ ಅಂಧತ್ವ ಉಂಟಾಗುತ್ತದೆ. ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವುದು ಅತ್ಯಗತ್ಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಅಥವಾ ಉಚಿತ ಆರೋಗ್ಯ ಸಹಾವಾಣಿ 104ಕ್ಕೆ ಕರೆ ಮಾಡಿ, ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ಎಂ.ಎಸ್ ಪಾಟೀಲ್, ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿಗಳಾದ ಡಾ.ಸಂಜೀವ ಕುಮಾರ ರಾಯಚೂರಕರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ಮಲ್ಲಪ್ಪ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ.ಸಾಜೀದ, ಜಿಲ್ಲಾ ಕುಟುಂಬ ಕಲ್ಯಾಣ ಆದಿಕಾರಿಗಳಾದ ಡಾ.ಜ್ಯೋತಿ ಕಟ್ಟಿಮನಿ, ಶ್ರೀ ಮನೋಹರ ಪಾಟೀಲ್, ಶ್ರೀಮತಿ ಸಹನಾ ದೇಶಪಾಂಡೆ, ಶ್ರೀಮತಿ ರತ್ನಮ್ಮ, ಶ್ರೀಮತಿ ಸವಿತಾ, ಶ್ರೀ ಶಾಂತಿಲಾಲ್, ಶ್ರೀ ಶರಣಯ್ಯ ಸ್ವಾಮಿ ಹಾಗೂ ವೈದ್ಯಾಧಿಕಾರಿಗಳು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ನಿರೂಪಣೆ ಹಾಗೂ ಸ್ವಾಗತವನ್ನು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಗಳಾದ (ಪ್ರಭಾರಿ) ಶ್ರೀ ತುಳಸಿರಾಮ ಚವ್ಹಾಣ ನೆರವೇರಿಸಿದರು. ಶ್ರೀ ಮಾಳಪ್ಪ ಯಾದವ್ ವಂದನಾರ್ಪಣೆಯನ್ನು ನೆರವೇರಿಸಿದರು.

## ನವಜಾತ ಶಿಶುವಿನ ಸದೃಢ ಆರೋಗ್ಯಕ್ಕಾಗಿ ತಪ್ಪದೇ ಲಸಿಕೆ ಹಾಕಿಸಿ: ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಬಾಲ್ಯದಲ್ಲಿ ಮಕ್ಕಳ ಬೆಳವಣಿಗೆಗೆ ಅಡ್ಡಿಯಾಗುವ 12 ಮಾರಕ ರೋಗಗಳನ್ನು ತಡೆಯಲು ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಲಸಿಕೆ ಹಾಕಲಾಗುತ್ತಿದ್ದು, ವಯಸ್ಸಿಗನುಸಾರವಾಗಿ ತಪ್ಪದೆ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.

ಸರ್ಕಾರಿ ಆಸ್ಪತ್ರೆಯಲ್ಲಿ ಹೆರಿಗೆಯಾದ ತಕ್ಷಣ ನವಜಾತ ಶಿಶುವಿಗೆ ಪೋಲಿಯೋ ರೋಗ ತಡೆಗೆ ಎರಡು ಪೋಲಿಯೊ ಹನಿ, ಬಾಲ ಕ್ಷಯ ತಡೆಯಲು ಬಿಸಿಜಿ ಚುಚ್ಚುಮದ್ದು, ಕಾಮಾಲೆ ತಡೆಯಲು ಹೆಪಟೈಟಿಸ್ ಬಿ ಹಾಗೂ ಆಂತರಿಕ ರಕ್ತಸ್ರಾವ ತಡೆಯಲು ವಿಟಮಿನ್-ಕೆ ಗಳನ್ನು ಉಚಿತವಾಗಿ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಅವರು ಇಂದು ಕುರುಗೋಡು ತಾಲೂಕಿನ ಕೋಳೂರು ಗ್ರಾಮದಲ್ಲಿ ನವಜಾತ ಶಿಶುಗಳ, ಗರ್ಭಿಣಿ, ಬಾಣಂತಿಯರ ಮನೆ ಭೇಟಿ ಮಾಡಿ ಆರೋಗ್ಯ ವಿಚಾರಿಸಿ ಅವರು ಮಾತನಾಡಿದರು.

ಲಸಿಕೆ ಹಾಕಿಸದಿದ್ದಲ್ಲಿ ಶಿಶುಗಳಿಗೆ ಬಾಲ್ಯಾವಧಿಯಲ್ಲಿ ಬರುವ ಮಾರಕ ರೋಗಗಳು ಕಂಡುಬರುತ್ತವೆ. ಅವು ಗಂಭೀರ ಸ್ವರೂಪಕ್ಕೆ ತಿರುಗಿ ತೀವ್ರ ರೀತಿಯ ಆರೋಗ್ಯದ ಸಮಸ್ಯೆ ಉಂಟಾಗಬಹುದಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಮುಖ್ಯವಾಗಿ ಮಗುವಿನ ಒಂದು ವರ್ಷ ವಯಸ್ಸಿನೊಳಗೆ 12 ಮಾರಕ ರೋಗಗಳ ವಿರುದ್ಧದ ಲಸಿಕೆಗಳನ್ನು ವಯಸ್ಸಿಗನುಸಾರವಾಗಿ ಹಾಕಿಸಬೇಕು ಎಂದರು.

ಪೋಲಿಯೋ ರೋಗ-ಕ್ಕೆ ಪೋಲಿಯೋ ದ್ರಾವಣ, ಬಾಲಕ್ಷಯಕ್ಕೆ ಬಿಸಿಜಿ ಲಸಿಕೆ, ಕಾಮಾಲೆ ರೋಗಕ್ಕೆ ಹೆಪಟೈಟಿಸ್ ಚುಚ್ಚುಮದ್ದು, ಗಂಟಲು ಮಾರಿ, ನಾಯಿಕೆಮ್ಮು ಧನುರ್ವಾಯು ರೋಗ ತಡೆಗೆ ಲಸಿಕೆಗಳು, ಅತಿಸಾರ ಭೇದಿ ತಡೆಗೆ ರೋಟಾ ವೈರಸ್, ಶ್ವಾಸಕೋಶದ ಸೋಂಕು (ನ್ಯೂಮೋನಿಯಾ) ತಡಗೆ ಹೆಚ್ ಇನ್‌ಫ್ಲ್ಯುಯೆಂಜಾ, ಕಾಮಾಲೆ ತಡೆಗಾಗಿ ಹೆಪಟೈಟಿಸ್-ಬಿ ಒಳಗೊಂಡ ಪೆಂಟಾವೈಲೆಂಟ್ ಲಸಿಕೆ ಹಾಗೂ ರಕ್ತದ ಸೋಂಕು ತಡೆಗೆ ನಿಮೋಕಾಕಲ್ ಲಸಿಕೆ, ಮೆದುಳು ಜ್ವರ ರೋಗ ತಡೆಗೆ ಜಾಪನೀಸ್ ಎನ್ಸೆಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಸಂಜೆಯ ಹೊತ್ತು ಕಂಡುಬರುವ ಇರುಳುಗಣ್ಣುರೋಗ-ಕ್ಕೆ ವಿಟಾಮಿನ್-ಎ ಅನ್ನಾಂಗ ದ್ರಾವಣ ನೀಡಲಾಗುತ್ತದೆ. ಇವೆಲ್ಲವುಗಳನ್ನು ಮಗುವಿನ ಒಂದು ವರ್ಷದೊಳಗೆ ಹಾಕಲಾಗುವುದು.

ಇವುಗಳನ್ನು ತಪ್ಪದೇ ಪ್ರತಿ ಅರೋಗ್ಯ ಕೇಂದ್ರಗಳಲ್ಲಿ ಹಾಗೂ ಗ್ರಾಮ ವಾರ್ಡ್‌ಗಳಲ್ಲಿ ಪ್ರತಿ ಗುರುವಾರ ಹಾಕಿಸಬೇಕು ಎಂದು ಅವರು ಕೋರಿದರು.

ಕೆಲವು ರೋಗಗಳಿಗೆ ಪೋಲಿಯೋ, ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ದಡಾರ-ರೂಬೆಲ್ಲಾ ಮೆದುಳು ಜ್ವರಕ್ಕೆ ಮಗುವಿನ 16 ರಿಂದ 23 ತಿಂಗಳು ವಯಸ್ಸಿನ ಒಳಗೆ ಹೆಚ್ಚುವರಿಯಾಗಿ ಬೂಸ್ಟರ್ ಡೋಸ್ ರೂಪದಲ್ಲಿ ನೀಡಲಾಗುವುದು. 5 ರಿಂದ 6 ವರ್ಷದಲ್ಲಿ ಪುನಃ ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ರೋಗಿಗಳಿಗೆ ಎರಡನೇಯ ಬಾರಿ ಬೂಸ್ಟರ್ ಡೋಸ್ ನೀಡಲಾಗುವುದು. ಈ ಹಿನ್ನಲೆಯಲ್ಲಿ ಯಾವುದೇ ಗಾಳಿಸುದ್ದಿಗಳನ್ನು ನಂಬದೆ ಎಲ್ಲಾ ಲಸಿಕೆಗಳನ್ನು ಹಾಕಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಆರೋಗ್ಯ ನೀರಿಕ್ಷಣಾಧಿಕಾರಿ ಕೆ.ವೀರೇಶ, ಪ್ರಾಥಮಿಕ ಅರೋಗ್ಯ ಸುರಕ್ಷಣಾಧಿಕಾರಿ ಶರಣಮ್ಮ, ಸಿದ್ದಮ್ಮ, ಆಶಾ ಕಾರ್ಯಕರ್ತೆ ರಾಧಾ ಸೇರಿದಂತೆ ತಾಯಂದಿರು, ಸಾರ್ವಜನಿಕ ಉಪಸ್ಥಿತರಿದ್ದರು.

## ಡಾ.ಪ್ರಭುಗೌಡ ಲಿಂಗದಳ್ಳಿಗೆ ಜನನಿ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ನಾಡಿನ ಖ್ಯಾತ ನೇತ್ರ ತಜ್ಞ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ಪ್ರಭುಗೌಡ ಲಿಂಗದಳ್ಳಿ (ಚಬನೂರ) ಇವರಿಗೆಯಾದಗಿ-ರಿಯ ಮಾತೋಶ್ರೀ ಬಸಮ್ಮ ಶರಬಣ್ಣ ಮಹಾಮನಿ ಸೇವಾ ಸಂಸ್ಥೆ(ರಿ) ಹತ್ತಿಗುಡೂರ ವತಿಯಿಂದ ಯಾದಗಿರಿ ನಗರದಲ್ಲಿ ಹಮ್ಮಿಕೊಂಡ ನಗೆ ಹಬ್ಬ ಕಾರ್ಯಕ್ರಮದಲ್ಲಿ ಅವರ ವೈದ್ಯಕೀಯ ಹಾಗೂ ಸಮಾಜಮುಖಿ ಕಾರ್ಯಗಳಿಗಾಗಿ ಜನನಿ ಪ್ರಶಸ್ತಿಯನ್ನು ನೀಡಿ ಭಾನುವಾರ ಗೌರವಿಸಲಾಯಿತು.

ಕಳೆದ 25 ವರ್ಷಗಳಿಂದ ಅನುಗ್ರಹ ವಿಸನ್ ಫೌಂಡೇಶನ್ ಹೆಸರಿನಲ್ಲಿ ವಿಜಯಪುರ ಹಾಗೂ ಗುಲ್ಬರ್ಗಾ ಜಿಲ್ಲೆಗಳಾದ್ಯಂತ ಆಸ್ಪತ್ರೆಗಳನ್ನು ತೆರೆದು ಸೇವೆ ಮಾಡುವುದರ ಜೊತೆಗೆ ಸಾವಿರಾರು ಉಚಿತ ಶಿಬಿರಗಳನ್ನು ನಡೆಸಿ ಬಡ ಜನರಿಗೆ ಅನುಕೂಲ ಕಲ್ಪಿಸಿಕೊಟ್ಟ ಇವರು ಬಡ ನಿರ್ಗತಿಕ ಹಾಗೂ ದುರ್ಬಲರ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ, ದೇವರ ಹಿಪ್ಪರಗಿಯನ್ನು ರಾಜಕೀಯ ಕ್ಷೇತ್ರವನ್ನಾಗಿ ಮಾಡಿಕೊಂಡು ಕೆಲಸ ಮಾಡುತ್ತಿದ್ದು ಪ್ರಸಕ್ತ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ ಅವರ ಈ ಅನುಪಮ ಸೇವೆಯನ್ನು ಗುರುತಿಸಿ ಈಗಾಗಲೇ ಅವರಿಗೆ ರಾಜ್ಯ ಪ್ರಶಸ್ತಿಗಳು ಲಭಿಸಿದ್ದು ನೂರಾರು ಸಂಘ-ಸಂಸ್ಥೆಗಳಿಂದ ಅವರಿಗೆ ಪ್ರಶಸ್ತಿಗಳನ್ನು ಪ್ರಧಾನ ಮಾಡಿ ಗೌರವಿಸಲಾಗಿದೆ.

ಭಾನುವಾರ ಯಾದಗಿರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ.ಪ್ರಭುಗೌಡರು ನಾನು ಮಾಡುತ್ತಿರುವ ಸಣ್ಣ ಸೇವೆಯನ್ನು ಗುರುತಿಸಿ ನನಗೆ ಕಲಾವಿದ ಬಸವರಾಜ್ ಮಾಮನಿಯವರು ಈ ಗೌರವ ಕೊಟ್ಟಿದ್ದಕ್ಕಾಗಿ ಅವರಿಗೆ ಕೃತಜ್ಞನಾಗಿರುವೆ, ಈ ಪ್ರಶಸ್ತಿ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ ಎಂದು ನಾನು ಭಾವಿಸುತ್ತೇನೆ, ನಾನು ಕೇವಲ ವ್ಯಾಪಾರಿ ದೃಷ್ಟಿಕೋನವನ್ನಿಟ್ಟುಕೊಳ್ಳದೆ ಸಮಾಜದಲ್ಲಿರುವ ಬಡವರು ಆರ್ಥಿಕ ಕಾರಣದಿಂದಾಗಿ ದೃಷ್ಟಿಹೀನರಾಗಬಾರದು ಎಂಬ ಉದ್ದೇಶದಿಂದ ಹಲವಾರು ಉಚಿತ ಶಿಬಿರಗಳನ್ನು ನಡೆಸುತ್ತಿದೇನೆ. ಮುಂದಿನ ದಿನಗಳಲ್ಲಿಯೂ ಈ ವರ್ಗದ ಜನರಿಗಾಗಿ ಇನ್ನಷ್ಟು ಹೆಚ್ಚಿನ ಸೇವೆ ಮಾಡಲು ಶಕ್ತಿಮೀರಿ ಪ್ರಯತ್ನಿಸುತ್ತೇನೆ ಎಂದ ಅವರು ಆರೋಗ್ಯ ಅತ್ಯಮೂಲ್ಯ ಸಂಪತ್ತಾಗಿದೆ ಇದನ್ನು ರಕ್ಷಿಸಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ, ಗಂಗಾವತಿ ಪ್ರಾಣೇಶ್ ಹಾಗೂ ಅವರ ತಂಡದವರ ಹಾಸ್ಯ ಕಾರ್ಯಕ್ರಮಗಳಿಂದ ಜನರ ಆಯುಷ್ಯ ಹೆಚ್ಚಾಗುತ್ತದೆ ಎಂದರು.

ವೇದಿಕೆಯಲ್ಲಿ ನಗರ ಶಾಸಕ ಚೆನ್ನಾರೆಡ್ಡಿ, ಚಲನಚಿತ್ರ ನಟ ಮುಖ್ಯಮಂತ್ರಿ ಚಂದ್ರು, ಹಾಸ್ಯ ಕಲಾವಿದ ಗಂಗಾವತಿ ಪ್ರಾಣೇಶ, ಬಸವರಾಜ ಮಾಮನಿ, ಡಾ. ಕಾಮರಡ್ಡಿ, ಆನಂದ ಮಾಮನಿ, ವಿವಿಧ ಪಕ್ಷಗಳ ಮುಖಂಡರು, ಸಂಘ-ಸಂಸ್ಥೆಗಳ ಮುಖ್ಯಸ್ಥರು ಹಾಗೂ ಪ್ರತಿಷ್ಠಿತ ಉದ್ದಿಮೆದಾರರು ಇದ್ದರು.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ (ಸಿಬಿಎಸಿಇ) ಗಳ 2025-26 ನೇ ಶೈಕ್ಷಣಿಕ ಸಾಲಿಗೆ 6 ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಮಾ.25 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ. ಆಸಕ್ತಿಯುಳ್ಳ ಐದನೇ ತರಗತಿ ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಪೋರ್ಟಲ್ https://sevasindhuservices.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಶಾಲೆಗಳ ವಿವರ:** ಬಳ್ಳಾರಿ ತಾಲ್ಲೂಕಿನ ಕೊಳಗಲ್ಲಿನ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಸಿ) ಯ ಪ್ರಾಂಶುಪಾಲರ ಮೊ. 7353346069. ಸಂಡೂರು ತಾಲ್ಲೂಕಿನ ತೋರಣಗಲ್ಲು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9480933730. ಕಂಪ್ಲಿ ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9113280239. ಕುರುಗೋಡು ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ. 9113280239. ಬಳ್ಳಾರಿ ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.7353346069.

**ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳ ಸಂಪರ್ಕ ವಿವರ:**

ಬಳ್ಳಾರಿ-9611342523, 8310321101, ಸಂಡೂರು-9036925966, 8660575061 ಮತ್ತು ಸಿರುಗುಪ್ಪ-9148889975.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯದ ದೂ.08392-200125/224, ಸಹಾಯವಾಣಿ ಕೇಂದ್ರ 8277799990(24*7) ಅಥವಾ ತಾಲೂಕು ಅಲ್ಪ ಸಂಖ್ಯಾತರ ವಿಸ್ತರಣಾಧಿಕಾರಿಗಳ ಹಾಗೂ ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರ, ಅಲ್ಪ ಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಭೇಟಿನೀಡಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಕರ್ತರಿಗೆ ಮೋ-ಜೋ ಕಿಟ್ ನೀಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಕರ್ನಾಟಕ ಮಾಧ್ಯಮ ಅಕಾಡೆಮಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಪತ್ರಕರ್ತರಿಗೆ ಉತ್ತೇಜನ ನೀಡುವ ಸಲುವಾಗಿ ಉಚಿತವಾಗಿ ಮೋ-ಜೋ ಕಿಟ್ ಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಪರಿಶಿಷ್ಟ ಜಾತಿ, ಪರಿಷ್ಟ ಪಂಗಡಕ್ಕೆ ಸೇರಿದ ಅರ್ಜಿದಾರರು ಈ ಕೆಳಕಂಡ ಷರತ್ತುಗೊಳಪಟ್ಟು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿದಾರರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಮಾನ್ಯತೆ ಪಡೆದ ಪತ್ರಕರ್ತರಾಗಿರಬೇಕು ಅಥವಾ ವಾರ್ತಾ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳಲ್ಲಿ ಅಥವಾ ಉಪಗ್ರಹ ಸುದ್ದಿ ವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಮಾಧ್ಯಮಕ್ಷೇತ್ರದಲ್ಲಿ ಕನಿಷ್ಠ 10 ವರ್ಗಗಳ ಅನುಭವವಿರಬೇಕು ಹಾಗೂ ಇದಕ್ಕೆ ಸಂಬಂಧಿಸಿದ ಪೂರಕ ದಾಖಲೆಗಳನ್ನು ಒದಗಿಸಬೇಕು. ಪತ್ರಿಕೆಯ ಸಂಪಾದಕರಾಗಿದ್ದಲ್ಲಿ ಪತ್ರಿಕೆಯು ವಾರ್ತಾ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಸೇರಿರಬೇಕು. ಅರ್ಜಿದಾರರು ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು. ತಾವು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ಮುಖ್ಯಸ್ಥರಿಂದ ಸೇವಾ ದೃಢೀಕರಣ ಪತ್ರ ಸಲ್ಲಿಸಬೇಕು.

ಈ ಹಿಂದೆ ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ ಹಾಗೂ ಇತರೆ ಸರ್ಕಾರಿ ಸಂಸ್ಥೆಗಳಿಂದ ಸೌಲಭ್ಯ ಪಡೆದ ಫಲಾನುಭವಿಗಳಾಗಿದ್ದರೆ, ಅರ್ಜಿ ಸಲ್ಲಿಸುವಂತಿಲ್ಲ. ಪತ್ರಿಕೆಯು ನಿರಂತರವಾಗಿ ಪ್ರಕಟಗೊಳ್ಳುತ್ತಿದ್ದು, ಪತ್ರಿಕೆ ಮೇಲಾಗಲಿ ಹಾಗೂ ಸಂಪಾದಕರ ಮೇಲಾಗಲಿ ಯಾವುದೇ ರೀತಿಯ ಕ್ರಿಮಿನಲ್ ಅಪರಾಧ ಮೊಕದ್ದಮೆಗಳು ಇರಬಾರದು. ಸರ್ಕಾರದ ವಿವಿಧ ಸಮಿತಿ/ಸಂಸ್ಥೆಗಳಿಗೆ ನೇಮಕ ಮಾಡಿದ ನಾಮ ನಿರ್ದೇಶಿತ ಸದಸ್ಯರುಗಳನ್ನು ಪರಿಗಣಿಸಲಾಗುವುದಿಲ್ಲ.

ಅಭ್ಯರ್ಥಿಗಳು ಸ್ವಯಂ ಅರ್ಜಿಗಳೊಂದಿಗೆ ಪೂರಕ ದಾಖಲೆಗಳನ್ನು ಮಾ.20 ರೊಳಗಾಗಿ ಇ-ಮೇಲ್ ವಿಳಾಸ: karnatakamediaacademy@gmail.com ಗೆ ಸಲ್ಲಿಸಬೇಕು ಅಥವಾ ಅಂಚೆ ವಿಳಾಸ: ಕಾರ್ಯದರ್ಶಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ॥. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001 ಇಲ್ಲಿಗೆ ಅರ್ಜಿಗಳನ್ನು ಕಳುಹಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

## ಇಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಮಾ.12 ರಂದು ಮಧ್ಯಾಹ್ನ 3.30 ಗಂ-ಟೆಗೆ ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಮುನಿರಾಜು.ಎಂ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ವಿವಿಯ ಸಿಂಡಿಕೇಟ್ ಸದಸ್ಯರಾದ ಜಯಲಕ್ಷ್ಮೀ ನಾಯಕ್, ಕುಲಸಚಿವ (ಆಡಳಿತ) ರುದ್ರೇಶ್ ಎಸ್.ಎನ್., ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ, ಹಣಕಾಸು ಅಧಿಕಾರಿ ನಾಗರಾಜ, ಸಂಯೋಜ-ಕರಾದ ಡಾ.ಗೋಪಾಲ್ ಎನ್., ಡಾ.ಅಂಶುಮಾಲಿ ಎಂ.ಕೆ ಸೇರಿದಂತೆ ವಿವಿಯ ಸಿಂಡಿಕೇಟ್, ವಿದ್ಯಾವಿಷಯಕ ಪರಿಷತ್ ಸದಸ್ಯರು ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ತಂಬಾಕು ಪದಾರ್ಥಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಬೀದಿ ನಾಟಕ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಹಾಗೂ ಚಿಗುರು ಕಲಾತಂಡ ಇಬ್ರಾಹಿಂಪುರ ಇವರ ಸಂಯುಕ್ತಾಶ್ರಯದಲ್ಲಿ ತಂಬಾಕು ಪದಾರ್ಥಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಸೋಮವಾರ ಕುರುಗೋಡು ತಾಲ್ಲೂಕಿನ ಕೋಳೂರು ಮತ್ತು ದಮ್ಮೂರು ಗ್ರಾಮಗಳಲ್ಲಿ ಬೀದಿ ನಾಟಕ ಮತ್ತು ಜನಪದ ಗೀತೆಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮವನ್ನು ಕೋಳೂರು ಗ್ರಾಪಂ ಅಧ್ಯಕ್ಷರಾದ ದೊಡ್ಡಬಸಮ್ಮ ಹಾಗೂ ದಮ್ಮೂರು ಗ್ರಾಪಂನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಅವರು ಉದ್ಘಾಟಿಸಿದರು.

ನಂತರ ಚಿಗುರು ಕಲಾ ತಂಡದ ವತಿಯಿಂದ ಜನಪದ ಗೀತೆಗಳ ಮೂಲಕ ಬೀದಿ ನಾಟಕ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಕೋಳೂರು ಮತ್ತು ದಮ್ಮೂರು ಗ್ರಾಮಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಪ್ರಶಾಂತ್, ಸಾಮಾಜಿಕ ಕಾರ್ಯಕರ್ತೆ ಸರಸ್ವತಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವಿರೇಶ್, ಸಿದ್ದಮ್ಮ, ಬಿ.ಎಂ.ಬಸವ, ಶಂಕ್ರಮ್ಮ ಹಾಗೂ ಗ್ರಾಮದ ಆಶಾ ಕಾರ್ಯಕರ್ತರು, ಅಂಗನವಾಡಿ ಶಿಕ್ಷಕರು, ಊರಿನ ಮುಖಂಡರು ಹಾಗೂ ಚಿಗುರು ಕಲಾ ತಂಡದ ಕಲಾವಿದರಾದ ಹುಲುಗಪ್ಪ, ಎಸ್.ಎಂ.ಹನುಮಂತ್ಯ, ಹೆಚ್.ಜಿ.ಸುಂಕಪ್ಪ, ಬಿ.ಆನಂದ್, ಟಿ.ಹೇಮಂತ, ಸುನೀಲ್ ಸೇರಿದಂತೆ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

## ಬಹುಮಾನಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2022, 2023 ಮತ್ತು 2024ರ ಕ್ಯಾಲೆಂಡರ್ ವರ್ಷದಲ್ಲಿ (ಜನವರಿ ಯಿಂದ ಡಿಸೆಂಬರ್) ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ವಿವಿಧ "ಕನ್ನಡ ಪುಸ್ತಕ ಸೊಗಸು ಬಹುಮಾನ"ಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪ್ರಕಾಶಕರು, ಮುದ್ರಕರು, ಕಲಾವಿದರು, ಲೇಖಕ ದರುಗಳು ಸ್ವಯಂ ಅರ್ಜಿ ಸಲ್ಲಿಸಬಹುದಾಗಿದೆ.

ಪುಸ್ತಕದ ಹೆಸರು, ಲೇಖ-ಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು, ಮುಖಪುಟ ಚಿತ್ರ ರಚನೆಯ ಕಲಾವಿದರ ಹೆಸರು/ಚಿತ್ರ ಕಲಾವಿದರ ಪೂರ್ಣ ವಿಳಾಸ/ ದೂರವಾಣಿ ಸಂಖ್ಯೆ-ಈ ಎಲ್ಲಾ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ಮಾ.29 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560 002 - ಈ ವಿಳಾಸಕ್ಕೆ ಕಳುಹಿಸಿ ಕೊಡಬಹುದಾಗಿದೆ. ಸಲ್ಲಿಸಲಾಗುವ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಹಾಗೂ ಕೊನೆಯ ದಿನಾಂಕ ಮುಗಿದ ನಂತರ ಬಂದ ಪುಸ್ತಕಗಳನ್ನು ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು -560002 ಮತ್ತು ವೆಬ್‌ಸೈಟ್ https://kpp.karnataka.gov.in, ದೂ.080-22484516/ 22107704 ಗೆ ಸಂಪರ್ಕಿಸಬಹುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಂಜೆಜೆಬಿವೈ ಮತ್ತು ಪಿಎಂಎಸ್‌ಬಿವೈ ಅನುಷ್ಠಾನಕ್ಕಾಗಿ ಗ್ರಾಪಂ ಮಟ್ಟದಲ್ಲಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.11-ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಮತ್ತು ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ನೇತೃತ್ವದಲ್ಲಿ ಅಭಿಯಾನ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿರವರು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ಸ್ಥಳೀಯ ಬ್ಯಾಂಕುಗಳೊಂದಿಗೆ ಪ್ರಧಾನಮಂತ್ರಿ ಜನ್ ಜೀವನ್ ಬಿಮಾ ಯೋಜನೆ ಮತ್ತು ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯಡಿ ರಾಜ್ಯ ಮಟ್ಟದಲ್ಲಿ ಸಕ್ರಿಯ ನೋಂದಣಿಗಳನ್ನು ಹೆಚ್ಚಿಸುವ ಸಲುವಾಗಿ ಜಿಲ್ಲಾ ಲೀಡ್ ಬ್ಯಾಂಕ್, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತಯರ ಸಹಯೋಗದೊಂದಿಗೆ ಈ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ಗ್ರಾಮ ಪಂಚಾಯಿತಿಯಲ್ಲೂ ಅಭಿಯಾನ ಆಯೋಜಿಸುತ್ತಾರೆ ಎಂದು ಹೇಳಿದ್ದಾರೆ.

ಮುಂಬರುವ ಎರಡು ತಿಂಗಳಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಎರಡು ಯೋಜನೆಗಳಲ್ಲಿ ಪ್ರತಿ ಪಂಚಾಯಿತಿಯಲ್ಲೂ ಕನಿಷ್ಠ 150ಕ್ಕೂ ಹೆಚ್ಚಿನ ನೋಂದಣಿಗಳನ್ನು ಮಾಡಿಸುವ ಉದ್ದೇಶ ಹೊಂದಲಾಗಿದೆ.

ಆಯಾ ಗ್ರಾಪಂನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲಾ ಅರ್ಹ ವ್ಯಕ್ತಿಗಳನ್ನು ಜನಸುರಕ್ಷಾ ಯೋಜನೆಗಳಡಿ ನೋಂದಾಯಿಸಕೊಳ್ಳುವಂತೆ ಸೂಚಿಸಬೇಕು. ಬ್ಯಾಂಕರುಗಳ ಸಮಿತಿಗೆ ಪೂರ್ಣ ಸಹಯೋಗ ಮತ್ತು ಅಭಿಯಾನದ ಯಶಸ್ಸಿಗಾಗಿ ಪ್ರಗತಿ ಪರಿಶೀಲಿಸಬೇಕು ಹಾಗೂ ಸೂಕ್ತ ನಿರ್ದೇಶನ ನೀಡಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವದುರ್ಗದ ಸರ್ಕಾರಿ ಪ್ರೌಢ ಶಾಲೆ; ಬೇಟಿ ಬಚಾವೋ, ಬೇಟಿ ಪಢಾವೋ ಸರಣಿ ಕಾರ್ಯಕ್ರಮ ಯಶಸ್ವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.11-ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ವತಿಯಿಂದ ಇತ್ತೀಚೆಗೆ ಜಿಲ್ಲೆಯ ದೇವದುರ್ಗದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಬೇಟಿ ಬಚಾವೋ, ಬೇಟಿ ಪಢಾವೋ ಸರಣಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು.

ಈ ವೇಳೆ ಹಿರಿಯ ಮೇಲ್ವಿಚಾರಕಿಯಾದ ಲಕ್ಷ್ಮೀ ರಾಠೋಡ್ ಅವರು ಮಾತನಾಡಿ, ಹೆಣ್ಣು ಮಕ್ಕಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಸಿಗುವ ಯೋಜನೆಗಳನ್ನು ಸರಿಯಾಗಿ ಬಹಳಸಿಕೊಳ್ಳಬೇಕು. ಮಹಿಳೆಯರು ಈ ದೇಶದ ಆಸ್ತಿ ಕೇಂದ್ರ ಸರ್ಕಾರದ ಬೇಟಿ ಬಚಾವೋ, ಬೇಟಿ ಪಢಾವೋ ಕಾರ್ಯಕ್ರಮದಿಂದ ಮಹಿಳೆಯರು ಆರ್ಥಿಕವಾಗಿ ಸದೃಢವಾಗಬೇಕೆಂದರು.

ವಿದ್ಯೆಯಿಂದ ಜೀವನ ಸುಂದರ ಆಗುತ್ತದೆ. ಎಲ್ಲಾ ವಿದ್ಯಾರ್ಥಿಗಳು ಸರಿಯಾಗಿ ವಿದ್ಯಾಭ್ಯಾಸ ಮಾಡಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಮಾಜದಲ್ಲಿ ಒಳ್ಳೆಯ ಪ್ರಜೆಯಾಗಿ ಮಾಡಬೇಕಾದ ಜವಾಬ್ದಾರಿ ಪೋಷಕರ ಮೇಲಿದೆ. ಮಕ್ಕಳನ್ನು ಬಾಲ ಕಾರ್ಮಿಕ ಪದ್ಧತಿಗೆ ದೂಡಬೇಡಿ. ಇದು ಕಾನೂನು ಪ್ರಕಾರ ಅಪರಾಧ. ಮಕ್ಕಳ ಹಕ್ಕುಗಳ ಉಲ್ಲಂಘನೆಯಾಗದಂತೆ ನೋಡಿಕೊಳ್ಳಿ ಎಂದು ಸಲಹೆ ಮಾಡಿದರು.

ಈ ವೇಳೆ ಗಿರಿಜವ್ವ ಅವರು ಮಾತನಾಡಿ, ಬೇಟಿ ಬಚಾವೋ, ಬೇಟಿ ಪಢಾವೋ ಯೋಜನೆಯ ಉದ್ದೇಶ ಹೆಣ್ಣು ಶಿಶುಹತ್ಯೆ ತಡೆಯುವುದಾಗಿದೆ. ಪ್ರತಿ ಹೆಣ್ಣು ಮಗುವಿನ ಸುರಕ್ಷತೆ ಮತ್ತು ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಹೊಸ ಯೋಜನೆಗಳನ್ನು ಅಭಿವೃದ್ಧಿಪಡಿಸಿ, ಗುಣಮಟ್ಟದ ಶಿಕ್ಷಣ ಸಿಗುವಂತೆ ಮಾಡುವುದು, ಹೆಣ್ಣು ಮಕ್ಕಳ ಲಿಂಗ ಅನುಪಾತದಲ್ಲಿನ ಕುಸಿತ ತಡೆಯುವುದು ಯೋಜನೆಯ ಮತ್ತೊಂದು ಪ್ರಮುಖ ಗು-ರಿಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ದೇವದುರ್ಗದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯಗುರುಗಳಾದ ಮಹಾದೇವ, ಮಿಷನ್ ಶಕ್ತಿ ಜಿಲ್ಲಾ ಸಂಯೋಜಕ ಬಾವಸಲಿ, ಹಿರಿಯ ಮೇಲ್ವಿಚಾರಕಿ ನಿರ್ಮಲಾ ದೇವಿ, ಅಂಗನವಾಡಿ ಕಾರ್ಯಕರ್ತೆ ಸುರೇಖ, ಜಿಲ್ಲಾ ಮಕ್ಕಳ ಸಹಾಯವಾಣಿ ಅಧಿಕಾರಿ ತಿಕ್ಕಯ್ಯ, ಶಿಕ್ಷಕಿಯಾದ ಕಲ್ಪನಾ ಪಾಟೀಲ್ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ಮಕ್ಕಳಿಗೆ ಸ್ಪರ್ಧಾತ್ಮಕ ಶಿಕ್ಷಣ ಬಗ್ಗೆ ಅರಿವು ಮೂಡಿಸಿ : ಕುಲಪತಿ ಪ್ರೊ. ಬಿ. ಕೆ. ರವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇತ್ತಿಚಿಗೆ ತಾಲ್ಲೂಕಿನ ಹಲಗೇರಿ ಗ್ರಾಮದಲ್ಲಿ ಶ್ರೀ ರಾಜರಾಜೇಶ್ವರಿ ಗ್ರಾಮೀಣ ವಿದ್ಯಾಭಿವೃದ್ಧಿ ಶಿಕ್ಷಣ ಸಂಸ್ಥೆಯು ಶ್ರೀ ರಾಜರಾಜೇಶ್ವರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಸಾಂಸ್ಕೃತಿಕ ಸಂಭ್ರಮ ಮತ್ತು ಸರಸ್ವತಿ ಪೂಜಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.ಕಾರ್ಯಕ್ರಮವನ್ನು ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಕೆ.ರವಿ ಅವರು ಉದ್ಘಾಟಿಸಿದರು.

ಇದೇ ವೇಳೆ ಮಾತನಾಡಿದ ಅವರು ಮಕ್ಕಳಿಗೆ ಆಧುನಿಕ ಶಿಕ್ಷಣ ಶೈಲಿ ಹಾಗೂ ಮೌಲ್ಯಯುತ ಶಿಕ್ಷಣ ನೀಡಬೇಕು.ಪಾಲಕರು ಮಕ್ಕಳ ಚಲನವಲನದ ಮೇಲೆ ನಿಗಾವಹಿಸಬೇಕು.ವಿದ್ಯಾರ್ಥಿಗಳು ಮೊಬೈಲ್ ಗೀಳಿಗಿಂದ ದೂರವಿದ್ದು ಓದಿನ ಕಡೆಗೆ ಹೆಚ್ಚಿನ ಆಸಕ್ತಿವಹಿಸಬೇಕು.ಪ್ರಚಲಿತ ದಿನಮಾನಗಳಲ್ಲಿ ಸ್ಪರ್ಧಾತ್ಮಕ ಶಿಕ್ಷಣದ ಬಗ್ಗೆ ಅರಿವು ಮೂಡಿಸಬೇಕೆಂದರು.

ಪತ್ರಕರ್ತರಾದ ಕುಬೇರ ಮಜ್ಜಿಗಿ ಮಾತನಾಡಿ ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಲು ಪ್ರೇರೆಪಿಸಬೇಕು. ಓದಿನ ಜೊತೆಗೆ ಸಾಮಾಜಿಕ ಮೌಲ್ಯದ ಬಗ್ಗೆ ತಿಳಿಸಬೇಕು. ಮಕ್ಕಳ ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಪೂರಕವಾಗಿ ಶಿಕ್ಷಣ ನೀಡಬೇಕೆಂದರು.

ಇದೇ ವೇಳೆ ಎಸ್.ಎಸ್.ಎಲ್.ಸಿ ಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಗೌರವಿಸಲಾಯಿತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಸಂಸ್ಥಾಪಕರಾದ ವೀರಣ್ಣ ಕಂಬಳಿ ವಹಿಸಿಕೊಂಡಿದ್ದರು. ಯಲ್ಲಪ್ಪ ಓಜನಹಳ್ಳಿ,ಮಂಜುನಾಥ ಬಂಗಾಳಿ,ಕುಬೇರಪ್ಪ ಗೊರವರ ,ಲಕ್ಕನಗೌಡ ಹಾಗೂ ಗಣ್ಯರು, ಶಿಕ್ಷಣ ಪ್ರೇಮಿಗಳು,ಪಾಲಕರು ಮತ್ತು ಗುರುವೃಂದ ಉಪಸ್ಥಿತಿ ಇದ್ದರು.

ವಿಕಲಚೇತನ ಮಕ್ಕಳಿಗೆ ಕ್ರೀಡೆ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ

# ವಿಕಲಚೇತನರ ಆತ್ಮಸ್ಥೈರ್ಯ ಹೆಚ್ಚಿಸುವುದೇ ಮೂಲ ಉದ್ದೇಶ – ಡಾ ಉದಗಿರೆ




ಮಲ್ಲಮ್ಮ ನುಡಿ ವಾರ್ತೆ

ಔರದ್:ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ ಅಡಿಯಲ್ಲಿ ಕೇಂದ್ರದ ಸಮಾನ ಶಿಕ್ಷಣ ವಿಭಾಗದಿಂದ ಕಮಲನಗರ ಮಾಳಪ್ಪಯ್ಯ ಪ್ರಕೃತಿಯ ಮಡಿಲಲ್ಲಿ ಪುರಾದ್ ಮತ್ತು ಕಮಲನಗರ ಮತ್ತು ಔರಾದ ತಾಲೂಕಿನ ಚೇತನ ಮಕ್ಕಳಿಗೆ ಕ್ರೀಡೆ ಮತ್ತು ಅರಿವು ಮೂಡಿಸುವ ಪ್ರಯುಕ್ತ ಕ್ಷೇತ್ರ ಬೇಟಿ. ಕ್ಷೇತ್ರ ಸಮನ್ವಯಾಧಿಕಾರಿಗಳಾದ ಪ್ರಕಾಶ ರಾಠೋಡ ಕ್ರಮಕ್ಕೆ ಚಾಲನೆ ನೀಡಿದರು. ವಿಕಲಚೇತನ ಮಕ್ಕಳು ಕೂಡ ಸಾಮಾನ್ಯ ಮಕ್ಕಳಂತೆ ಮುಖ್ಯವಾಹಿನಿಗೆ ಬರಬೇಕಾಗಿದೆ, ಚೇತನರಲ್ಲಿ ವಿಶೇಷವಾದ ತಲೆಯನ್ನು ಅಡಗಿರುತ್ತದೆ ಪ್ರತಿಭೆಯನ್ನು ಹೊರ ತೆಗೆಯುವ ಮತ್ತು ಮನಸ್ಥೈರ್ಯವನ್ನು ಹೆಚ್ಚಿಸುವದೇ ಈ ಕಾರ್ಯಕ್ರಮದ ಮೂಲ ಉದ್ದೇಶ ಎಂದು ವಿಕಲಚೇತನ ಶಿಕ್ಷಕರ ಡಾ ಶಾಲಿವಾನ ಉದಗಿರೆ ಅಭಿಪ್ರಾಯ ಪಟ್ಟರು. ತಾಲೂಕಿನ ವಿವಿಧ ಶಾಲೆಗಳಿಂದ ವಿಕಲಚೇತನ ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿ, ಪ್ರಬಂಧ ಸ್ಪರ್ಧೆ, ಚರ್ಚಾ ಸ್ಪರ್ಧೆ, ಬಲೂನ್ ಒಡೆಯುವುದು, ಬಿಡಿಸುವುದು,ಓಟದ ಸ್ಪರ್ಧೆ, ಹಲವಾರು ಸ್ಪರ್ಧೆಗಳಲ್ಲಿ ಮಕ್ಕಳು ಭಾಗವಹಿಸಿದ್ದರು, ಮಕ್ಕಳಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯಿತು, ಮತ್ತು ಸ್ವಚ್ಛತೆ ಪರಿಸರ ಸಂರಕ್ಷಣೆ, ಮೊಬೈಲ್ ನ ದುರ್ಬಳಕೆ, ಕುರಿತು ಮಕ್ಕಳಿಗೆ ತಿಳಿಸಲಾಯಿತು.

ಬಿ ಐಇ ಆರ್ ಟಿ ರಮೇಶ ಡೊಂಬಾಳೆ, ಶಾಮರಾವ ಪವಾರ, ಜ್ಞಾನೋಬಾ ರೆಡ್ಡಿ, ದೈಹಿಕ ಶಿಕ್ಷಕರಾದ ಸುಧಾಕರ್ ಬಾಬ್ರೆ, ಶಿವಕುಮಾರ ಮೇಣಸೆ,ಶ್ರೀನಿವಾಸ ಮಂಠಾಳೆ, ವೀರೇಶ್ ಲೀಗಾಡೆ, ಸದಾಸಿವ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

# ರಾಜ್ಯ ಮಟ್ಟದ ಸಹಕಾರ ವಿಶೇಷ ತರಬೇತಿ ಕಾರ್ಯಗಾರ!! ಸಕಾಲಕ್ಕೆ ರೈತರಿಗೆ ಸಾಲ ಸೌಲಭ್ಯ ನೀಡುವದು ಅತ್ಯವಶ್ಯಕ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಸಹಕಾರ ಪತ್ತಿನ ಸಹಕಾರಿ ಸಂಘಗಳು ಕಾರ್ಯಚಟುವಟಿಕೆಗಳ ಮುಖಾಂತರ ರೈತರಿಗೆ ಜಾಗ್ರತಿ ಮೂಡಿಸುವಂತಾಗಬೇಕು,ಸಹಕಾರಿ ಕ್ಷೇತ್ರದ ಅರಿವು ಪ್ರತಿಯೊಬ್ಬ ರೈತರಿಗೂ ಗೊತ್ತಾಗಬೆಕಾಗಿದೆ, ಸಕಾಲಕ್ಕೆ ರೈತರಿಗೆ ಸಾಲ ನೀಡಿದಲ್ಲಿ ಅವರಿಗೆ ಬಿತ್ತನೆಗೆ ಅನೂಕೂಲವಾಗುತ್ತದೆ,ಎಂದು ಕಲಬುರ್ಗಿ ಜಿಲ್ಲಾ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಸೋಮೇಶೇಖರ ಗೋನಾಯಕ ಕರೆ ನಿಡಿದರು, ಅವರು ನಗರದ ಮೋಟಗಿ ಸಭಾಂಗಣದಲ್ಲಿ ನಡೆದ ಒಂದು ದಿನ ಸಹಕಾರಿ ವಿಶೇಷ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು, ಯಾದಗಿರಿ ಜಿಲ್ಲೆಯಲ್ಲಿ ಸಹಕಾರಿ ಯುನಿಯನ್ ಸ್ಥಾಪನೆಯಾದಂದಿನಿಂದ ಇಂದಿನವರೆಗೂ ಅನೇಕ ಕಾರ್ಯಕ್ರಮಗಳನ್ನು ಸಭೆಗಳನ್ನು ಮಾಡುತ್ತಾ ಈ ಭಾಗದ ರೈತರಿಗೆ ಜಾಗ್ರತಿ ಮತ್ತು ಸಹಕಾರಿ ಕ್ಷೇತ್ರದ ಸೌಲಭ್ಯಗಳು ಕುರಿತು ಮನವರಿಕೆ ಮಾಡಿದ್ದು ಶ್ಲಾಘನೀಯವಾಗಿದೆ, ಎಂದ ಅವರು. ಆಧುನಿಕ ತಂತ್ರಜ್ಞಾನದಲ್ಲಿ ಕಂಪ್ಯೂಟರ್ ಸಾಕ್ಷರತೆ ಅವಶ್ಯಕತೆ ಇದ್ದು ಸರ್ವರು ಅದನ್ನು ಅಭ್ಯಾಸ ಮಾಡಿಕೊಳ್ಳಬೇಕಾಗಿದೆ, ಸೈಬರ್ ಕ್ರೈಂ. ಕುರಿತು ಜಾಗ್ರತಿಯಿಂದ ಕರ್ತವ್ಯ ನಿರ್ವಹಣೆ ಮಾಡಬೇಕು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕಾನೂನು ಚೌಕಟ್ಟಿನಲ್ಲೆ ಕರ್ತವ್ಯ ನಿರ್ವಹಣೆ ಮಾಡಬೇಕಾಗಿದೆ ಎಂದು ಅವರು ತಿಳಿಸಿದರು, ಪತ್ರಕರ್ತರಾದ ವಿಸ್ವರಾದ್ಯ ಸತ್ಯಂಪೇಟರವರು ಮಾತನಾಡಿ, ನೋಡಲು ಸಭ್ಯತೆಗಳಿದ್ದರೂ ಕ್ರೂರತನ ಮುಖವಾಡಗಳಿರುತ್ತವೆ, ಇವರಿಂದ ಆತಂಕಕಾರಿ ಬೇಳವಣಿಗೆಯಾಗುತ್ತವೆ ಆದ್ದರಿಂದ ಸಹಕಾರಿ ಸಂಘಗಳಲ್ಲಿ ವ್ಯವಹಾರಗಳಲ್ಲಿ ಪ್ರಮಾಣಿಕ ವಿಶ್ವಾಸಗಳನ್ನು ಅಳವಡಿಕೊಂಡು ಕೆಲಸ ಮಾಡಬೇಕು ಎಂದು ಅವರು ತಿಳಿಸಿದರು,ಡಿಸಿಸಿ ಬ್ಯಾಂಕ ಉಪಾಧ್ಯಕ್ಷರಾಧ ಸುರೇಶ ಸಜ್ಜನ ಮಾತನಾಡಿದರು, ಈ ಕಾರ್ಯಕ್ರಮದಲ್ಲಿ ನಾಫೇಡ್ ಉಪಾಧ್ಯಕ್ಷರಾದ ಸಿದ್ದಪ್ಪ ಹೊಟ್ಟಿ, ನಾಫೇಡ್ ನಿರ್ದೇಶಕರಾದ ಗುರುನಾಥರಡ್ಡಿ ಪಾಟೀಲ್, ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಸೋಮಶೇಖರ ಗೋನಾಯಕ, ಕಲಬುರ್ಗಿ ಒಕ್ಕೂಟಗಳ ಅಧ್ಯಕ್ಷರಾದ ಆರ್,ಕೆ, ಪಾಟೀಲ್, ಕೆಂಚಪ್ಪ ನಗನೂರ, ವಿಠಲ ಯಾದವ್, ಇಬ್ರಾಹಿಂ, ಶಿರವಾಳ,.ರವರನ್ನು ಗೌರವಸಿ ಸನ್ಮಾನಿಸಲಾಯಿತು, ಯಾದಗಿರಿ ಜಿಲ್ಲಾ ಸಹಕಾರಿ ಒಕ್ಕೂಟ ಯುನಿಯನ್ ಅಧ್ಯಕ್ಷರಾದ ವಿಶ್ವನಾಥರಡ್ಡಿ ಪಾಟೀಲ್ ದರ್ಶನಾಪುರವರು ಪ್ರಾಸ್ತಾವಿಕವಾಗಿ ಮಾತನಾಡಿದರು, ವೇದಿಕೆಯಲ್ಲಿ ಉಪಾಧ್ಯಕ್ಷರಾದ ಎಮ್,ನಾರಾಯಣ, ಸಹಕಾರ ಸಂಘಗಳ ಉಪ ನಿಭಂದಕರಾದ ಆರ್,ಪವನಕುಮಾರ,ಸೇರಿದಂತೆ ಅನೇಕ ಸಹಕಾರಿ ಪತ್ತಿನ ಸಂಘಗಳ ಪಧಾಧಿಕಾರಿಗಳು ನಿರ್ದೇಶಕರು, ಭಾಗವಹಿಸಿದ್ದರು, ಶಿಕ್ಷಕರಾದ ಲಕ್ಷ್ಮಣ ಲಾಳಸಂಗಿ ಕಾರ್ಯಕ್ರಮ ನೀರೂಪಿಸಿದರು, ಒಂದು ದಿನದ ಈ ಕಾರ್ಯಕ್ರಮದಲ್ಲಿ ಅನೇಕ ಗಣ್ಯರು ಹಿರಿಯರು ಪಾಲ್ಗೊಂಡಿದ್ದರು.

# ಇಂದು ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಜಯಂತಿ ಅಂಗವಾಗಿ ಇಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಜಯಂತಿ ಅಂಗವಾಗಿ ಇಂದು ಮುಂಜಾನೆ 8–00 ಘಂಟೆಗೆ ಪಟ್ಟಣದ ಶ್ರೀ ಖಾಸ್ಗತೇಶ್ವರ ಮಠದಿಂದ ಶ್ರೀ ಜಗದ್ಗುರು ರೇಣುಕಾಚಾರ್ಯರ ಭಾವಚಿತ್ರದ ಭವ್ಯ ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ನಡೆಯಲಿದೆ. ಮೆರವಣಿಗೆಯು ಶ್ರೀ ಖಾಸ್ಗತೇಶ್ವರ ಮಠದಿಂದ ಆರಂಭವಾಗಿ ಕತ್ರಿಬಜಾರ್,ಶಿವಾಜಿ ಸರ್ಕಲ್, ವಿಠ್ಠಲ ಮಂದಿರ, ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್, ಬಸ್ ನಿಲ್ದಾಣ ಮಾರ್ಗವಾಗಿ ಅಡತ್ ಮರ್ಚೆಂಟ್ ಅಸೋಸಿಯೇಷನ್ ಸಭಾ ಭವನಕ್ಕೆ ತಲುಪಿ ಅಲ್ಲಿ ಸಭೆಯಾಗಿ ಮಾರ್ಪಾಡುವುದು. ಅಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮದಲ್ಲಿ ನಾಡಿನ ಹರ ಚರ ಗುರು ಮೂರ್ತಿಗಳು ಭಾಗವಹಿಸಿ ಆಶೀರ್ವಚನ ನೀಡಲಿದ್ದಾರೆ.ಈ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ರಾಷ್ಟ್ರೀಯ ಬೇಡ ಜಂಗಮ ಸಮಾಜದ ಗೌರವ ಅಧ್ಯಕ್ಷರಾದ ಪೂಜ್ಯ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಗಲಕೋಟೆ ಜಿಲ್ಲಾ 12 ನೇ ಕನ್ನಡ ಸಾಹಿತ್ಯ ಸಮ್ಮೇಳನ

# ಸರ್ವಾಧ್ಯಕ್ಷರಾಗಿ ಸಾಹಿತಿ ಡಾ.ವೈ.ಎಂ.ಯಾಕೊಳ್ಳಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.11–ಜಿಲ್ಲೆಯ ನೀರಬೂದಿಹಾಳದಲ್ಲಿ ಮಾ.22 ಹಾಗೂ 23 ರಂದು ಜರುಗಲಿರುವ ಬಾಗಲಕೋಟೆ ಜಿಲ್ಲಾ 12 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಹಿರಿಯ ಸಾಹಿತಿ ಡಾ.ವೈ.ಎಂ.ಯಾಕೊಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಪತ್ರಿಕಾ ಪ್ರಕಟನೆಯಲ್ಲಿ ಈ ವಿಷಯ ತಿಳಿಸಿದ್ದು, ಡಾ.ವೈ.ಎಂ.ಯಾಕೊಳ್ಳಿ ಮೂಲತಃ ಬಾದಾಮಿ ತಾಲೂಕಿನ ನೀರಬೂದಿಹಾಳ ಗ್ರಾಮದವರು. ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಾಧ್ಯಾಪಕರಾಗಿ, ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿದ್ದಾರೆ ಎಂದಿದ್ದಾರೆ.

ಪ್ರಖಾಂಡ ವಾಗ್ಮೀಗಳಾಗಿ ಕರ್ನಾಟಕ ಸೇರಿದಂತೆ ಬೇರೆ ಬೇರೆ ರಾಜ್ಯಗಳಲ್ಲಿ ತಮ್ಮ ವಿದ್ವತ್‌ಪೂರ್ಣ ಭಾಷಣಗಳಿಂದ ಜನಮನ್ನಣೆ ಗಳಿಸಿದ್ದಾರೆ. ಕಥೆ, ಕಾವ್ಯ, ಚುಟುಕ, ಹೈಕು, ನಾಟಕ, ವಿಮರ್ಶೆ, ಜಾನಪದ ಪ್ರಕಾರಗಳು ಸೇರಿದಂತೆ ಕನ್ನಡ ಸಾರಸ್ವತ ಲೋಕಕ್ಕೆ 50 ಕ್ಕೂ ಹೆಚ್ಚು ಕೃತಿಗಳನ್ನು ನೀಡಿದ್ದಾರೆ. ಅವರ ಸುದೀರ್ಘ ಸಾಹಿತ್ಯ ಸೇವೆಯನ್ನು ಪರಿಗಣಿಸಿ, ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಬಾದಾಮಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಇವರ ಸಹಯೋಗದಲ್ಲಿ ನಡೆಯುವ ಜಿಲ್ಲಾ ಸಮ್ಮೇಳನಕ್ಕೆ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಎರಡು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ಸಮ್ಮೇಳನ ಅಧ್ಯಕ್ಷರ ಮೆರವಣಿಗೆ, ಉದ್ಘಾಟನೆ, ಸಾಹಿತ್ಯ, ಕಲೆ, ಇತಿಹಾಸ, ಸಂಸ್ಕೃತಿ, ಜಾನಪದ, ಕೃತಿ ಲೋಕಾರ್ಪಣೆ, ಸಮೂಹ ಮಾಧ್ಯಮ, ಸಮ್ಮೇಳನಾಧ್ಯಕ್ಷರೊಂದಿಗೆ ಸಂವಾದ, ಕವಿಗೋಷ್ಠಿ, ಸಾಧಕರ ಸನ್ಮಾನ, ಮುಂತಾದ ವಿಷಯಗಳ ಮೇಲೆ ಗೋಷ್ಠಿ, ಉಪನ್ಯಾಸ, ಸಂವಾದ ಹಾಗೂ ಪ್ರಸಾರ ಕಾರ್ಯಕ್ರಮಗಳು ನಡೆಯುತ್ತವೆ.

ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಡಾ.ಚಂದ್ರಶೇಖರ ಕಾಳನ್ನವರ, ಕೋಶಾಧ್ಯಕ್ಷ ಡಾ.ಸಿ.ಎಂ.ಜೋಶಿ, ಸಂಘಟನಾ ಕಾರ್ಯದರ್ಶಿಗಳಾದ ಶಂಕರ ಹೂಲಿ, ಸಿ.ಎಸ್.ನಾಗನೂರ, ಬಾದಾಮಿ ತಾಲೂಕ ಕಸಾಪ ಅಧ್ಯಕ್ಷ ಬಿ.ಎಫ್.ಹೊರಕೇರಿ, ತಾಲೂಕ ಕಾರ್ಯದರ್ಶಿ ಮಹಾಂತೇಶ ಈಳಗೇರ, ರಾಮು ಸಾರವಾಡ, ಪಿ.ಎಸ್.ನೀಲಗುಂದ ಕೆರೂರು ಹೋಬಳಿ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಪೂಜಾರ ಮತ್ತು ಪದಾಧಿಕಾರಿಗಳು ಸರ್ವಾಧ್ಯಕ್ಷರ ಆಯ್ಕೆ ಸಂದರ್ಭದಲ್ಲಿದ್ದರು.

## ಜೂಜಾಟ:8 ಜನರ ಬಂಧನ

ಕಲಬುರಗಿ,ಮಾ.11–ಕಲಬುರಗಿ–ಜೇವರ್ಗಿ ಮುಖ್ಯ ರಸ್ತೆಯ ರೆಸ್ಟೋರಂಟ್ ಹತ್ತಿರದ ಸಾರ್ವಜನಿಕ ರಸ್ತೆಯ ಮೇಲೆ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಯಲ್ಲಪ್ಪ, ಅಶೋಕ ಕಟಕೆ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ 8 ಜನ ಜೂಜುಕೋರರನ್ನು ಬಂಧಿಸಿದ್ದಾರೆ. ಮಹ್ಮದ್ ಅಜರೋದ್ದಿನ್, ಸಂಗಪ್ಪ ನಾಟೀಕಾರ, ಸಿದ್ದಣಗೌಡ ಪೊಲೀಸ್ ಪಾಟೀಲ, ಮಹಾಂತೇಶ ಜಾಧವ, ಸುರೇಶ ಚವ್ಹಾಣ್, ಯಲ್ಲಪ್ಪ ಪೂಜಾರಿ, ಗಿರೀಶ ರಾಠೋಡ್, ವಿಜಯಕುಮಾರ ರಾಠೋಡ್ ಎಂಬುವವರನ್ನು ಬಂಧಿಸಿ 6,260 ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಚಿಮ್ಮೆಗಾಂವ:ಪವರ್ ಗ್ರಿಡ್ ಉಪ ಕೇಂದ್ರಕ್ಕೆ ಶಾಸಕ ಪ್ರಭು ಚವ್ಹಾಣ್ ದಿಢೀರ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಚಿಮ್ಮೇಗಾಂವ–ಮಾಳೆಗಾಂವ ಗ್ರಾಮಗಳ ವ್ಯಾಪ್ತಿಯಲ್ಲಿ ನಿರ್ಮಿಸಲಾಗುತ್ತಿರುವ ಪವರ್ ಗ್ರಿಡ್ ಉಪ ಕೇಂದ್ರಕ್ಕೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮಾರ್ಚ್ 9ರಂದು ದಿಢೀರ್ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.

ಕಾಮಗಾರಿ ಸ್ಥಳದಲ್ಲಿ ಸಂಚರಿಸಿ ಸ್ಥಳದಲ್ಲಿದ್ದ ಅಧಿಕಾರಿಗಳ ಮೂಲಕ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದರು. ನಂತರ ಟಾವರ್‌ಗಳ ನಿರ್ಮಾಣ, ಕಟ್ಟಡಗಳ ನಿರ್ಮಾಣ ಸ್ಥಳ ಮತ್ತು ಯಂತ್ರಗಳ ಬಳಿಗೆ ತೆರಳಿ ಗುಣಮಟ್ಟವನ್ನು ವೀಕ್ಷಿಸಿದರು.

ಬುನಾದಿ ಕಾಮಗಾರಿಯಲ್ಲಿ ಸರಿಯಾಗಿ ಕ್ಯೂರಿಂಗ್ ಮಾಡದ ಕಾರಣ ಸಿಮೆಂಟ್ ಎದ್ದು ಕಾಣುತ್ತಿದೆ. ಬೇಸಿಗೆ ಆರಂಭವಾಗಿದ್ದು, ಬಿಸಿಲು ದಿನೇ ದಿನೇ ಹೆಚ್ಚುತ್ತಿದೆ. ಆದರೂ ಸಿಮೆಂಟ್ ಕೆಲಸಗಳಿಗೆ ನೀರಿನ ಬಳಕೆ ಏಕೆ ಮಾಡುತ್ತಿಲ್ಲವೆಂದು ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡರು.

ನಾನು ಸಾಕಷ್ಟು ಪ್ರಯತ್ನಪಟ್ಟು 2147 ಕೋಟಿ ಮೊತ್ತದ 675 ಕೆ.ವಿ ಪವರ್ ಟ್ರಾನ್ಸ್ಮಿಷನ್ ಸಾಮರ್ಥ್ಯದ ಕರ್ನಾಟಕ ಮೊದಲ ಪವರ್ ಗ್ರಿಡ್ ವಿದ್ಯುತ್ ಉಪ ಕೇಂದ್ರವನ್ನು ಕ್ಷೇತ್ರಕ್ಕೆ ತಂದಿದ್ದೇನೆ. ಕೆಲಸ ಸರಿಯಾಗಿ ಮತ್ತು ಗುಣಮಟ್ಟದಿಂದ ಆಗಬೇಕು. ಶೀಘ್ರ ಪೂರ್ಣಗೊಳಿಸುವ ಭರದಲ್ಲಿ ಕೆಲಸ ಕಳಪೆ ಮಾಡಿದರೆ ಪರಿಣಾಮ ಎದುರಿಸಬೇಕಾಗುತ್ತದೆ. ಗುಣಮಟ್ಟದ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದರೆ ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲವೆಂದು ಎಚ್ಚರಿಸಿದರು.

ಪವರ್ ಗ್ರಿಡ್ ಉಪ ಕೇಂದ್ರದ ಸುತ್ತಲಿನ ರೈತರಿಗೆ ಓಡಾಡಲು ಹಿಂದಿನಿಂದಲೂ ಬಳಕೆ ಮಾಡುತ್ತಿದ್ದ ಕಾಲುದಾರಿ ಮುಚ್ಚಿದ್ದರಿಂದ ರೈತರು ತಮ್ಮ ಕೃಷಿ ಜಮೀನಿಗೆ ಹೋಗಲು 7–8 ಕಿ.ಮೀ ಸುತ್ತಾಡಿ–ಕೊಂಡು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ನನ್ನ ಬಳಿಗೆ ಬರುತ್ತಿದ್ದಾರೆ. ಈ ಸಮಸ್ಯೆಗೆ ತಹಸೀಲ್ದಾರರ ಸಹಾಯ ಪಡೆದು ಪರಿಹಾರ ಕಂಡುಕೊಳ್ಳಬೇಕು. ರೈತರಿಗೆ ಯಾವುದೇ ರೀತಿಯ ಸಮಸ್ಯೆ ಮಾಡಬಾರದೆಂದು ಹೇಳಿದರು.

ಸ್ಥಳೀಯರಿಗೆ ಅನುಕೂಲವಾಗಬೇಕೆಂಬ ಉದ್ದೇಶದಿಂದ ಸಾಕಷ್ಟು ಪ್ರಯತ್ನಪಟ್ಟು ಯೋಜನೆಯನ್ನು ಕ್ಷೇತ್ರಕ್ಕೆ ತಂದಿದ್ದೇನೆ. ಆದರೆ ಕೆಲಸಗಾರರನ್ನು ಬೇರೆಡೆಯಿಂದ ತರುತ್ತಿರುವ ಬಗ್ಗೆ ಜನತೆ ಹೇಳುತ್ತಿದ್ದಾರೆ. ಕೆಲಸಗಾರರ ನೇಮಕಾತಿಯಲ್ಲಿ ಕಮಲನಗರ ಮತ್ತು ಔರಾದ(ಬಿ) ತಾಲ್ಲೂಕಿನವರಿಗೆ ಮೊದಲ ಆದ್ಯತೆ ನೀಡಬೇಕು.

ತಾಂತ್ರಿಕ ಸಿಬ್ಬಂದಿಗಳು ಸ್ಥಳೀಯರು ಲಭ್ಯವಿಲ್ಲದ ಪಕ್ಷದಲ್ಲಿ ಬೇರೆಯರವನ್ನು ತರಬಹುದು. ಆದರೆ ಸ್ಥಳೀಯರಿಗೆ ಮೊದಲ ಆದ್ಯತೆ ನೀಡಬೇಕು. ಯೋಜನೆಗೆ ಜಮೀನು ನೀಡಿದ ರೈತರಿಗೆ ಅನುಕೂಲವಾಗುವಂತೆ ನೋಡಿಕೊಳ್ಳಬೇಕು. ಕಾಮಗಾರಿ ಸ್ಥಳದಲ್ಲಿ ಟ್ರ್ಯಾಕ್ಟರ್, ಟಿಪ್ಪರ್, ಜೆಸಿಬಿ, ನೀರಿನ ಟ್ಯಾಂಕ್ ಹೀಗೆ ವಿವಿಧ ಯಂತ್ರಗಳನ್ನು ಬಾಡಿಗೆಗೆ ಪಡೆದು ಕೆಲಸ ಮಾಡಲಾಗುತ್ತಿದೆ. ಇವುಗಳನ್ನು ಸ್ಥಳೀಯರಿಂದಲೇ ಪಡೆದು ಇವರಿಗೆ ಅನುಕೂಲ ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಪವರ್ ಗ್ರಿಡ್ ಕಾರ್ಪೋರೇಷನ್ ಲಿಮಿಟೆಡ್‌ನ ಡೆಪ್ಯೂಟಿ ಜನರಲ್ ಮ್ಯಾನೇಜರ್ ಗಣೇಶ ಅವರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಕಾಮಗಾರಿ ಸ್ಥಳಕ್ಕೆ ಖುದ್ದಾಗಿ

# ಇಲಕಲ್ಲಡ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಕಾಮಗಾರಿ ಪರಿಶೀಲನೆ ಮಾಡಿದ ಜಿಲ್ಲಾ ಪಂಚಾಯತ್ ಸಿಇಓ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:–2025–26ನೇ ಸಾಲಿನ ನರೇಗಾ ಕ್ರಿಯಾಯೋಜನೇಯಲ್ಲಿನ ಕಾಮಗಾರಿಗಳ ಅಳವಡಿಕೆಯ ಸ್ಥಳವನ್ನು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ದಿನಾಂಕ:10–03–2025ರಂದು ಭೇಟಿ ನೀಡಿ ಪರಿಶೀಲಿಸಿದರು. 2025–26ನೆ ಸಾಲಿನ ಮಹಾತ್ಮಾ ಗಾಂಧಿ ನರೇಗಾ ಕ್ರಿಯಾ ಯೋಜನೆಯಲ್ಲಿ ಅಳವಡಿಸಲಾದ ಇರಕಲಗಡಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಚಾಮಲಾಪುರ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಕಾಂಪೌಂಡ್, ಯಲಮಗೇರಿ ಗ್ರಾಮದ ಚೆಕ್ ಡ್ಯಾಮ್ ಅಭಿವೃದ್ಧಿ,ಹನಮನಹಟ್ಟಿ ಗ್ರಾಮದ ಶಂಕ್ರಪ್ಪ ಇವರ ಮನೆ ಮುಂದೆ ಬಚ್ಚಲಗುಂಡಿ ಕಾಮಗಾರಿಗಳನ್ನು ಅನುಷ್ಠಾನಿಸಲು ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡಿರುವ ಪೂರ್ವ ಸ್ಥಳ ಪರಿಶೀಲಿಸಿದರು. ಕಾಮಗಾರಿ ಅನುಷ್ಠಾನಿಸಲು ಸ್ಥಳ ಆಯ್ಕೆ ಹೇಗೆ ಮಾಡಿಕೊಂಡಿದ್ದಾರೆ ಮತ್ತು ಕಾಮಗಾರಿ ಅನುಷ್ಠಾನಿಸುವದು ಅವಶ್ಯಕತೆ ಇದೆಯೆ ಎಂಬುದರ ಬಗ್ಗೆ ವೀಕ್ಷಿಸಿದರು. ನರೇಗಾ ಕಾಮಗಾರಿಗಳ ಪರಿಶೀಲನೆ

ಗ್ರಾಮ ಪಂಚಾಯತಿಯಿಂದ ಅನುಷ್ಠಾನಗೊಂಡ ಹನಮನಹಟ್ಟಿ ಗ್ರಾಮದ ಶಾಲಾ ಕಂಪೌಂಡ ಕಾಮಗಾರಿ, ಯಲಮಗೇರಿ ಗುಡ್ಡದಲ್ಲಿರುವ ಜಿನ್ನಾಪುರ ಹನಮಂತ ದೇವಸ್ಥಾನದ ಹತ್ತಿರ ಪ್ರಾದೇಶಿಕ ಅರಣ್ಯ ಇಲಾಖೆಯಿಂದ ಪ್ರಗತಿಯಲ್ಲಿರುವ ಮಣ್ಣು–ನೀರು ಸಂರಕ್ಷಣಾ ಕಾಮಗಾರಿ(ಖಒಅ), ಸಾಮಾಜಿಕ ಅರಣ್ಯ ಇಲಾಖೆಯ ಸಂಘ–ಸಂಸ್ಥೆಗಳಲ್ಲಿ ಸಸಿ ನೆಟ್ಟ ಕಾಮಗಾರಿ ಪರಿಶೀಲಿಸಿದರು.

*ಪ್ರಾಥಮಿಕ ಶಾಲೆಗೆ ಭೇಟಿ*:– ಚಾಮಲಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿರುವ ಮಕ್ಕಳ ಕಲಿಕಾ ಮಟ್ಟ ವೀಕ್ಷಿಸಿದರು. ಮಕ್ಕಳಿಗೆ ಮೊಟ್ಟೆ, ಆಹಾರ ವಿತರಣೆ ಕುರಿತು ಮಕ್ಕಳೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ADPC ಮಹಾಂತಸ್ವಾಮಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ತೆಳಗಡೆಮಠ, ಖಿಅ ಯಮನೂರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಸಾಮಾಜಿಕ ಅರಣ್ಯ ಉಪ ವಲಯ ಅರಣ್ಯಾಧಿಕಾರಿ ಅಬ್ದುಸಮಿ, ಪ್ರಾದೇಶಿಕ ಅರಣ್ಯ ಇಲಾಖೆಯ ಉಪ ವಲಯ ಅರಣ್ಯಾಧಿಕಾರಿ ಲಿಂಗರಾಜ ಕನ್ನಾಳ, ಗಸ್ತು ಅರಣ್ಯ ಪಾಲಕ ಸಂತೋಷ ಹಾವನೂರು, SDAA ರೇಣುಕಾ, ಖಿಂಇ ಮಲ್ಲಿಕಾರ್ಜುನ ಮೆಗಳಮನಿ, ತಾಂತ್ರಿಕ ಸಹಾಯಕಿ ನೇತ್ರಾವತಿ, ಸರಸ್ವತಿ, ಬೇರ್ ಫೂಟ್ ಟೆಕ್ನಿಷಿಯನ್ ರವಿಶಂಕರ ಪೂಜಾರ, ಕರವಸೂಲಿಗಾರ ಕೊಟ್ರೇಶ್ ಹಾಜರಿದ್ದರು.

# ಜೆಸ್ಕಾಂ ಗ್ರಾಮೀಣ; ಮಾ.14ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.11– ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಯ 110/11 ಕೆವಿ ಮಟಮಾರಿ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡ ಪ್ರಯುಕ್ತ ಮಾ.14ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 4ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 10ಗಂಟೆಯಿಂದ ಮಟಮಾರಿ ಉಪಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಗಳೂರಿನಲ್ಲೂ

## ಬಾಗಲಕೋಟೆ ಹಲಗೆ ಸಂಭ್ರಮ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.11-ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಮೊದಲ ಬಾರಿಗೆ ಐತಿಹಾಸಿಕ, ಸಾಂಸ್ಕೃತಿಕ ಮತ್ತು ಜಾನಪದ ಬಾಗಲಕೋಟೆ ಹೋಳಿ ಹಲಗೆ ಮೇಳ ವಿಜೃಂಭಣೆಯಿಂದ ಜರುಗಿತು.

ಹಲಗೆ ಮೇಳದಲ್ಲಿ 2000 ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು, ಬಾಗಲಕೋಟೆಯ ಎರಡು ತಂಡಗಳು ಹಲಗೆ ಸಂಗೀತ ವಾದ್ಯವನ್ನು ನುಡಿಸಿದವು, ಶಹನಾಯಿ, ಕಣಿ ಮತ್ತು ಜುಮ್ಮರ್ ಜೊತೆಗೂಡಿದವು. 16 ಜನರ ತಂಡ ಪ್ರದರ್ಶಿಸಿದ ಗೂಸ್‌ಬಂಪ್ ಸಂಗೀತವು ಪ್ರೇಕ್ಷಕರನ್ನು ಆಕರ್ಷಿಸಿತು. ಹಲಗೆಯ ಜಾನಪದ ಸಂಗೀತಕ್ಕೆ ಜನ ನೃತ್ಯ ಮಾಡಿದರು.

ಬಾಗಲಕೋಟೆಯವರಾದ ಮಾಜಿ ಸಚಿವ ಅರವಿಂದ ಲಿಂಬಾವಳಿ ಹಾಗೂ ಮಹಾಲಕ್ಷ್ಮಿ ಲೇಔಟ್ ಶಾಸಕ ಗೋಪಾಲಯ್ಯ, ಮಾಜಿ ಶಾಸಕ ನೆ.ಲ.ನರೇಂದ್ರಬಾಬು, ರಾಜಾಜಿನಗರ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಎಸ್.ಹರೀಶ್ ಮತ್ತು ಬಿಜೆಪಿಯ ಮಾಜಿ ರಾಜ್ಯ ಕಾರ್ಯದರ್ಶಿ ಜಗದೀಶ್ ಹಿರೇಮನಿ ಮೇಳವನ್ನು ಉದ್ಘಾಟಿಸಿದರು.

ಬಾಗಲಕೋಟೆಯಲ್ಲಿ ಹೋಳಿ ಹಬ್ಬ ಅತ್ಯಂತ ವೈಭವಯುತವಾಗಿ ನಡೆಯುತ್ತಿದ್ದು, ಸಾವಿರಾರು ಜನರನ್ನು ಆಕರ್ಷಿಸುತ್ತದೆ. ಬಾಗಲಕೋಟೆ ಹೋಳಿ ಆಚರಣೆಯನ್ನು ಬೆಂಗಳೂರಿಗೆ ತರುವ ದೂರದೃಷ್ಟಿಯನ್ನು ಸಂಘಟಕರು ಹೊಂದಿದ್ದಾರೆ. ಇದರಿಂದಾಗಿ ಮುಂಬರುವ ವರ್ಷಗಳಲ್ಲಿ ವಲಸಿಗರು ಈ ಹಬ್ಬದ ಕಾರ್ಯಕ್ರಮವನ್ನು ತಪ್ಪಿಸಿಕೊಳ್ಳಬಾರದು ಎಂದು ಅರವಿಂದ ಲಿಂಬಾವಳಿ ಹೇಳಿದರು.

ಹಲಗೆಮೇಳವನ್ನು ಸಂಗಮೇಶ ಹದ್ಲಿ, ನಾಗರಾಜ್ ಹುಂಡೇಕಾರ, ಬದರಿ ಕಾಕಂಡಕಿ, ಶ್ರೀಶೈಲ ಜಿಗಜಿನ್ನಿ, ಅನಂತ ದೋಂಗಡಿ, ಈಶ್ವರ ಇಂಡಿ, ಮದನ, ಪ್ರಭು ಇಂಡಿ, ಸಂದೀಪ ಕುಲಕರ್ಣಿ, ಸಂತೋಷ ಹೊಸೂರ ಮತ್ತು ಅನಿರುದ್ಧ ಜೋಶಿ ಆಯೋಜಿಸಿದ್ದರು.

# ಔರಾದ್ ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡುವಂತೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಔರಾದ್:ಮಾ.11:ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಔರಾದ ಘಟಕದ ವತಿಯಿಂದ ಪಟ್ಟಣದ ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡುವಂತೆ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಘಟಕ ವ್ಯವಸ್ಥಾಪಕರದ ರಾಜೇಂದ್ರ ರೆಡ್ಡಿ ರವರಿಗೆ ಗಮನ ಸೂಚಿಸಿದ್ದೇವೆ.

ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ ) ಔರಾದನ ಕಾರ್ಯಕರ್ತರು ಔರಾದನ ಸಾರಿಗೆ ವ್ಯವಸ್ಥೆ ಘಟಕ ವ್ಯವಸ್ಥಾಪಕರ ಕಛೇರಿಗೆ ಧಿಡೀರನೆ ಭೇಟಿ ನೀಡಿ ಬಸ್ ನಿಲ್ದಾಣದ ಅವ್ಯವಸ್ಥೆ ಕುರಿತು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೂಡಲೆ ಘಟಕ ವ್ಯವಸ್ಥಾಪಕರೊಂದಿಗೆ ಸೇರಿ ಬಸ್ ನಿಲ್ದಾಣದ ವ್ಯವಸ್ಥೆ ಮತ್ತು ಸ್ವಚ್ಚತೆ ಬಗ್ಗೆ ವೀಕ್ಷಣೆ ಚಲಾಯಿಸಿದರು. ಇದೇ ವೇಳೆ ವಿದ್ಯಾರ್ಥಿ ಮುಖಂಡರಾದ ರಾಹುಲ ಜಾಧವ ರವರು ಅಧಿಕಾರಿಗಳಿಗೆ ಸೌಚಾಲಯ ಕೋಣೆಯಲ್ಲಿರುವ ಮೂತ್ರವಿಸರ್ಜನೆ ಖಾನೆಗೆ ಕರೆದುಕೊಂಡ ಹೋಗಿ ಹಚ್ಚತೆ ಹದಗೆಟ್ಟಿದೆ ಎಂದು ಕಿಡಿ ಕಾರಿ ತಕ್ಷಣವೆ ವ್ಯವಸ್ಥೆ ಸುಧಾರಿಸುವಂತೆ ಎಚ್ಚರಿಕೆ ನೀಡಿದಾರೆ.ಈ ಸಂದರ್ಭದಲ್ಲಿ ಬಸ್ ನಿಲ್ದಾಣದ ಉಸ್ತುವಾರಿ ಅಧಿಕಾರಿಗಳಾದ ಅಣ್ಣಾರಾವ್ ಧೂಳ್ಗಂಡೆ ರವರು ಘಟಕ ವ್ಯವಸ್ಥಾಪಕ ರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಸ್ವಚ್ಛತಾ ಸಿಬ್ಬಂದಿಗಳಿಗೆ ಕಡಕ್ಕಾಗಿ ಎಚ್ಚರಿಕೆ ನೀಡಿ ಬಸ್ ನಿಲ್ದಾಣದ ಸ್ವಚ್ಛತಾ ವ್ಯವಸ್ಥೆ ಕಾಪಾಡುವಂತೆ ಆಶ್ವಾಸನೆ ನೀಡಿದ್ದಾರೆ ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ತಾಲೂಕಾಧ್ಯಕ್ಷರಾದ ಬಾಲಾಜಿ ದಾಮ,ರಾಹುಲ್ ಜಾದವ್,ರಾಹುಲ್ ಅನೀಲ್ ಲಾವಲ್ಕರ,ಬೋರ್ಗೆ,ಸುನಿಲ್,ಪವನ್ ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಹೋಳಿ ಹಬ್ಬ ನಿಮಿತ್ಯ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.11: ಬೀದರ ಜಿಲ್ಲೆಯಲ್ಲಿ ಹೋಳಿ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಹಬ್ಬ ಆಚರಣೆ ಕಾಲಕ್ಕೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಠಿಯಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಬೀದರ, ಹುಮನಾಬಾದ,ಬಸವಕಲ್ಯಾಣ,



ಔರಾದ್(ಬಿ), ಕಮಲನಗರ, ಹುಲಸೂರ ಹಾಗೂ ಚಿಟಗುಪ್ಪಾ ತಾಲ್ಲೂಕುಗಳಾದ್ಯಂತ ಮಾರ್ಚ.13 ರ ಸಾಯಂಕಾಲ 6 ಗಂಟೆಯಿಂದ ಮಾರ್ಚ.14 ರ ಮಧ್ಯರಾತ್ರಿ 12 ಗಂಟೆಯವರೆಗೆ ಹಾಗೂ ಭಾಲ್ಕಿ ತಾಲ್ಲೂಕಿನಾದ್ಯಂತ ಮಾರ್ಚ.13 ರ ಸಾಯಂಕಾಲ 6 ಗಂಟೆಯಿಂದ ಮಾರ್ಚ.15 ರ ಮಧ್ಯರಾತ್ರಿ 12 ಗಂಟೆಯವರೆಗೆ ಎಲ್ಲಾ ವಿಧದ ಮದ್ಯದಂಗಡಿಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಆದೇಶಿಸಿದ್ದಾರೆ.

# ಎಲ್ಲ ಕ್ಷೇತ್ರಗಳಲ್ಲಿ ಮಹಿಳೆ ಮೇಲುಗೈ : ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಔರಾದ :ಮಾ.11: ಮಹಿಳೆ ಜಗತ್ತಿನ ಅದ್ಭುತ ಶಕ್ತಿಯಾಗಿದ್ದು, ಸರಕಾರಿ ಸೇವೆ ಮಾಡುವ ಮಹಿಳೆಯರು ಕುಟುಂಬ ಹಾಗೂ ಕಚೇರಿ ಎರಡನ್ನು ಸರಿದೂಗಿಸಿಕೊಂಡು ಹೊಗುತ್ತಾರೆಂದು ತಸಿಲ್ದಾರ್ ಮಲಶೆಟ್ಟಿ ಚಿದ್ರೆ ಅಭಿಪ್ರಾಯಪಟ್ಟರು.

ರೈತ ಸಂಪರ್ಕ ಕೇಂದ್ರ ಸಭಾಂಗಣದಲ್ಲಿ ಇಂದು ಎಲ್ ಆಂಡ್ ಟಿ, ಫೈನಾನ್ಸ್,ಎಕ್ಸೆಸ್ ಲೈವ್‌ಲೀಹೂಡ್ಸ್-ಡಿಜಿಟಲ್ ಸಖಿ ಯೋಜನೆ ಬೀದರ್ ಮತ್ತು ಕಲಬುರಗಿ ದಿಂದ ಏರ್ಪಡಿಸಲಾದ ವಿಶೇಷ ಮಹಿಳಾ ದಿನಾಚರಣೆಯಲ್ಲಿ ಅವರು ಮಾತನಾಡುತ್ತಾ,

ಕೆಲಸ ಮಾಡುವ ಮಹಿಳೆಯರು ಕಚೇರಿಗೆ ಬರುವ ಮುನ್ನ ಮನೆಯಲ್ಲಿಯ ಎಲ್ಲ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಿ ಕಚೇರಿಗೆ ಹಾಜರಾಗುತ್ತಾರೆ. ಸರಕಾರಿ ಸೇವೆಯ ಮಾಸಿಕ ವೇತನ ಆರ್ಥಿಕತೆಯ ದೃಷ್ಟಿಯಿಂದ ಪರಿಗಣಿಸಲಾಗುತ್ತದೆಯಾದರೂ ಅವರ ಕೌಟುಂಬಿಕ ಮನೆಗೆಲಸ ಲೆಕ್ಕಕ್ಕೆ ಬರುವುದಿಲ್ಲ. ಅಡುಗೆ, ಮನೆಗೆಲಸ ಮಾಡಿ ಕಚೇರಿಗೆ ಬರುವ ಮಹಿಳೆಯರ ಸೇವೆ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಆರತಿ ಪಾಟೀಲ್ ಸಹಾಯಕ ಕೃಷಿ ನಿರ್ದೇಶಕರು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಔರಾದ ಇವರು ಮಾತನಾಡುತ್ತಾ ಎಲ್ಲ ಕ್ಷೇತ್ರಗಳಲ್ಲೂ ಇಂದು ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ, ಮಹಿಳೆಯರು ತಮ್ಮ ಪೂರ್ಣ ಸಾಮರ್ಥ್ಯವನ್ನು ಸಾಧಿಸಲು ಮತ್ತು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸೇರಿದಂತೆ ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ಶಕ್ತಿ ಮತ್ತು ಸಂಪನ್ಮೂಲಗಳನ್ನು ಒದಗಿಸುವುದು ನಮ್ಮೆಲ್ಲರ ಕರ್ತವ್ಯ ವಾಗಿದೆ ಎಂದು ತಿಳಿಸಿದ್ದರು

ಮಹಿಳೆ ಇಂದು ಜಗತ್ತಿನ ಗ್ರಾಮೀಣ ಮಹಿಳೆಯರು ಸೇರಿದಂತೆ ಮಹಿಳೆಯರ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕೆ ಸರ್ಕಾರವು ಹೆಚ್ಚಿನ ಆದ್ಯತೆ ನೀಡುತ್ತದೆ. ಪ್ರತಿಯೊಂದು ಕ್ಷೆ?ತ್ರಗಳಲ್ಲೂ ಹೆಣ್ಣು ತನ್ನ ಇರುವಿಕೆಯನ್ನು ಸ್ಪಷ್ಟಪಡಿಸುತ್ತಲೇ ಬಂದಿದ್ದಾಳೆ. ಆಟೋ ರೀಕ್ಷಾದಿಂದ ಹಿಡಿದು ಬಾಹ್ಯಾಕಾಶದವರೆಗೂ ತನ್ನ ಸಾಧನೆ ವಿಸ್ತರಿಸಿದ್ದಾಳೆ. ಆದ್ದ-ರಿಂದ ಹೆಣ್ಣನ್ನು ಎಂದಿಗೂ ಕಡೆಗಣಿಸದೆ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಮಂಗಲಾ ಭಾಗವತ್ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಅಂಚೆ ಇಲಾಖೆ ಅವರು ಮಾತನಾಡಿ ಮಹಿಳೆಯರು ಇಂದು ಎಲ್ಲಾ ಕ್ಷೇತ್ರದಲ್ಲೂ ಸಾಧನೆ ಮಾಡುತ್ತಿದ್ದಾಳೆ, ಸಮಾಜಕ್ಕೆ ಸ್ಪೂರ್ತಿಯಾಗಿದ್ದಾಳೆ, ಸಮಾನ ಹಕ್ಕುಗಳನ್ನು ಪಡೆಯುತ್ತಿದ್ದಾಳೆ, ನ್ಯಾಯಕ್ಕಾಗಿ ಹೋರಾಡುತ್ತಾಳೆ, ಲಕ್ಷಾಂತರ ಮಹಿಳೆಯರನ್ನು ಪ್ರೇರೇಪಿಸುತ್ತಿದ್ದಾಳೆ.

ಹೆಣ್ಣು ಸಮಾಜದ ಕಣ್ಣಾಗಿ ಮಹಿಳೆಯರು ಇಂದು ಎಲ್ಲ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿ ಸಾಧನೆ ಮಾಡುತ್ತಿದ್ದಾರೆ ಇದು ಇಡಿ ಮಹಿಳೆಯರು ಹೆಮ್ಮೆಯ ವಿಷಯ ಎಂದರು.

ಈ ವೇಳೆ ಮಹಮದ್ ಸಿರಾಜ, ವಕೀಲರಾದ ಮಿನಾಕ್ಷಿ ಪಾಂಚಾಳ, ಮಾತನಾಡಿದರು.

ಈ ಸಂದರ್ಭದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಅಂಬಿಕಾದೇವಿ ಕೋತಮೀರ, ಬೀದರ/ಕಲ್ಬುರ್ಗಿ ಡಿಜಿಟಲ್ ಸಖಿ ಯೋಜನೆ ವ್ಯವಸ್ಥಾಪಕ ಮಹಮ್ಮದ ಸಿರಾಜ್,

ಪ್ರಿಯಾಂಕಾ, ಕರ್ನಾಟಕ ಮೀಡಿಯಾ ಜನರಲಿಸ್ಟ್ ಯೂನಿಯನ್ ಅಧ್ಯಕ್ಷರು ಸಂತೋಷ ಚಾಂಡೆಶ್ವರೆ, ಅಮರಸ್ವಾಮಿ ಸ್ಥಾವರಮಠ, ಡಿಜಿಟಲ್ ಸಖಿಯರಾದ ಸಂಗೀತಾ, ದೇವಿಕಾ, ರೂತಮ್ಮ, ಸು-ರೇಖಾ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ವಚನಗಳಿಂದ ಮನಕ್ಕಂಟಿದ ಮಲೀನತೆ ದೂರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.11: ವಚನ ಗಂಗೆಯಲ್ಲಿ ಮಿಂದೆದ್ದರೆ ಮನಕ್ಕಂಟಿದ ಮಲೀನತೆ ದೂರವಾಗುತ್ತದೆ. ಮನಸ್ಸು ಪರಿಶುದ್ಧವಾಗಿ ಮನೆಯಲ್ಲಿ ಬೆಳಕು ಹರಿಯುತ್ತದೆ ಎಂದು ಪ್ರಾಚಾರ್ಯ ವಿಷ್ಣುಕಾಂತ ಕೋಟೆ ಹೇಳಿದರು.ಪಟ್ಟಣದ ಗುರುಪ್ರಸನ್ನ ಡಿಗ್ರಿ ಕಾಲೇಜಿನಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಮಂಗಳವಾರ ಆಯೋಜಿಸಿದ್ದ ಸಂಗಮ್ಮ ಶಿವಪ್ಪ ಪಾಟೀಲ್ ಮತ್ತು ರಾಜಮ್ಮ ಬಸಪ್ಪ ದತ್ತಿ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಧುನಿಕತೆ ಬೆಳೆದಂತೆ ಮನುಷ್ಯನ ಹೃದಯವಂತಿಕೆ ಸಂಕೂಚಿತಗೊಳ್ಳುತ್ತಿದೆ, ಸ್ವಾರ್ಥತೆ ಹೆಚ್ಚಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. ಇವುಗಳಿಂದ ಹೊರಬರಲು ಪ್ರತಿಯೊಬ್ಬರು ತಮ್ಮ ವೈಯಕ್ತಿಕ ಜೀವನದಲ್ಲಿ ಬಸವಾದಿ ಶರಣ ವಚನಗಳು ಅರ್ಥೈಸಿಕೊಂಡು ಅದರಂತೆ ಬದುಕು ಸಾಗಿಸಬೇಕು ಎಂದು ಸಲಹೆ ನೀಡಿದರು.

ನಿವೃತ್ತ ಶಿಕ್ಷಕ ಕಿಶನರಾವ ಜಾಧವ ಮಾತನಾಡಿ, ಶರಣ ಸಂಸ್ಕೃತಿ ಕರೆದುಣ್ಣುವ, ಹಂಚಿ ತಿನ್ನುವ, ಕೂಡಿ ಬಾಳುವ ಶ್ರೇಷ್ಠತೆಯಿಂದ ಕೂಡಿದೆ. ಪರಸ್ಪರ ಪ್ರೀತಿ, ವಿಶ್ವಾಸ, ಗೌರವ ನೀಡುವ ಉದಾತ್ತ ಧರ್ಮವನ್ನೊಳಗೊಂಡಿದೆ ಎಂದು ತಿಳಿಸಿದರು.

ಸಂಸ್ಥೆಯ ಆಡಳಿತಾಧಿಕಾರಿ ಬಾಲರಾಜ ಶಿವಣಗೆ ಕಾರ್ಯಕ್ರಮ ಉದ್ಘಾಟಿಸಿದರು. ಕಾಶಿನಾಥ ಭೂರೆ ವಚನ ದೀಕ್ಷೆ ಬೋಧಿಸಿದರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಆಶಯ ನುಡಿ ನುಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಗುಂಡಪ್ಪ ಸಂಗಮಕರ, ಸಂತೋಷ ಹಡಪದ ಸೇರಿದಂತೆ ಹಲವರು ಇದ್ದರು. ವೀರಣ್ಣ ಕುಂಬಾರ ವಚನ ಗಾಯನ ನಡೆಸಿ ಕೊಟ್ಟರು.

# ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.11: ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ ಆರಂಭಕ್ಕೆ ದಿನಗಣನೇ ಶುರುವಾಗಿದ್ದು ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ ಯಶಸ್ಸು ಕಂಡು ಕೊಳ್ಳಬೇಕು ಎಂದು ಖಡಕೇಶ್ವರ ವಿದ್ಯಾ ಸಂಸ್ಥೆಯ ಅಧ್ಯಕ್ಷ ಸುಧೀರ ನಾಯಕ ಹೇಳಿದರು.ಪಟ್ಟಣದ ಲೆಕ್ಚರ್ ಕಾಲೋನಿಯ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ 2024-25ನೆಯ ಸಾಲಿನ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ (ದಿಕ್ಷಾಂತ) ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಮುಂದಿನ ಭವಿಷ್ಯವನ್ನು ನಿರ್ಧರಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಶ್ರದ್ಧೆ, ಭಕ್ತಿಯಿಂದ ವಿದ್ಯಾಭ್ಯಾಸದಲ್ಲಿ ತೊಡಗಿಸಿಕೊಂಡು ಪರೀಕ್ಷೆಯನ್ನು ಧೈರ್ಯದಿಂದ ಎದುರಿಸಿ ಹೆಚ್ಚು ಅಂಕ ಗಳಿಸಿ ಕಲಿತ ವಿದ್ಯಾ ಸಂಸ್ಥೆ ಮತ್ತು ಹೆತ್ತವರಿಗೆ ಗೌರವ ತಂದು ಕೊಡಬೇಕು ಎಂದು ಕಿವಿಮಾತು ಹೇಳಿದರು.ಎಂಆರ್‌ಎ ಕಾಲೇಜಿನ ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ, ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೇ ಓದಿನ ಕಡೆಗೆ ಹೆಚ್ಚಿನ ಗಮನ ಹರಿಸಬೇಕು ಎಂದು ತಿಳಿಸಿದರು.

ಮುಖ್ಯಗುರು ಆನಂದ ಕಲ್ಯಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪತ್ರಕರ್ತ ದೀಪಕ ಠಮಕೆ, ಸಂಸ್ಥೆಯ ಕೋಶಾಧ್ಯಕ್ಷ ಪ್ರಭುರಾವ ಧೂಪೆ, ನಿರ್ದೇಶಕ ಅಶೋಕ ಲೋಖಂಡೆ, ರೇಕು ನಾಯಕ, ಉದಯ ಜೋಶಿ, ಶುಭಂ ರಾಯವಾಡೆ ಸೇರಿದಂತೆ ಹಲವರು ಇದ್ದರು. ಅಂಜಲಿ ಜೋಶಿ ಸ್ವಾಗತ ಗೀತೆ ಹಾಡಿದರು. ಜಯಪ್ರಕಾಶ ಸಹಾನೆ ಸ್ವಾಗತಿಸಿದರು. ಪ್ರಕಾಶ ರುದನೂರೆ ನಿರೂಪಿಸಿದರು. ದಿಲೀಪಕುಮಾರ ಘಂಟೆ ವಂದಿಸಿದರು.

# ಪಂಚ್ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಅಧಿಕಾರಿಗಳು ಶ್ರಮವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.11:ರಾಜ್ಯ ಸರ್ಕಾರದ ಐದು ಗ್ಯಾರೆಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾ ಪಂಚ್ ಗ್ಯಾರಂಟಿ ಯೋಜನೆ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರದಂದು ಹೊಸ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷತೆ ವಹಿಸಿ ಮಾತನಾಡಿದರು. 2024-25ನೇ ಸಾಲಿನ ಗೃಹಲಕ್ಷ್ಮೀ ಯೋಜನೆ, ಶಕ್ತಿಯೋಜನೆ, ಯುವನಿಧಿ ಯೋಜನೆಯ ಅನ್ನಭಾಗ್ಯ ಯೋಜನೆ, ಗೃಹ ಜ್ಯೋತಿ ಯೋಜನೆಗಳ ಪ್ರಗತಿ ಪರಿಶೀಲನೆ ಕುರಿತು ಮಾಹಿತಿಯನ್ನು ಪಡೆದು ಸಭೆಯಲ್ಲಿ ಮಾತನಾಡಿದರು.

ಸರಕಾರ ಪಂಚ ಗ್ಯಾರೆಂಟಿ ಯೋಜನೆಗಳಲ್ಲಿ ಗೃಹ ಲಕ್ಷ್ಮೀ ಯೋಜನೆ ಮುಖಾಂತರ ಮಹಿಳೆಯರ ಖಾತೆಗೆ ಪ್ರತಿ ತಿಂಗಳು 2000 ರೂಪಾಯಿ ಹಣವನ್ನು ಮಹಿಳೆಯರ ಖಾತೆ ಹಾಕಲಾಗುತ್ತಿದೆ. ಇದರ ಮುಖ್ಯ ಉದ್ದೇಶ ಮಹಿಳೆಯರು ಆರ್ಥಿಕವಾಗಿ ಸಾಮಾಜಿಕವಾಗಿ ಸ್ವಾಲಂಬಿಗಳಾಗುವಂತೆ ಮಾಡುವ ಉದ್ದೇಶದಿಂದ ಸರ್ಕಾರ ಪಂಚ್ ಗ್ಯಾರೆಂಟಿ ಯೋಜನೆ ನೀಡಿದೆ.

ಒಂದು ಕುಟುಂಬದಲ್ಲಿ ಇಬ್ಬರು ಮಹಿಳೆಯರು ಗೃಹ ಲಕ್ಷ್ಮೀ ಹಣವನ್ನು ಪಡೆಯುತ್ತಿದ್ದು, ಇಂಥಹ ಅಕ್ರಮಗಳನ್ನು ಇಲಾಖೆ ಅಧಿಕಾರಿಗಳು ಪತ್ತೆ ಹಚ್ಚಬೇಕು ಅದಕ್ಕೆ ಪ್ರತಿಕ್ರಿಯಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ ಈ ಕುರಿತು ಮಾಹಿತಿಯನ್ನು ಪಡೆದುಕೊಂಡು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಪ್ರತಿಕ್ರಿಯಿಸಿದರು.

ಗೃಹ ಲಕ್ಷ್ಮೀ ಯೋಜನೆ ಅಡಿಯಲ್ಲಿ ಸರ್ಕಾರ 67 ಕೋಟಿ 40 ಲಕ್ಷ 34,000 ಸಾವಿರ ಹಣವನ್ನು ಗೃಹ ಲಕ್ಷ್ಮೀ ಯೋಜನೆ ಬಳಸಲಾಗಿದೆ ಎಂದರು.

ಗೃಹ ಜ್ಯೋತಿ ಯೋಜನೆ ಅಡಿಯಲ್ಲಿ 200 ಯುನಿಟ್‌ಗಿಂತ ಕಡಿಮೆ ಬಳಕೆ ಮಾಡಿದ್ದಾರೆ ಫಲಾನುಭವಿಗಳು ಇದರ ಲಾಭವನ್ನು ಪಡೆಯಬಹುದು ಎಂದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಮಾತನಾಡಿ, ತಾಲೂಕು ಮತ್ತು ಗ್ರಾಮೀಣ ಮಟ್ಟದಲ್ಲಿ ಅಂಗನವಾಡಿ, ಕಾರ್ಯಕತೆ-ಯರು ಮಹಿಳೆಯರಿಗೆ ಪಂಚ್ ಗ್ಯಾರೆಂಟಿ ಯೋಜನೆಗಳ ಕುರಿತು ಮಾಹಿತಿ ನೀಡಬೇಕು. ಎಂದು ಹೇಳಿದರು.

ರೇಷನ್ ಕಾರ್ಡ್ ಆಧಾರಕಾರ್ಡ ತಿದ್ದುಪಡಿಯಂತಹ ಇ.ಕೆ.ವೈಸಿ ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಿ ಪ್ರತಿಯೊಬ್ಬ ಮಹಿಳೆಯರು ಈ ಯೋಜನೆ ಲಾಭವನ್ನು ಪಡೆದುಕೊಳ್ಳಬೇಕೆಂದರು.

ಕಲಬುರಗಿ ವಿಭಾಗೀಯ ನಿಯಂತ್ರಣಾಧಿಕಾರಿ ಚಂದು ಮಾತನಾಡಿ, ಶಕ್ತಿ ಯೋಜನೆ ಅಡಿಯಲ್ಲಿ ಮಹಿಳೆಯರಿಗೆ ಕರ್ನಾಟಕದಾದ್ಯಂತ ಸಾರಿಗೆ ವ್ಯವಸ್ಥೆಯಲ್ಲಿ ಪ್ರಯಾಣಿಸಲು ಉಚಿತ ಸೌಲಭ್ಯ ಕಲ್ಪಿಸಿದ್ದು, ಕಲಬುರಗಿ ಜಿಲ್ಲೆಯ ಎಲ್ಲ ತಾಲೂಕು ಒಳಗೊಂಡಂತೆ ಪ್ರತಿದಿನ ಒಟ್ಟು 1.87 ಲಕ್ಷ ಜನ ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆ ಅಡಿಯಲ್ಲಿ ಪ್ರಯಾಣ.ಮಾಡಿರುತ್ತಾರೆ ಸದರಿ ಪ್ರಯಾಣಿಕರಿಂದ ಪ್ರತಿ ದಿನ ಸರಾಸರಿ ರೂಪಾಯಿ 61.65 ಲಕ್ಷ ಸಾರಿಗೆ ಆದಾಯ ಸಂದಾಯವಾಗುತ್ತದೆ ಶಕ್ತಿ ಯೋಜನೆ ಜಾರಿಯಾಗಿದ್ದಾಗಿನಿಂದ ಈವರೆಗೆ 11 ಕೋಟಿ 74 ಲಕ್ಷ ಮಹಿಳೆಯರು ಪ್ರಯಾಣ ಮಾಡಿದರು. 387 ಕೋಟಿ 78 ಲಕ್ಷ ಆದಾಯ ಸಂಧಾಯವಾಗಿದೆ ಎಂದರು.

ಜಿಲ್ಲಾ ಸದಸ್ಯರುಗಳು ಮಾತನಾಡಿ, ಚಿಂಚೋಳಿಯಿಂದ ಕುಂಚಾವರ ಐ.ಟಿ.ಐ. ಕಾಲೇಜಿನ್ ವಿದ್ಯಾರ್ಥಿಗಳು ಮಹಿಳೆಯರು ವಿದ್ಯಾರ್ಥಿಗಳಿ ಮಧ್ಯಾಹ್ನ ಬಸ್‌ಗಳು ಇಲ್ಲ ಅವರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು

ಅಧ್ಯಕ್ಷ ಮಾತನಾಡಿ ವಿದ್ಯಾರ್ಥಿಗಳು ಎಲ್ಲಿ ಬಸ್‌ನ್ ಕೂರತೆಗಳು ಇವೆ ಅಲ್ಲಿ ಬಸ್‌ಗಳ ಸೌಲಭ್ಯ ಕಲ್ಪಿಸಬೇಕೆಂದು ಸೂಚನೆ ನೀಡಿದರು

ಪ್ರತಿ ತಿಂಗಳು 10 ಕೆ.ಜಿ ಅಕ್ಕಿ ವಿತರಿಸಲಾಗುತ್ತದೆ ಅಂದರಂತೆ ಫೆಬ್ರುವರಿ 5 ಕೆ.ಜಿ. ಅಕ್ಕಿ ವಿತರಿಸಲಾಗಿದೆ ಮಾರ್ಚ 7 ರಂದು ಅಕ್ಕಿಗಳು ಬಂದಿವೆ ಮಾರ್ಚ ತಿಂಗಳನಲ್ಲಿ 15 ಕೆ.ಜಿ. ಅಕ್ಕಿ ವಿತರಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

# ತಾಯಿ ಮರಣ ನಿಯಂತ್ರಣಕ್ಕೆ ಆರೋಗ್ಯ ಅರಿವು ಮುಖ್ಯ:ಡಾ.ಉಮಾ ದೇಶಮುಖ

ಬೀದರ : ಮಾ.11: ತಾಯಿ ಮರಣ ನಿಯಂತ್ರಣಕ್ಕೆ ಸುಶಿಕ್ಷಿತ ಮಹಿಳಾ ವರ್ಗ ತಮ್ಮ ಸುತ್ತಲೂ ಉತ್ತಮ ಆರೋಗ್ಯಕರ ಜೀವನದ ಬಗ್ಗೆ ಜಾಗೃತಿ ಮೂಡಿಸಬೇಕಾದ ಅಗತ್ಯವಿದೆಯೆಂದು ಖ್ಯಾತ ಸ್ತ್ರೀರೋಗ ತಜ್ಞೆ ಡಾ.ಉಮಾ ದೇಶಮುಖ ಅಭಿಪ್ರಾಯಪಟ್ಟರು.

ರಂಗಮಂದಿರದಲ್ಲಿ ಜಿಲಾಡಳಿತ ಆಯೋಜಿಸಿದ ಮಹಿಳೆಯರಿಂದ ಮಹಿಳೆಯರಿಗಾಗಿ ವಿಶೇಷ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕರಾಗಿ ಮಾತನಾಡಿದರು. ಜಿಲ್ಲಾಡಳಿತ ಹಮ್ಮಿಕೊಂಡ ಈ ಕಾರ್ಯಕ್ರಮದಲ್ಲಿ ಎಲ್ಲ ಮಹಿಳೆಯರು ಸುಶಿಕ್ಷಿತರಿದ್ದಾರೆ. ಆರೋಗ್ಯಕರ ಜೀವನದ ಬಗ್ಗೆ ಅರಿವು ಇದೆ. ಎಲ್ಲರೂ ತಾಯಿ ಮರಣ ನಿಯಂತ್ರಿಸುವಲ್ಲಿ ಜಾಗೃತಿ ಮೂಡಿಸಬೇಕೆಂದರು.

ಹೆಣ್ಣು ಮಕ್ಕಳು ತಮ್ಮ ಕುಟುಂಬದೊಂದಿಗೆ ತಮ್ಮ ಆರೋಗ್ಯ ಕಾಳಜಿ ವಹಿಸಬೇಕು. ಅಲ್ಲದೇ ಇತ್ತೀಚಿಗೆ ಗರ್ಭಕಂಠ ಕ್ಯಾನ್ಸರ್ ಸಹ ಆಗುತ್ತಿದ್ದು, ಗರ್ಭಕಂಠ ಕ್ಯಾನ್ಸರ್ ತಡೆಯಬೇಕಾದರೆ 9 ರಿಂದ 14 ಮಕ್ಕಳಿಗೆ ಎರಡು ಲಸಿಕೆಗಳನ್ನು ತೆಗೆದುಕೊಳ್ಳಬೇಕು ಹಾಗೂ 14 ರಿಂದ 45 ವರ್ಷದವರೆಗಿನವರಿಗೆ ಮೂರು ಲಸಿಕೆಗಳನ್ನು ತೆಗೆದುಕೊಳ್ಳಬೇಕೆಂದರು.

ಹೆಣ್ಣುಮಕ್ಕಳು ಗರ್ಭಿಣಿಯಾಗುವ ಮುಂಚಿತವಾಗಿ, ಗರ್ಭಿಣಿಯಾದ ಮೇಲೆ ವೈದ್ಯರ ಸಲಹೆ ಮೇರೆಗೆ ಆರೈಕೆಯೊಂದಿಗೆ ಕುಟುಂಬದವರು ಕೂಡ ಆರೋಗ್ಯ ಕಡೆ ಗಮನವಹಿಸಬೇಕು. ಗರ್ಭಿಣಿಯರಿಗೆ ಸರ್ಕಾರದಿಂದ ಸಾಕಷ್ಟು ಸವಲತ್ತುಗಳು ನೀಡುತ್ತಿದ್ದು, ಈ ಕುರಿತು ಆಶಾ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿದಾಗ ಅಗತ್ಯ ಮಾಹಿತಿ ನೀಡತಕ್ಕದ್ದು, ಆರೋಗ್ಯ ಸಮಸ್ಯೆ ಇದ್ದರೆ ಯಾವುದೇ ಮುಜುಗರ ಇಲ್ಲದೇ ವೈದ್ಯರಿಗೆ ತಿಳಿಸಿ ಚಿಕಿತ್ಸೆ ಪಡೆದರೆ ನಾವು ತಾಯಿ ಮರಣ ಪ್ರಮಾಣವನ್ನು ಕಡಿಮೆ ಮಾಡಬಹುದಾಗಿದೆ ಎಂದು ಡಾ.ಉಮಾ ದೇಶಮುಖ ತಿಳಿಸಿದರು. ಇಂಜಿನೀಯರಿಂಗ ಕ್ಷೇತ್ರದಲ್ಲಿ ಸಂಶೋಧಕಿಯಾಗಿರುವ ಶೈನಿ ಪ್ರದೀಪ ಗುಂಟಿ ಅವರು ಮಾತನಾಡಿ, ಮಹಿಳೆಯರು ನಗುವಿನಲ್ಲಿ ಈ ಜಗತ್ತಿನ ನೋವುಗಳನ್ನು ಭರಿಸುವ ಶಕ್ತಿಯಿದೆ. ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಕಾಲಕಾಲಕ್ಕೆ ವೈದ್ಯರ ಸಲಹೆ ಪಡೆಯಬೇಕೆಂದರು.

ತಾಯಿಯು ಗಂಡು ಹೆಣ್ಣು ಎಂಬ ತಾರತಮ್ಯ ಮಾಡದೇ ಇಬ್ಬರನ್ನು ಒಂದೇ ರೀತಿಯಾಗಿ ಬೆಳೆಸಬೇಕು. ಹೆಣ್ಣು ಮಕ್ಕಳನ್ನು ಗೌರವಿಸುವಂತೆ ಗಂಡು ಮಕ್ಕಳಿಗೆ ಕಲಿಸಬೇಕೆಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.